22 ವರ್ಷಗಳಿಂದ ದೆಹಲಿಯಲ್ಲಿ ಪ್ರಕಟವಾಗುತ್ತಿರುವ ಪ್ರಪ್ರಥಮ ರಾಷ್ಟ್ರೀಯ ಕನ್ನಡ ದಿನಪತ್ರಿಕೆ

# ದೆಹಲಿ ವಾರ್ತೆ

www.dehalivaarthe.com

EDITION: NEW DELHI / CIRCULATION IN U.P. & HARYANA | EDITOR : K.R. RENU | RNI No. DELKAN/2003/10363 | ಪುಟ 8 | ಸಂಪುಟ 22 | ಸಂಚಿಕೆ 306 | ನವದೆಹಲಿ | ಬೆಲೆ ₹10 | ಮೇ 12, 2025, ಸೋಮವಾರ

# ಪಹಲ್ಗಾಮ್‌ನಲ್ಲಿ ಸಿಲುಕಿದ 177 ಜನರನ್ನು ತಾಯ್ನಾಡಿಗೆ ತಲುಪಿಸಿದ ಆಪದ್ಬಾಂಧವ ಕಾರ್ಮಿಕ ಸಚಿವ ಸಂತೋಷ್ ಲಾಡ್



**ಕಳೆದ ಎರಡು ದಶಕಗಳಿಂದ ಕಾಣೆಯಾದ ಹೊಸಪೇಟೆ ಮೂಲದ ಸಾಕಮ್ಮ ಎಂಬ ಮಹಿಳೆ ದೂರದ ಉತ್ತರಾಖಂಡದಲ್ಲಿ ಸಿಲುಕಿಕೊಂಡಿರುವ ಸಮಾಚಾರ ತಿಳಿದು, ಅವಳನ್ನು ಮರಳಿ ಕರೆತರಲು ಸಮಾಜ ಕಲ್ಯಾಣ ಇಲಾಖೆಯ ಅಧಿಕಾರಿಗಳೊಂದಿಗೆ ತೆರಳಿ ಮಹಿಳೆಯನ್ನು ಸುರಕ್ಷಿತವಾಗಿ ಕರೆತಂದು ಮನೆ ಸೇರಿಸಿದ ಕೀರ್ತಿಯೂ ಸಂತೋಷ್ ಲಾಡ್ ಅವರಿಗೆ ಸಲ್ಲುತ್ತದೆ.**

**ಇದೊಂದು ಅತ್ಯಂತ ಸೂಕ್ಷ್ಮ ಮತ್ತು ಜವಾಬ್ದಾರಿಯುತ ಹೊಣೆಗಾರಿಕೆಯಾಗಿದ್ದು, ಎಲ್ಲವನ್ನೂ ಸಮರ್ಥವಾಗಿ ನಿಭಾಯಿಸಿಕೊಂಡು, ಎಲ್ಲರನ್ನೂ ಸುರಕ್ಷಿತವಾಗಿ ಮರಳಿ ಕರೆತಂದಿರುವ ಶ್ರೇಯಸ್ಸು ಸಚಿವ ಸಂತೋಷ್ ಲಾಡ್ ಅವರದು.**

ಜಮ್ಮು-ಕಾಶ್ಮೀರದ ಪಹಲ್ಗಾಮ್‌ನಲ್ಲಿ ನಡೆದ ಉಗ್ರರ ದಾಳಿಯಲ್ಲಿ ಕರ್ನಾಟಕದ ಮೂವರು ಮೃತಪಟ್ಟಿದ್ದು, ಇನ್ನೂ ನೂರಾರು ಪ್ರಯಾಣಿಕರು ಅಲ್ಲಿ ಸಿಲುಕಿದ್ದರು. ಎಲ್ಲರನ್ನೂ ಮರಳಿ ಕರ್ನಾಟಕ್ಕೆ ಕರೆತರಲು ಸಚಿವ ಸಂತೋಷ್ ಲಾಡ್ ಅವರ ತಂಡ ಮೂರು ದಿನಗಳ ವರೆಗೆ ಶ್ರೀನಗರದಲ್ಲಿ ಬೀಡು ಬಿಟ್ಟು ಸಹಾಯವಾಣಿ ಆರಂಭಿಸಿತು.

- ಕರ್ನಾಟಕದ ಸಚಿವ ಸಂತೋಷ್ ಲಾಡ್ ಅವರು ಶ್ರೀನಗರಕ್ಕೆ ಬಂದು ಸಹಾಯವಾಣಿ ಆರಂಭಿಸಿದ ಕೂಡಲೇ ಸುಮಾರು 200ಕ್ಕೂ ಹೆಚ್ಚು ಪ್ರವಾಸಿಗರು ಅವರನ್ನು ಸಂಪರ್ಕಿಸಿದರು. ಸಚಿವರೂ ಕೂಡ ಪ್ರವಾಸಿಗರನ್ನು ಭೇಟಿಮಾಡಿ ಎಲ್ಲರಿಗೂ ಧೈರ್ಯ ತುಂಬಿ, 177 ಪ್ರವಾಸಿ ಕನ್ನಡಿಗರನ್ನು ಸುರಕ್ಷಿತವಾಗಿ ಕರ್ನಾಟಕ್ಕೆ ಕರೆದೊಯ್ಯುವ ಭರವಸೆಯೊಂದಿಗೆ ಎಲ್ಲರನ್ನೂ ವಿಮಾನಗಳ ಮೂಲಕ ಕರೆತರುವ ಕ್ರಮ ಕೈಕೊಂಡು, ಎಲ್ಲರನ್ನೂ ನೆಲೆ ತಲುಪಿಸಿದ್ದಾರೆ.
- ಪಹಲ್ಗಾಮ್‌ನಲ್ಲಿ ಸಿಲುಕಿದ್ದ ಎಲ್ಲ ಕನ್ನಡಿಗರನ್ನು ರಾಜ್ಯಕ್ಕೆ ಮರಳಿಸುವಲ್ಲಿ ಸಚಿವ ಸಂತೋಷ್ ಲಾಡ್ ರ ಪಾತ್ರ ಮಹತ್ವದ್ದು.
- ಹೌದು, ಹೊರರಾಜ್ಯ ಮತ್ತು ವಿದೇಶಗಳಲ್ಲಿ ಕನ್ನಡಿಗರು ಯಾವುದೇ ಆಪತ್ತಿನಲ್ಲಿ ಸಿಲುಕಿದರೆ, ಅವರನ್ನು ಸುರಕ್ಷಿತವಾಗಿ ನೆಲೆ ಸೇರಿಸುವ ಹೊಣೆಗಾರಿಕೆಯನ್ನು ಅತ್ಯಂತ ಸಮರ್ಥವಾಗಿ ನಿರ್ವಹಿಸುತ್ತ ಬಂದಿರುವ ಸಚಿವ ಸಂತೋಷ್ ಲಾಡ್ ಅವರಿಗೆ ಈ ಬಾರಿಯೂ ಕಾಶ್ಮೀರದಲ್ಲಿ ನಡೆದ ಉಗ್ರರ ದಾಳಿಯಲ್ಲಿ ಮೃತಪಟ್ಟವರ ಶವಗಳನ್ನು ಮತ್ತು ಅಲ್ಲಿ ಸಿಲುಕಿಕೊಂಡ ಪ್ರವಾಸಿಗರನ್ನು ಸುರಕ್ಷಿತವಾಗಿ ಕರೆತರುವ ಹೊಣೆಗಾರಿಕೆಯನ್ನು ಸರ್ಕಾರ ಸಂತೋಷ್ ಲಾಡ್ ಅವರಿಗೇ ವಹಿಸಿತ್ತು.
- ಭೂಲೋಕದ ಸ್ವರ್ಗವೆಂದೇ ಕರೆಯುವ ಕಾಶ್ಮೀರದ ಪಹಲ್‌ಗಾಮ್‌ಗೆ ಹನಿಮೂನ್- ಪ್ರವಾಸಕ್ಕೆ ಹೋದವರ ಮೇಲೆ ಉಗ್ರರು




ಗುಂಡಿನ ದಾಳಿ ನಡೆಸಿ ಕರ್ನಾಟಕ ಮೂಲದ ಮೂವರು ಮೃತಪಟ್ಟಿದ್ದು, ಹಲವರು ಗಾಯ ಗೊಂಡಿರುವ ದುರ್ಘಟನೆ ನಡೆದಿದೆ. ಮೂವರು ಕನ್ನಡಿಗರೂ ಈ ಘಟನೆಯಲ್ಲಿ ಮೃತಪಟ್ಟಿದ್ದು, ಅವರ ಮೃತದೇಹಗಳನ್ನು ಹಾಗೂ ಕುಟುಂಬ ದವರನ್ನು ಮರಳಿ ಕರ್ನಾಟಕಕ್ಕೆ ಕಳಿಸುವ ಮಹತ್ತರ ಜವಾಬ್ದಾರಿ ನಿರ್ವಹಿಸಿರುವ ಸಚಿವ ಸಂತೋಷ್ ಲಾಡ್ ಅವರು, ಕಾಶ್ಮೀರ ಈಗ ಸ್ವರ್ಗವಾಗಿ ಉಳಿದಿಲ್ಲ ಅಕ್ಷರಶಃ ಸ್ಮಶಾನವಾಗಿದೆ ಎಂದು ಅಲ್ಲಿನ ಸ್ಥಿತಿಯನ್ನು ವಿವರಿಸುತ್ತಾರೆ.

- ಇದೊಂದು ಅತ್ಯಂತ ಸೂಕ್ಷ್ಮ ಮತ್ತು ಜವಾಬ್ದಾರಿಯುತ ಹೊಣೆಗಾರಿಕೆಯಾಗಿದ್ದು, ಎಲ್ಲವನ್ನೂ ಸಮರ್ಥವಾಗಿ ನಿಭಾಯಿಸಿಕೊಂಡು, ಎಲ್ಲರನ್ನೂ ಸುರಕ್ಷಿತವಾಗಿ ಮರಳಿ ಕರೆತಂದಿರುವ ಶ್ರೇಯಸ್ಸು ಸಚಿವ ಸಂತೋಷ್ ಲಾಡ್ ಅವರದು.
- ದೇಶ-ವಿದೇಶಗಳಲ್ಲಿ ಏನೇ ಅನಾಹುತಗಳು ಸಂಭವಿಸಿದರೂ ಅಲ್ಲಿ ಸಿಲುಕಿರುವ ಕನ್ನಡಿಗರನ್ನು ಮರಳಿ ಕರೆತರುವ ಸಮರ್ಥ ಸೇನಾನಿ ಸಚಿವ ಸಂತೋಷ್ ಲಾಡ್ ಎಂದು ಹೇಳಬಹುದು.
- ಉಕ್ರೇನ್ ಮತ್ತು ರಷ್ಯಾ ಯುದ್ಧ ಆರಂಭಗೊಂಡಾಗ, ಉಕ್ರೇನ್‌ನಲ್ಲಿ ಸಿಲುಕಿರುವ ಕನ್ನಡಿಗರನ್ನು ಯಶಸ್ವಿಯಾಗಿ ಮರಳಿ ಕರೆತರಲು ದೆಹಲಿ ರಾಯಭಾರಿ ಕಚೇರಿಯಲ್ಲಿ ಕುಳಿತು ಎಲ್ಲರನ್ನೂ ಸುರಕ್ಷಿತವಾಗಿ ಕರೆತಂದ ಶ್ರೇಯಸ್ಸು ಸಂತೋಷ್ ಲಾಡ್ ಅವರಿಗೆ ಸಲ್ಲುತ್ತದೆ.
- ಅದೇ ರೀತಿ ಹಮಾಸ್ ಮತ್ತು ಇಸ್ರೇಲ್ ಯುದ್ಧ ಆರಂಭಗೊಂಡಾಗಲೂ ಕೂಡ ಇಸ್ರೇಲ್‌ನ ವಿವಿಧ ಸಾಫ್ಟ್‌ವೇರ್ ಮತ್ತಿತರ ಕಂಪನಿಗಳಲ್ಲಿ ಕೆಲಸಕ್ಕಿದ್ದ ಕನ್ನಡಿಗರನ್ನು ದೆಹಲಿ ರಾಯಭಾರ ಕಚೇರಿಯಲ್ಲಿ ಕುಳಿತು ಪತ್ತೆ ಮಾಡಿ, ರಾಯಭಾರಿ ಕಚೇರಿ ಮೂಲಕ ಅವರನ್ನು ಸುರಕ್ಷಿತವಾಗಿ ಇದೇ ಸಂತೋಷ್ ಲಾಡ್ ಅವರೇ ಮರಳಿ ಕರೆತಂದಿದ್ದನ್ನು ಇಲ್ಲಿ ಸ್ಮರಿಸಬಹುದು.
- ಅಷ್ಟೇ ಏಕೆ ಕಳೆದ ಎರಡು ದಶಕಗಳಿಂದ ಕಾಣೆಯಾದ ಹೊಸಪೇಟೆ ಮೂಲದ ಸಾಕಮ್ಮ ಎಂಬ ಮಹಿಳೆ ದೂರದ ಉತ್ತಾರಖಂಡದಲ್ಲಿ ಸಿಲುಕಿಕೊಂಡಿದ್ದ ಸಮಾಚಾರ ತಿಳಿದು, ಅವಳನ್ನು ಮರಳಿ ಕರೆತರಲು ಸಮಾಜ ಕಲ್ಯಾಣ ಇಲಾಖೆಯ ಅಧಿಕಾರಿಗಳೊಂದಿಗೆ ತೆರಳಿ ಮಹಿಳೆಯನ್ನು ಸುರಕ್ಷಿತವಾಗಿ ಕರೆತಂದು ಮನೆ ಸೇರಿಸಿದ ಕೀರ್ತಿಯೂ ಸಂತೋಷ್ ಲಾಡ್ ಅವರಿಗೆ ಸಲ್ಲುತ್ತದೆ.
- ಸಂತೋಷ್ ಲಾಡ್ ಅವರು ಒಂದು ರೀತಿಯಲ್ಲಿ ಆಪತ್ಬಾಂದವ ಮತ್ತು ಟ್ರಬಲ್ ಶೂಟರ್ ಎನ್ನಬಹುದು. ವಿಶೇಷವಾಗಿ ಹೊರರಾಜ್ಯ ಮತ್ತು ಹೊರದೇಶಗಳಲ್ಲಿ ತೊಂದರೆಗೆ ಸಿಲುಕಿದವರನ್ನು ಮರಳಿ ತರುವ ಚಾಕಚಕ್ಯತೆ ಅವರಲ್ಲಿದೆ. ಆದ್ದರಿಂದಲೇ ಪ್ರತಿಬಾರಿಯೂ ರಾಜ್ಯ ಸರ್ಕಾರ ಇಂಥ ಆಪತ್ ಸಂದರ್ಭದಲ್ಲಿ ಸಚಿವ ಸಂಪುಟ ಸಭೆಯಲ್ಲಿ ಅವರನ್ನು ಎದುರಲ್ಲಿ ಕೂರಿಸಿಕೊಂಡೇ ಎಲ್ಲ ಮಾಹಿತಿಗಳನ್ನು ತರಿಸಿಕೊಂಡು ಅವರಿಗೆ ನೀಡಿ, ಮುಂದಿನ ಕಾರ್ಯಾಚರಣೆಯ ಹೊಣೆಗಾರಿಕೆಯನ್ನು ಸಂತೋಷ್ ಲಾಡ್ ಅವರಿಗೆ ವಹಿಸುತ್ತ ಬಂದಿದ್ದು, ಸಂತೋಷ್ ಲಾಡ್ ಅವರೂ ಕೂಡ ತಮಗೆ ಸರ್ಕಾರ ವಹಿಸಿರುವ ಜವಾಬ್ದಾರಿಗೆ ಎಂದಿಗೂ ಚ್ಯುತಿ ಬಾರದಂತೆ ನಿರ್ವಹಿಸುವಲ್ಲಿ ಯಶಸ್ವಿಯಾಗುತ್ತ ಬಂದಿರುವುದು ಅವರ ಈ ಕಾರ್ಯಾಚರಣೆ ಬಗ್ಗೆ ವಿಶ್ವಾಸ ಗಟ್ಟಿಗೊಳಿಸಿದ್ದಾರೆ.



## ನಿತ್ಯ ಪಂಚಾಂಗ 12.05.2025 ಸೋಮವಾರ



ಶ್ರೀ ವಿಶ್ವಾವಸು ನಾಮ ಸಂವತ್ಸರ, ಉತ್ತರಾಯಣ ವಸಂತ ಋತು ಚಾಂದ್ರಮಾನ, ವೈಶಾಖ ಶುದ್ಧ ಪೂರ್ಣಿಮಾ, ವಿಶಾಖ ನಕ್ಷತ್ರ, ಬುದ್ಧ ಪೂರ್ಣಿಮಾ, ಆಗೀ ಹುಣ್ಣಿಮೆ, ಅರ್ಧನಾರೀಶ್ವರ ವ್ರತ, ಕೂರ್ಮ ಜಯಂತಿ, ದ್ರೌಪದಮ್ಮ ಕರಗ

| ದಿನ | ರಾಹುಕಾಲ | ಯಮಗಂಡ | ಗುಳಿಕಕಾಲ |
|---|---|---|---|
| ಭಾನು | 4.30 – 6.00 | 12.00 – 1.30 | 3.00 – 4.30 |
| ಸೋಮ | 7.30 – 9.00 | 10.30 –12.00 | 1.30 – 3.00 |
| ಮಂಗಳ | 3.00 – 4.30 | 9.00 –10.30 | 12.00 – 1.30 |
| ಬುಧ | 12.00 – 1.30 | 7.30 – 9.00 | 10.30 –12.00 |
| ಗುರು | 1.30 – 3.00 | 6.00 – 7.30 | 9.00 –10.30 |
| ಶುಕ್ರ | 10.30 –12.00 | 3.00 – 4.30 | 7.30 – 9.00 |
| ಶನಿ | 9.00 –10.30 | 1.30 – 3.00 | 6.00 – 7.30 |

### ಯುದ್ಧ ನಿಲ್ಲಿಸಿ ಎನ್ನಲು ಅವನ್ಯಾರು ಬಯೋತ್ಪಾದನೆ ನಾಶ ನಮ್ಮ ಗುರಿ

# ಪಾಕ್ ವಿರುದ್ಧದ ಯುದ್ಧ ಕೈಬಿಟ್ಟಿದ್ದು ತಪ್ಪು: ಹೊರಟ್ಟಿ ಸಿಡಿಮಿಡಿ



**ಬೆಳಗಾವಿ, ಮೇ 11:** ಯಾರದ್ದೋ ಮಾತು ಕೇಳಿ ಭಾರತ ಯುದ್ಧ ನಿಲ್ಲಿಸಬಾರದಿತ್ತು ಎಂದು ಸಭಾಪತಿ ಬಸವರಾಜ ಹೊರಟ್ಟಿ ಹೇಳಿದ್ದಾರೆ. ಭಾರತ–ಪಾಕಿಸ್ತಾನ ಕದನ ವಿರಾಮದ ಬಳಿಕ ಮತ್ತೆ ಶತ್ರು ರಾಷ್ಟ್ರ ಬಾಲ ಬಿಚ್ಚಿದ ವಿಚಾರಕ್ಕೆ ಬೆಳಗಾವಿಯ ಹುಕ್ಕೇರಿ ಪಟ್ಟಣದಲ್ಲಿ ಪ್ರತಿಕ್ರಿಯಿಸಿದ ಅವರು, ಪಾಕಿಸ್ತಾನದವರು ಸಾಯುವವರೆಗೂ ವೈರಿಗಳೇ. ಭಯೋತ್ಪಾದಕರನ್ನು ನಾಶ ಮಾಡಬೇಕು. ಈ ಯುದ್ಧದಲ್ಲಿ ಪಾಕಿಸ್ತಾನವನ್ನ ನಾಶ ಮಾಡಬೇಕಿತ್ತು ಎಂದು ಹೇಳಿದರು.ಯಾರದ್ದೋ ಮಾತು ಕೇಳಿ ಯುದ್ಧ ನಿಲ್ಲಿಸಬಾರದಿತ್ತು. ಮಧ್ಯಸ್ಥಿಕೆ ವಹಿಸುವುದ್ದಕ್ಕೆ ಟ್ರಂಪ್ ಯಾರು?. ಯುದ್ಧ ಕೈಬಿಟ್ಟಿದ್ದು ತಪ್ಪು ಎಂದ ಹೊರಟ್ಟಿ ಸಿಡಿಮಿಡಿಗೊಂಡರು. ಅಮೆರಿಕದ ಮಧ್ಯಸ್ಥಿಕೆಯಲ್ಲಿ ನಡೆದ ಮಾತುಕತೆಯ ನಂತರ ಭಾರತ ಮತ್ತು ಪಾಕಿಸ್ತಾನ ತಕ್ಷಣದಿಂದಲೇ ಜಾರಿಗೆ ಬರುವಂತೆ ಸಂಪೂರ್ಣ ಕದನ ವಿರಾಮಕ್ಕೆ ಒಪ್ಪಿಕೊಂಡಿವೆ ಎಂದು ನಿನ್ನೆ ಡೊನಾಲ್ಡ್ ಟ್ರಂಪ್ ಟ್ವೀಟ್ ಮಾಡಿದ್ದರು. ಪಾಕಿಸ್ತಾನ ಕೂಡ ಈ ಒಪ್ಪಂದವನ್ನು ದೃಢಪಡಿಸಿದ್ದು, ಶಾಂತಿ ಮತ್ತು ಭದ್ರತೆಗಾಗಿ ಶ್ರಮಿಸುವುದಾಗಿ ಹೇಳಿದೆ. ಆದರೆ ಇದಾದ ಕೇವಲ ಮೂರು ಗಂಟೆಯಲ್ಲಿ ಪಾಪಿ ಪಾಕ್ ಮತ್ತೆ ಡ್ರೋನ್ ದಾಳಿ ನಡೆಸುವ ಮೂಲಕ ಕದನ ವಿರಾಮವನ್ನು ಉಲ್ಲಂಘಿಸಿತ್ತು.

# ಪಾಕ್ ಗುಳ್ಳೆನರಿ ಬುದ್ಧಿಗೆ ತಕ್ಕ ಶಾಸ್ತಿಮಾಡಲು ಭಾರತೀಯ ಸೇನೆಗೆ ಮುಕ್ತ ಅಧಿಕಾರ: ಸಚಿವ ಪ್ರಲ್ಹಾದ್ ಜೋಶಿ



**ಹುಬ್ಬಳ್ಳಿ, ಮೇ 11:** ಕದನ ವಿರಾಮ ಘೋಷಣೆಯಾದ ಮೇಲೂ ಪಾಕಿಸ್ತಾನ ದಾಳಿ ಮುಂದುವರಿಸಿ ಇಬ್ಬಗೆ ನೀತಿ ಪ್ರದರ್ಶಿಸಿದ್ದು, ಭಾರತೀಯ ಸೇನೆ ಇದಕ್ಕೆ ಪ್ರತ್ಯುತ್ತರ ಕೊಡುತ್ತದೆ. ಪಾಕ್ ವಿರುದ್ಧದ ದಾಳಿಗೆ ಕೇಂದ್ರ ಸರ್ಕಾರ ಸೇನೆಗೆ ಮುಕ್ತ ಅಧಿಕಾರ, ಸ್ವಾತಂತ್ರ್ಯ ನೀಡಿದೆ ಎಂದು ಕೇಂದ್ರ ಆಹಾರ ಮತ್ತು ನಾಗರೀಕರ ಸರಬರಾಜು ಸಚಿವ ಪ್ರಹ್ಲಾದ ಜೋಶಿ ತಿಳಿಸಿದರು. ಮಾಧ್ಯಮದವರೊಂದಿಗೆ ಮಾತನಾಡಿ, ಪಾಕಿಸ್ತಾನ ಯಾವತ್ತೂ ದ್ವಂದ್ವ ನಿಲುವು ಮತ್ತು ಇಬ್ಬಗೆ ನೀತಿ ಅನುಸರಿಸುವಲ್ಲಿ ಎತ್ತಿದ ಕೈ ಎಂಬುದು ಗೊತ್ತೇ ಇದೆ. ಅಲ್ಲದೇ, ಅಲ್ಲಿನ ಮಿಲಿಟರಿ ಪಡೆ ಚುನಾಯಿತ ಸರ್ಕಾರದ ಮಾತು ಕೇಳುವುದಿಲ್ಲ ಎಂಬುದು ಈಗ ಮತ್ತೊಮ್ಮೆ ಸಾಬೀತಾಗಿದೆ ಎಂದು ಪ್ರತಿಕ್ರಿಯಿಸಿದರು. ಪಹಲ್ಗಾಮ್ ಭಯೋತ್ಪಾದನಾ ದಾಳಿಯ ನಂತರ ಗುಳ್ಳೇನರಿ ಬುದ್ಧಿಯ ಪಾಕಿಸ್ತಾನಕ್ಕೆ ಪಾಠ ಕಲಿಸಲು ನಮ್ಮ ಸರ್ಕಾರ ಭಾರತೀಯ ಸೇನೆಗೆ ಮುಕ್ತ ಅವಕಾಶ ನೀಡಿದೆ. ಅದರಂತೆ ಭಾರತೀಯ ಸೇನೆ ಪಾಕಿಸ್ತಾನಕ್ಕೆ ತೀಕ್ಷ್ಣ ಪ್ರತಿಕ್ರಿಯೆ, ಪ್ರತಿಕಾರದಲ್ಲಿ ತೊಡಗಿದೆ. ಬಹು ದೊಡ್ಡ ಸಂಖ್ಯೆಯಲ್ಲಿ ಭಯೋತ್ಪಾದಕರ ನೆಲೆಗಳನ್ನು ಧ್ವಂಸಗೊಳಿಸಿದೆ ಎಂದು ಹೇಳಿದರು.

ಭಾರತೀಯ ಸೇನೆ ಮೊದಲ ದಿನವೇ ಪಾಕಿಸ್ತಾನದ 9 ಕ್ಕಿಂತ ಹೆಚ್ಚು ಭಯೋತ್ಪಾದಕರ ನೆಲೆಗಳನ್ನು ನಾಶಪಡಿಸಿದೆ. ಈ ದಾಳಿಯಿಂದಾಗಿ ದೊಡ್ಡ ಸಂಖ್ಯೆಯಲ್ಲಿ ಭಯೋತ್ಪಾದಕರು ಮತ್ತು ಭಯೋತ್ಪಾದಕ ಕುಟುಂಬಗಳು ಬಲಿಯಾಗಿವೆ. ಸಾಕಷ್ಟು ಭಯೋತ್ಪಾದಕ ಅಡಗುತಾಣಗಳು ಛಿದ್ರವಾಗಿವೆ. ಪ್ರಮುಖ ಉಗ್ರರು ಹತರಾಗಿದ್ದಾರೆ ಎಂದು ತಿಳಿಸಿದರು.

**ಯುದ್ಧವಾಗಿ ಪರಿಗಣಿಸುವ ಕಠಿಣ ನಿಲುವು:** ದೇಶದಲ್ಲಿ ಭಯೋತ್ಪಾದನೆ ಸಂಪೂರ್ಣ ನಿರ್ಮೂಲನೆಗೆ ಪಣ ತೊಟ್ಟ ಕೇಂದ್ರ ಸರ್ಕಾರ ಇದೇ ಮೊದಲ ಬಾರಿಗೆ ಅತ್ಯಂತ ಕಠೋರ ನಿಲುವು ತೆಗೆದುಕೊಂಡಿದೆ. ಪಾಕ್ ಕದನ ವಿರಾಮಕ್ಕೂ ಮೊದಲೇ ಭಯೋತ್ಪಾದನೆ ಯನ್ನು ಯುದ್ಧವಾಗಿ ಪರಿಗಣಿಸು ವಂತಹ ಅಭೂತಪೂರ್ವ ನಿರ್ಣಯ ಕೈಗೊಂಡಿದೆ ಎಂದು ಹೇಳಿದರು.

**ಕದನ ವಿರಾಮ ಪ್ರಸ್ತಾಪಿಸಿದ್ದ ಪಾಕ್:** ಪಾಕಿಸ್ತಾನದ ಡಿಜಿಎಂಒ ಭಾರತದ ಮಿಲಿಟರಿ ಕಾರ್ಯಾಚರಣೆಗಳ ಮಹಾ ನಿರ್ದೇಶಕರಿಗೆ ಫೋನ್ ಮಾಡಿ ಕದನ ವಿರಾಮಕ್ಕೆ ವಿನಂತಿ ಮಾಡಿದ್ದರು. ಆದರೀಗ ಅದನ್ನು ಉಲ್ಲಂಘಿಸಿದ್ದಾರೆ. ಯಾವತ್ತೂ ಭಯೋತ್ಪಾದಕರು ಮತ್ತು ಭಯೋತ್ಪಾದಕ ಸಂಘಟನೆಗಳನ್ನು ಪೋಷಿಸಿಕೊಂಡು ಬಂದ ಪಾಕ್‌ಗೆ ಭಾರತೀಯ ಸೇನೆ ಪ್ರತ್ಯುತ್ತರ ಕೊಡುತ್ತದೆ ಎಂದು ಹೇಳಿದರು. ಮೋದಿ ಪ್ರಧಾನಿಯಾದ ಮೇಲೆ ತಹಬದಿಗೆ ನರೇಂದ್ರ ಮೋದಿ ಅವರು ಪ್ರಧಾನಿಯಾದ ಮೇಲೆ ದೇಶದಲ್ಲಿ ಭಯೋತ್ಪಾದನೆ ನಿಗ್ರಹಿಸಲಾಗಿದೆ. 1980ರ ನಂತರ ಪಹಲ್ಗಾಮ್‌ಗಿಂತ ದೊಡ್ಡ ಪ್ರಮಾಣದಲ್ಲಿ ಭಯೋತ್ಪಾದನಾ ಚಟುವಟಿಕೆ ನಡೆಯುತ್ತಿದ್ದವು. ಆದರೆ, ಈಗ ಅಂಥದ್ದಕ್ಕೆಲ್ಲ ಕಡಿವಾಣ ಹಾಕಲಾಗಿದೆ ಎಂದರು. ಹಿಂದೆಲ್ಲಾ ದೊಡ್ಡಪ್ರಮಾಣದ ಭಯೋತ್ಪಾದನೆ ನಡೆದಾಗಲೂ ಸೌಮ್ಯ ಪ್ರತಿಕ್ರಿಯೆ ನೀಡುತ್ತಿದ್ದ ಭಾರತ ಇದೇ ಮೊದಲ ಬಾರಿ ಪಾಕ್‌ಗೆ ನುಗ್ಗಿ ಹೊಡೆಯುತ್ತಿದ್ದೇವೆ. ಈ ಬಾರಿ ಮೊದಲ ದಿನವೇ 9ಕ್ಕಿಂತ ಹೆಚ್ಚು ಭಯೋತ್ಪಾದನಾ ನೆಲೆಗಳನ್ನು, ಭಯೋತ್ಪಾದಕರ ಅಡಗುತಾಣಗಳನ್ನು ಭಾರತ ಧ್ವಂಸಗೊಳಿಸಿದೆ ಎಂದು ಹೇಳಿದರು.

**ಇಡೀ ದೇಶ ಒಂದಾಗಿ ಹೋರಾಡುತ್ತಿದೆ:** ಪಹಲ್ಗಾಮ್ ದಾಳಿಯ ನಂತರ ಇದೇ ಮೊದಲ ಬಾರಿ ಭಯೋತ್ಪಾದನೆ ವಿರುದ್ಧ ಇಡೀ ದೇಶವೇ ಒಂದಾಗಿ ಹೋರಾಡುತ್ತಿದೆ. ಭಾರತೀಯ ಸೇನೆ ಅತ್ಯಂತ ತೀಕ್ಷ್ಣ ಪ್ರತಿಕ್ರಿಯೆ ನೀಡಿದೆ. ಪ್ರತೀಕಾರದ ದಾಳಿಯಲ್ಲಿ ನಮ್ಮ ಕಂದಹಾರ ಪ್ರಕರಣದಲ್ಲಿದ್ದವರು ಮತ್ತು ಪ್ರಮುಖ ಉಗ್ರರನ್ನು, ಅವರ ಕುಟುಂಬಗಳು ಹತರಾಗಿದ್ದಾರೆ. ಭಾರತ ಶಾಂತಿಪ್ರಿಯ ರಾಷ್ಟ್ರ. ಭಾರತೀಯರು ಯಾವತ್ತೂ ಶಾಂತಿಪ್ರಿಯರೇ, ನಾವಾಗಿಯೇ ಯಾವತ್ತೂ ಯಾರ ಮೇಲೂ ದಂಡೆತ್ತಿ ಹೋಗುವುದಿಲ್ಲ. ಆದರೆ, ನಮ್ಮ ಮೇಲೆ ಯಾರಾದರೂ ಬಂದರೆ ಸುಮ್ಮನೆ ಬಿಡುವ ಮಾತೇ ಇಲ್ಲ. ಭಾರತ–ಭಾರತೀಯರಿಗೆ ಅಂತದ್ದೊಂದು ಶಕ್ತಿಯಿದೆ ಎಂದು ಸಚಿವ ಜೋಶಿ ಎಚ್ಚರಿಕೆಯ ಸಂದೇಶ ರವಾನಿಸಿದರು.

# ವಿಶ್ವ ತಾಯಂದಿರ ದಿನ: ಡಿಸಿಎಂ ಶುಭ ಹಾರೈಕೆ



**ಬೆಂಗಳೂರು, ಮೇ 11:** ಇಂದು ವಿಶ್ವ ತಾಯಂದಿರ ದಿನವಾಗಿದ್ದು, ಡಿಸಿಎಂ ಡಿ.ಕೆ.ಶಿವಕುಮಾರ್ ತಮ್ಮ ತಾಯಿಗೆ ವಿಶೇಷ ವಿಡಿಯೋ ಮೂಲಕ ಶುಭ ಹಾರೈಸಿದ್ದಾರೆ. ತಾಯಂದಿರ ದಿನದ ಅಂಗವಾಗಿ ಸೋಷಿಯಲ್ ಮೀಡಿಯಾದಲ್ಲಿ ಅನೇಕರು ತಮ್ಮ ತಾಯಂದಿರಿಗೆ ಶುಭ ಹಾರೈಸುತ್ತಿದ್ದಾರೆ. ಅನೇಕ ಶುಭ ಹಾರೈಕೆಯ ವಿಡಿಯೋ, ಫೋಟೋಗಳು ಹರಿದಾಡುತ್ತಿವೆ.

ಇದರ ಮಧ್ಯೆ ಡಿಕೆಶಿ ಪೋಸ್ಟ್ ಗಮನಸೆಳೆಯುವಂತಿದೆ.ಡಿಕೆ ಶಿವಕುಮಾರ್ ತಮ್ಮ ರಾಜಕೀಯ ಜೀವನದ ಎಷ್ಟೇ ಬ್ಯುಸಿ ಶೆಡ್ಯೂಲ್‌ನಲ್ಲೂ ಆಗಾಗ ತಮ್ಮ ತಾಯಿ ಗೌರಮ್ಮನ ಮನೆಗೆ ಭೇಟಿ ನೀಡಿ ಬರುತ್ತಾರೆ. ತಾಯಿಯೆಂದರೆ ಅವರಿಗೆ ಅಷ್ಟು ಅಕ್ಕರೆ. ಇಂದು ವಿಶ್ವ ತಾಯಂದಿರ ದಿನದ ಅಂಗವಾಗಿ ತಮ್ಮ ಅಮ್ಮನ ಜೊತೆಗಿನ ಪ್ರೀತಿಯ ವಿಡಿಯೋ ವೊಂದನ್ನು ಹಂಚಿ ಕೊಂಡಿದ್ದು ಭಾವುಕ ಸಂದೇಶ ವೊಂದನ್ನೂ ಬರೆದು ಕೊಂಡಿದ್ದಾರೆ. ಇಂದಿಗೂ ನಾನು ಅವಳ ಮಡಿಲಲ್ಲಿ ಮಗುವಾಗಿ ಬಿಡುತ್ತೇನೆ. ಮಾತನಾಡುತ್ತಿದ್ದರೆ ಚಿಂತೆಗಳೆಲ್ಲವನ್ನು ಕಳೆದು ಹಗುರಾಗಿ ಬಿಡುತ್ತೇನೆ. ಹಳೆಯ ನೆನಪುಗಳನ್ನು ಮೆಲುಕು ಹಾಕಿಕೊಂಡು ಭಾವುಕನಾಗಿ ಬಿಡುತ್ತೇನೆ. ನನ್ನ ಶಿಕ್ಷಣಕ್ಕಾಗಿ, ಉತ್ತಮ ಭವಿಷ್ಯಕ್ಕಾಗಿ ಅವಳ ತ್ಯಾಗವನ್ನು ನೆನಪಿಸಿಕೊಳ್ಳುತ್ತೇನೆ. ಶಿವಾಲ್ದಪ್ಪನ ಬೆಟ್ಟದಲ್ಲಿ ನನ್ನ ಹುಟ್ಟಿಗೋಸ್ಕರ ಹರಕೆ ಕಟ್ಟಿಕೊಂಡ ಕತೆ ಕೇಳಿ ಹರ್ಷಪಡುತ್ತೇನೆ. ಇವಳು ನನ್ನ ಪಾಲಿನ ದೇವತೆ, ನನ್ನ ಭಾಗ್ಯದಾತೆ. ಮಮತೆಯ ಸಾಕಾರ ಮೂರ್ತಿ ನನ್ನವ್ವನಿಗೆ ವಿಶ್ವ ತಾಯಂದಿರ ದಿನದ ಹಾರ್ದಿಕ ಶುಭಾಶಯಗಳು. ನಾಡಿನ ಎಲ್ಲಾ ತಾಯಂದಿರಿಗೂ ಪ್ರೀತಿಯ ಶುಭಾಶಯಗಳು ಎಂದಿದ್ದಾರೆ.

# ಟ್ರಂಪ್ ಯುದ್ಧ ವಿರಾಮ ಮಧ್ಯಸ್ಥಿಕೆ ಆಶ್ಚರ್ಯಕರ

## ದಿಢೀರ್ ಬೆಳವಣಿಗೆಗೆ ಸಚಿವ ದಿನೇಶ್ ಗುಂಡೂರಾವ್ ಬೇಸರ



**ಬೆಂಗಳೂರು, ಮೇ 11:** ಭಾರತ ಹಾಗೂ ಪಾಕಿಸ್ತಾನದ ನಡುವೆ ಏರ್ಪಟ್ಟಿದ್ದ ಸಂಘರ್ಷವು ಮುಕ್ತಾಯವಾಗುತ್ತಿದೆ ಎಂದು ನಿಟ್ಟುಸಿರು ಬಿಡುವ ಸಂದರ್ಭದಲ್ಲಿಯೇ ಕರ್ನಾಟಕ ಕಾಂಗ್ರೆಸ್ ಸರ್ಕಾರದ ಪ್ರಭಾವಿ ಸಚಿವರು ಮಾಡಿರುವ ಟ್ವೀಟ್ ಇದೀಗ ಭಾರೀ ಚರ್ಚೆಗೆ ಕಾರಣವಾಗಿದೆ. ಭಾರತ ಹಾಗೂ ಪಾಕಿಸ್ತಾನದ ನಡುವೆ ಸಂಘರ್ಷ ಏರ್ಪಟ್ಟಾಗಿನಿಂದಲೂ ಮುಖ್ಯಮಂತ್ರಿ ಸಿದ್ದರಾಮಯ್ಯ ಅವರು ಹಾಗೂ ಕಾಂಗ್ರೆಸ್ ಕೆಲವು ನಾಯಕರು ನೀಡಿರುವ ಹೇಳಿಕೆ ಭಾರೀ ಚರ್ಚೆಗೆ ಕಾರಣವಾಗಿದೆ. ಇದೀಗ ಕರ್ನಾಟಕದ ಪ್ರಭಾವಿ ಸಚಿವರೊಬ್ಬರು ಮಾಡಿರುವ ಟ್ವೀಟ್ ಭಾರೀ ಚರ್ಚೆಗೆ ಕಾರಣವಾಗುತ್ತಿದೆ. ಭಾರತ ಹಾಗೂ ಪಾಕಿಸ್ತಾನದ ನಡುವಿನ ಸಂಘರ್ಷಕ್ಕೆ ಸಂಬಂಧಿಸಿದಂತೆ ಪ್ರಧಾನಿ ನರೇಂದ್ರ ಮೋದಿ ಹಾಗೂ ಆಡಳಿತರೂಢ ಬಿಜೆಪಿ ಪಕ್ಷದ ನಾಯಕರು ಆಕ್ರಮಣಕಾರಿಯಾಗಿ ಮಾತನಾಡಿದ್ದರು. ಈ ಎಲ್ಲಾ ಆಕ್ರಮಣಕಾರಿ ಮಾತುಕತೆಗಳ ನಂತರ ದಿಢೀರ್ ಎಂದು ಕದನ ವಿರಾಮಕ್ಕೆ ಒಪ್ಪಿಗೆ ನೀಡಿರುವುದು ಆಶ್ಚರ್ಯಕರವಾಗಿದೆ. ಅಮೆರಿಕದ ಅಧ್ಯಕ್ಷ ಡೊನಾಲ್ಡ್ ಟ್ರಂಪ್ ಅವರು ಈ ವಿಷಯವನ್ನು ಘೋಷಿಸಿರುವುದು ಬೇಸರದ ಸಂಗತಿ ಎಂದು ಸಚಿವ ದಿನೇಶ್ ಗುಂಡೂರಾವ್ ಅವರು ಹೇಳಿದ್ದಾರೆ.

ಈ ಸಂಬಂಧ ಸೋಷಿಯಲ್ ಮೀಡಿಯಾ ಎಕ್ಸ್‌ನಲ್ಲಿ ಟ್ವೀಟ್ ಮಾಡಿರುವ ಅವರು, ಜಮ್ಮು ಮತ್ತು ಕಾಶ್ಮೀರದ ಪಹಲ್ಗಾಮ್ ದಾಳಿಯ ಭಯೋತ್ಪಾದಕರು ಇನ್ನೂ ತಲೆಮರೆಸಿ ಕೊಂಡಿದ್ದಾರೆ. ಪಾಕಿಸ್ತಾನದ ಮೇಲೆ ಭಾರತ ನಡೆಸಿದ ದಾಳಿಗಳು ಯಾವುದೇ ನಿರ್ಣಾಯಕ ಫಲಿತಾಂಶ ಗಳನ್ನು ತಲುಪಿಲ್ಲ ಅಥವಾ ತಾರ್ಕಿಕ ಅಂತ್ಯವನ್ನು ಕಂಡಿಲ್ಲ ಎಂದು ಹೇಳಿದ್ದಾರೆ. ಮುಂದುವರಿದು IMF ಪಾಕಿಸ್ತಾನವನ್ನು ರಕ್ಷಿಸುತ್ತಿದೆ ಮತ್ತು ಭಾರತದ ಕ್ರಮಗಳಿಗೆ ಯಾವುದೇ ಬಲವಾದ ಅಂತರ ರಾಷ್ಟ್ರೀಯ ಬೆಂಬಲವಿಲ್ಲ ಎಂದು ಇದು ತೋರಿಸುತ್ತದೆ. ನಮ್ಮ ನೆರೆಹೊರೆ ಯವರು ಮೊದಲು ಎನ್ನುವ ನೀತಿಯು ವಿಫಲವಾಗಿದೆ ಎಂದು ಅವರು ಟೀಕಿಸಿದ್ದಾರೆ. ಅಲ್ಲದೇ ಪಾಕಿಸ್ತಾನ ಮತ್ತು ಚೀನಾ ನಮ್ಮ ವಿರುದ್ಧ ಒಂದಾಗಿವೆ. ವ್ಯೂಹವನ್ನು ರಚಿಸಿಕೊಂಡಿವೆ. ಇನ್ನು ನೆರೆಯ ಬಾಂಗ್ಲದೇಶ ದೊಂದಿಗೆ ನಮ್ಮ ಸಂಬಂಧವು ಅತ್ಯಂತ ಕೆಟ್ಟದಾಗಿದೆ. ನೇಪಾಳ ಈಗ ನಮಗೆ ಯಾವುದೇ ಸ್ನೇಹಪರ ಮಿತ್ರ ರಾಷ್ಟ್ರವಾಗಿಲ್ಲ. ಚೀನಾಕ್ಕೆ ಹೋಲಿಸಿದರೆ ಭೂತಾನ್ ಸಹ ಕೂಡ ತಟಸ್ಥವಾಗಿದೆ. ಚರ್ಚಿಸಬೇಕಾದ ಹಲವು ವಿಷಯಗಳಿವೆ. ನಮ್ಮ ಪ್ರಧಾನಿ ನರೇಂದ್ರ ಮೋದಿ ಅವರು ವಿಶೇಷ ಸಂಸತ್ತಿನ ಅಧಿವೇಶನವನ್ನು ಕರೆಯುವುದು. ಎಲ್ಲಾ ವಿರೋಧ ಪಕ್ಷಗಳೊಂದಿಗೆ ಮಾತನಾಡುವುದು ಮತ್ತು ರಾಷ್ಟ್ರವನ್ನು ವಿಶ್ವಾಸಕ್ಕೆ ತೆಗೆದುಕೊಳ್ಳುವುದು ನಮಗೆ ಈಗ ಅಗತ್ಯವಿದೆ ಎಂದಿದ್ದಾರೆ.

# ಅಮೆರಿಕ ದ್ವಂದ್ವ ನೀತಿಗೆ ಪ್ರಕಾಶ್‌ರಾಜ್ ಟೀಕೆ




**ಬೆಂಗಳೂರು, ಮೇ 11:** ಭಾರತ ಮತ್ತು ಪಾಕಿಸ್ತಾನದ ನಡುವಿನ ಕದನ ವಿರಾಮ ಬಗ್ಗೆ ಅಸಮಾಧಾನ ವ್ಯಕ್ತಪಡಿಸಿರುವ ಬಹುಭಾಷಾ ನಟ ಪ್ರಕಾಶ್ ರಾಜ್, ಅಮೆರಿಕದ ದ್ವಂದ್ವ ನೀತಿಯನ್ನು ಟೀಕಿಸಿದ್ದಾರೆ. ಈ ಬಗ್ಗೆ ಅವರು ಪ್ರತಿಕ್ರಿಯಿಸಿದ್ದಾರೆ. ಪಾಕಿಸ್ತಾನದೊಳಗೆ ನುಗ್ಗಿ ಭಯೋತ್ಪಾದಕ ಒಸಾಮಾ ಬಿನ್ ಲಾಡೆನ್‌ನನ್ನು ಕೊಲ್ಲುವ ಮೂಲಕ ಅಮೆರಿಕ ನ್ಯಾಯ ದೊರಕಿಸಿಕೊಂಡಿತ್ತು. ಆದರೆ, ನಾವು ಹಾಗೆ ಮಾಡಲು ಹೊರಟಾಗ ಕದನ ವಿರಾಮ ಘೋಷಿಸಲಾಯಿತು ಎಂದು ಹೇಳಿದ್ದಾರೆ.

ಅಮೆರಿಕ ಮಧ್ಯಸ್ಥಿಕೆಯಲ್ಲಿ ಶನಿವಾರ ನಡೆದ ಉಭಯ ರಾಷ್ಟ್ರಗಳ ಮಿಲಿಟರಿ ನಾಯಕರ ಸಭೆ ನಂತರ ಕದನ ವಿರಾಮ ಘೋಷಿಸಲಾಯಿತು.

ಪಹಲ್ಗಾಮ್ ಉಗ್ರ ದಾಳಿಗೆ ಪ್ರತೀಕಾರವಾಗಿ ಆಪರೇಷನ್ ಸಿಂಧೂರ' ಸೇನಾ ಕಾರ್ಯಚರಣೆ ನಂತರ ಭಾರತ ಮತ್ತು ಪಾಕಿಸ್ತಾನದ ನಡುವೆ ಸಂಘರ್ಷ ಉದ್ವಿಗ್ನಗೊಂಡಿತ್ತು. ಪಹಲ್ಗಾಮ್ ಉಗ್ರರ ದಾಳಿಯಲ್ಲಿ 26 ಭಾರತೀಯರು ಮೃತಪಟ್ಟಿದ್ದರು.

# ಸಂಪರ್ಕ ಕೇಂದ್ರಗಳಿಂದ ರೈತರಿಗೆ ಕೃಷಿ ಬಗ್ಗೆ ಹೊಸ ತಂತ್ರಜ್ಞಾನದ ಅರಿವು ಮೂಡಿಸಿ: ಲಕ್ಷ್ಮೀ ಹೆಬ್ಬಾಳ್ಕರ್ ಕರೆ



**ಉಡುಪಿ, ಮೇ 11:** ರೈತರು ಹೊಸ ಹೊಸ ತಂತ್ರಜ್ಞಾನಗಳನ್ನು ಅಳವಡಿಸಿ ಕೊಂಡು ಕೃಷಿಯಲ್ಲಿ ಹೆಚ್ಚು ಆದಾಯಗಳಿಸುವಂತಾಬೇಕು ಎಂದು ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಸಚಿವೆ ಲಕ್ಷ್ಮೀ ಹೆಬ್ಬಾಳ್ಕರ್ ಹೇಳಿದರು. ಉಡುಪಿ ಜಿಲ್ಲಾ ಪಂಚಾಯತ್, ಕೃಷಿ ಇಲಾಖೆ ವತಿಯಿಂದ ನೂತನವಾಗಿ ನಿರ್ಮಿಸಲಾಗಿರುವ ಕುಂದಾಪುರ ರೈತ ಸಂಪರ್ಕ ಕೇಂದ್ರ (ಕೋಟೇಶ್ವರ)ವನ್ನು ಉದ್ಘಾಟಿಸಿ ಮಾತನಾಡಿದ ಸಚಿವರು, ರೈತರು ಕೃಷಿಯಲ್ಲಿ ಆಧುನಿಕರಣ ಕಂಡುಕೊಳ್ಳಬೇಕು, ರೈತರು ಸುಖಿಯಾಗಿದ್ದಾಗ ಮಾತ್ರ ದೇಶ ಅಭಿವೃದ್ಧಿಯಾದಂತೆ ಎಂದು ಹೇಳಿದರು.

ರೈತ ಸಂಪರ್ಕ ಕೇಂದ್ರಗಳು ರೈತರಿಗೆ ಅನುಕೂಲವಾಗಿದೆ. ಕೃಷಿಯ ಬಗ್ಗೆ ಅಧಿಕಾರಿಗಳು ರೈತರಿಗೆ ಸೂಕ್ತ ಮಾರ್ಗದರ್ಶನ ಹಾಗೂ ಸಲಹೆ ನೀಡಬೇಕು. ಸರ್ಕಾರದ ಯೋಜನೆಗಳನ್ನು ರೈತರ ಮನೆ ಬಾಗಿಲಿಗೆ ತಲುಪಿಸಬೇಕು, ಅಧಿಕಾರಿಗಳು ರೈತರು ಹಾಗೂ ಸರ್ಕಾರದ ಮಧ್ಯೆ ಕೊಂಡಿಯಾಗಿ ಕೆಲಸ ಮಾಡಬೇಕು, ರೈತರ ಮಿತ್ರರಾಗಿ ಕೆಲಸ ಮಾಡಬೇಕು ಎಂದು ಸಚಿವರು ಕರೆ ನೀಡಿದರು.ನಮ್ಮ ಸಿದ್ದರಾಮಯ್ಯನವರ ನೇತೃತ್ವದ ರಾಜ್ಯ ಸರ್ಕಾರ ರೈತರ ಪರ ಸರ್ಕಾರ, ರೈತರ ಪರ ಕಾಳಜಿ ಹೊಂದಿರುವ ಸರ್ಕಾರ. ಸರ್ಕಾರಗಳು ಬರುತ್ತವೆ, ಹೋಗುತ್ತವೆ. ರೈತರ ಕೃಷಿ ಚಟುವಟಿಕೆ ನಿರಂತರವಾಗಿರುತ್ತದೆ. ಕೃಷಿ ಚಟುವಟಿಕೆ, ಕೃಷಿ ಸಲಕರಣೆಗಳು, ಸಬ್ಸಿಡಿ ಸಿಗುವ ಬಗ್ಗೆ ರೈತರಿಗೆ ಮಾಹಿತಿ ಸಿಗುವಂತಾಗಬೇಕು. ಪ್ರತಿ ಗ್ರಾಮ ಪಂಚಾಯಿತಿಗಳಲ್ಲಿ ಮಾಹಿತಿ ಫಲಕ ಅಳವಡಿಸಬೇಕು ಎಂದು ಸಚಿವರು ಅಧಿಕಾರಿಗಳಿಗೆ ಸೂಚಿಸಿದರು.

ಬ್ರಿಟಿಷರು ಸ್ವಾತಂತ್ರ್ಯ ಕೊಟ್ಟು ಹೋಗುವಾಗ ನಮ್ಮ ಕೃಷಿಗೆ ಪೆಟ್ಟು ನೀಡಿಯೇ ಹೋದರು. ಭಾರತ ಮುಂಚೂಣಿಗೆ ಬರಬಾರದು ಎಂದು ಕೃಷಿ ಉತ್ಪನ್ನಗಳಿಗೆ ರಾಸಾಯನಿಕ ಬೆರಸಿಹೋಗಿದ್ದರು. ಆದರೆ, ನಮಗೆ ಕೃಷಿಯೇ ಪ್ರಧಾನವಾಗಿದೆ. ಕೃಷಿಯಿಂದಲೇ ನಾವು ವಿಶ್ವಗುರುವಿನ ಪಟ್ಟದತ್ತ ನಡೆಯುತ್ತಿದ್ದೇವೆ ಎಂದು ಸಚಿವರು ತಿಳಿಸಿದರು. ಕಾರ್ಯಕ್ರಮದಲ್ಲಿ ಕುಂದಾಪುರ ಶಾಸಕ ಕಿರಣ್ ಕುಮಾರ್ ಕೊಡ್ಗಿ, ಜಿಲ್ಲಾ ಗ್ಯಾರಂಟಿ ಸಮಿತಿ ಅಧ್ಯಕ್ಷ ಅಶೋಕ್ ಕುಮಾರ್ ಕೊಡವೂರು, ಜಿಲ್ಲಾ ಗ್ಯಾರಂಟಿ ಸಮಿತಿ ಉಪಾಧ್ಯಕ್ಷ ದಿನೇಶ್ ಹೆಗಡೆ, ಜಿಲ್ಲಾ ಕೆಡಿಪಿ ಸದಸ್ಯ ಪ್ರಸನ್ನ ಕುಮಾರ್ ಶೆಟ್ಟಿ, ಹರಿ ಪ್ರಸಾದ್ ಶೆಟ್ಟಿ, ಶಿವರಾಮ ಶೆಟ್ಟಿ, ವಿಕಾಸ ಹೆಗಡೆ, ಜಿಲ್ಲಾಧಿಕಾರಿ ಡಾ.ಕೆ.ವಿದ್ಯಾಕುಮಾರಿ, ಜಿಲ್ಲಾಪೊಲೀಸ್ ವರಿಷ್ಠಾಧಿಕಾರಿ ಡಾ.ಕೆ.ಅರುಣ್, ಜಿಲ್ಲಾ ಪಂಚಾಯತ್ ಸಿಇಒ ಪ್ರತೀಕ್ ಬಾಯಲ್, ಕೃಷಿ ಇಲಾಖೆಯ ಅಧಿಕಾರಿಗಳು ಉಪಸ್ಥಿತರಿದ್ದರು.

# ಪರಿಶಿಷ್ಟ ಜಾತಿ ಸಮಗ್ರ ಸಮೀಕ್ಷೆ ಬಿಬಿಎಂಪಿ ಮಹತ್ವದ ಮಾಹಿತಿ!

ಬೆಂಗಳೂರಿನಲ್ಲಿ ಬಿಬಿಎಂಪಿ ವ್ಯಾಪ್ತಿಯಲ್ಲಿ ಪರಿಶಿಷ್ಟ ಜಾತಿ ಸಮಗ್ರ ಸಮೀಕ್ಷಾ ಕಾರ್ಯದ ಬಗ್ಗೆ ಬೃಹತ್ ಬೆಂಗಳೂರು ಮಹಾನಗರ ಪಾಲಿಕೆಯು ಮಹತ್ವದ ಅಪ್ಡೇಟ್ಸ್ ನೀಡಿದೆ. ಇದರೊಂದಿಗೆ ಬಿಬಿಎಂಪಿಯ ಅಧಿಕಾರಿಗಳಿಗೆ ಬಿಬಿಎಂಪಿ ಮುಖ್ಯ ಆಯುಕ್ತ ಮಹೇಶ್ವರ್ ರಾವ್ ಅವರು ಮಹತ್ವದ ಸೂಚನೆಯನ್ನೂ ನೀಡಿದ್ದಾರೆ.

ನಗರದಲ್ಲಿ ಪರಿಶಿಷ್ಟ ಜಾತಿ ಸಮಗ್ರ ಸಮೀಕ್ಷೆಗೆ ಸಂಬಂಧಿಸಿದಂತೆ ಈಚೆಗೆ ವರ್ಚ್ಯುವಲ್ ಸಭೆಯನ್ನು ನಡೆಸಲಾಗಿದೆ. ನಗರಲ್ಲಿ 5ನೇ ಮೇ 2025ರಿಂದ ಸಮೀಕ್ಷಾ ಕಾರ್ಯ ಆರಂಭವಾಗಿದೆ. ಆಯಾ ವಲಯ ವ್ಯಾಪ್ತಿಯಲ್ಲಿ ಅದಕ್ಕೆ ವೇಗ ನೀಡಿ ಶೀಘ್ರಗತಿಯಲ್ಲಿ ಪೂರ್ಣಗೊಳಿಸಲು ಅಧಿಕಾರಿಗಳಿಗೆ ಸೂಚನೆ ನೀಡಿದ್ದಾರೆ.

ನಗರದ 28 ವಿಧಾನಸಭಾ ಕ್ಷೇತ್ರಗಳಲ್ಲಿ ಬರುವ ಬೂತ್ ಮಟ್ಟದ ಅಧಿಕಾರಿ (ಬಿ.ಎಲ್.ಒ)ಗಳನ್ನು ಗಣತಿದಾರರನ್ನಾಗಿ ನಿಯೋಜಿಸಲಾಗಿದೆ. ಬಿಬಿಎಂಪಿಯ ಎಲ್ಲಾ ವಲಯಗಳ ಹಿರಿಯ ಅಧಿಕಾರಿಗಳಿಗೆ ಆಯಾ ವಲಯದ ಸಮೀಕ್ಷಾ ಕಾರ್ಯವನ್ನು ಖುದ್ದು ಮೇಲ್ವಿಚಾರಣೆ ಮಾಡಲು ಸೂಚಿಸಿದ್ದಾರೆ. ಪ್ರತ್ಯೇಕ ಸರ್ವರ್ ವ್ಯವಸ್ಥೆ: ಬಿಬಿಎಂಪಿ ವ್ಯಾಪ್ತಿಯ 8 ವಲಯಗಳಲ್ಲಿ 28 ವಿಧಾನಸಭಾ ಕ್ಷೇತ್ರಗಳು ಬರಲಿವೆ. ಪರಿಶಿಷ್ಟಜಾತಿ ಸಮಗ್ರ ಸಮೀಕ್ಷಾ ಕಾರ್ಯವನ್ನು ತ್ವರಿತವಾಗಿ ಪೂರ್ಣಗೊಳಿಸುವ ನಿಟ್ಟಿನಲ್ಲಿ ಪ್ರತ್ಯೇಕ ಸರ್ವರ್ ವ್ಯವಸ್ಥೆ ಮಾಡಲು ಅಗತ್ಯ ಕ್ರಮ ಕೈಗೊಳ್ಳಲಾಗುವುದು ಎಂದಿದ್ದಾರೆ. ಸಮನ್ವಯ ತಂಡ ರಚನೆ: ಇನ್ನು ಬೃಹತ್ ಬೆಂಗಳೂರು ಮಹಾನಗರ ಪಾಲಿಕೆಯ ವ್ಯಾಪ್ತಿಯಲ್ಲಿ ಸಮೀಕ್ಷಾ ಕಾರ್ಯದ ವೇಳೆ ಏನಾದರು ಸಮಸ್ಯೆಗಳು ಕಂಡುಬಂದಲ್ಲಿ, ಅದನ್ನು ಕೂಡಲೇ ಬಗೆಹರಿಸುವ ನಿಟ್ಟಿನಲ್ಲಿ ಬಿಬಿಎಂಪಿ ಹಾಗೂ ಇ–ಆಡಳಿತ ಜೊತೆಗೆ ಸಮನ್ವಯತೆ ಸಾಧಿಸುವುದಕ್ಕೆ ಸಮನ್ವಯ ತಂಡವನ್ನು ನಿಯೋಜಿಸಲು ಸೂಚನೆ ನೀಡಲಾಗಿದೆ ಎಂದು ಮಾಹಿತಿ ನೀಡಿದ್ದಾರೆ.

ಹೆಚ್ಚುವರಿ ತರಬೇತಿ ನೀಡಲು ನಿರ್ದೇಶನ: ನಗರದಲ್ಲಿ ಮೊಬೈಲ್ ತಂತ್ರಾಂಶದ ಮೂಲಕ ಸಮೀಕ್ಷಾ ಕಾರ್ಯ ನಡೆಸಲಾಗುತ್ತಿದೆ. ಯಾವ ರೀತಿ ಸಮೀಕ್ಷಾ ಕಾರ್ಯ ನಡೆಸಬೇಕು ಎನ್ನುವುದನ್ನು ಹೆಚ್ಚುವರಿಯಾಗಿ ತರಬೇತಿ ನೀಡಿ ತ್ವರಿತವಾಗಿ ಸಮೀಕ್ಷೆ ಮಾಡಲು ಅಗತ್ಯ ಕ್ರಮಗಳನ್ನು ಕೈಗೊಳ್ಳಲು ಸೂಚಿಸಲಾಗಿದೆ. ಅಗತ್ಯ ದಾಖಲಾತಿಗಳನ್ನು ನೀಡಿ ಇನ್ನು ಬೆಂಗಳೂರಿನಲ್ಲಿ ಬಿಬಿಎಂಪಿ ಸಿಬ್ಬಂದಿಯು ಮನೆ–ಮನೆಗೆ ಗಣತಿದಾರರು ಭೇಟಿ ನೀಡಿ ಮೊಬೈಲ್ ತಂತ್ರಾಂಶದ ಮೂಲಕ ಸಮೀಕ್ಷಾ ಕಾರ್ಯ ನಡೆಸುತ್ತಿದ್ದಾರೆ.

ಈ ಸಂಬಂಧ ಸಮೀಕ್ಷೆ ವೇಳೆಯಲ್ಲಿ ಈ ಪ್ರಮುಖ ದಾಖಲಾತಿಗಳ ಮಾಹಿತಿಯನ್ನು ನೀಡುವಂತೆ ಮನವಿ ಮಾಡಲಾಗಿದೆ.

> *** ಪರಿಶಿಷ್ಟ ಜಾತಿಯವರು ತಮ್ಮ ಮೂಲ ಜಾತಿ ದಾಖಲೆಯ ಪ್ರಮಾಣ ಪತ್ರ * ಶಿಕ್ಷಣ (ವಿದ್ಯಾಭ್ಯಾಸ ದಾಖಲಾತಿಗಳು) * ವರಮಾನ (ವಾರ್ಷಿಕ ವರಮಾನದ ದಾಖಲಾತಿ) * ಉದ್ಯೋಗದ ವಿವರ * ಆಧಾರ್ ಕಾರ್ಡ್ ಸಂಖ್ಯೆ ಅಥವಾ ರೇಷನ್ ಕಾರ್ಡ್ ಸೇರಿದಂತೆ ಪ್ರಮುಖ ದಾಖಲೆಗಳ ಮಾಹಿತಿ ನೀಡಬೇಕು. ಪರಿಶಿಷ್ಟ ಜಾತಿ ಹಾಗೂ ಉಪ ಜಾತಿ ಸಮಗ್ರ ಸಮೀಕ್ಷೆಗೆ ಒಳಪಡುವವರು ಅಥವಾ ಈ ಸಮುದಾಯದವರು ತಮ್ಮ ಆಧಾರ್/ ರೇಷನ್ ಕಾರ್ಡ್ ನೀಡಿ ನೋಂದಣಿ ಮಾಡಿಕೊಳ್ಳಬೇಕು. ಇದಾದ ನಂತರ ಅವರ ಮತ್ತು ಕುಟುಂಬದವರ ವೈಯಕ್ತಿಕ ವಿವರವನ್ನು ಸಲ್ಲಿಸಬೇಕು. ಕುಟುಂಬದ ಸದಸ್ಯರ ವಿವರ, ಶೈಕ್ಷಣಿಕ, ಆರ್ಥಿಕ, ಉದ್ಯೋಗ, ಸರ್ಕಾರಿ ಸವಲತ್ತುಗಳು ಹಾಗೂ ಮೂಲಸೌಕರ್ಯಗಳು ಸೇರಿ ಸಮಗ್ರ ಮಾಹಿತಿಯನ್ನು ಈ ಸಂದರ್ಭದಲ್ಲಿ ನೀಡಬೇಕು ಎಂದು ಹೇಳಲಾಗಿದೆ.**

# ಪ್ರತಿಪಕ್ಷ ನಾಯಕ ಅಶೋಕ್‌ಗೆ ಸರ್ಕಾರ ಇನ್ನೂ ಬಂಗಲೆ ನೀಡಿಲ್ಲ

ನಂಜುಂಡಪ್ಪ.ವಿ



**ಬೆಂಗಳೂರು, ಮೇ 11:** ವಿಧಾನಸಭೆ ಪ್ರತಿಪಕ್ಷ ನಾಯಕ ಆರ್. ಅಶೋಕ ಅವರಿಗೆ ಒಂದೂವರೆ ವರ್ಷದಿಂದ ಅಧಿಕೃತ ಸರ್ಕಾರಿ ಬಂಗಲೆ ನೀಡದೇ ಕಾಂಗ್ರೆಸ್ ಸರ್ಕಾರ ಸತಾಯಿಸುತ್ತಿದೆ. ಹೊಸ ಕಾರು ಕೊಡದೇ ಪ್ರತಿಪಕ್ಷ ನಾಯಕರ ತಾಳ್ಮೆ ಪರೀಕ್ಷಿಸುತ್ತಿದೆ.

ಮುಖ್ಯಮಂತ್ರಿ ಸಿದ್ದರಾಮಯ್ಯ ಅವರಿಗೆ ಈ ಕುರಿತು ಆರು ಬಾರಿ ಪತ್ರ ಬರೆದಿರುವ ಆರ್. ಅಶೋಕ, ಎರಡು ಬಾರಿ ಖುದ್ದಾಗಿ ಭೇಟಿ ಮಾಡಿ ಸರ್ಕಾರಿ ಬಂಗಲೆ ನೀಡುವಂತೆ ಕೋರಿದ್ದಾರೆ. ಮುಖ್ಯ ಕಾರ್ಯದರ್ಶಿಗೂ ಹಲವು ಮನವಿ ಸಲ್ಲಿಸಿದ್ದಾರೆ. ಆದರೆ ಬಂಗಲೆ ಮಾತ್ರ ದೊರೆತಿಲ್ಲ.

ವಿಪಕ್ಷ ನಾಯಕ ಸ್ಥಾನಮಾನದ ಶಿಷ್ಟಾಚಾರ ಮುಖ್ಯಮಂತ್ರಿಗೆ ಸರಿ ಸಮಾನವಾದದ್ದು. ಶಾಡೋ ಸಿಎಂ ಎಂದೇ ಪ್ರತಿಪಕ್ಷ ನಾಯಕರನ್ನು ಕರೆಯಲಾಗುತ್ತದೆ. ಸರ್ಕಾರದ ಅಂಕು ಡೊಂಕುಗಳನ್ನು ತಿದ್ದಿ ತೀಡಿ ಆಡಳಿತ ಯಂತ್ರಕ್ಕೆ ಮೂಗುದಾರ ಹಾಕುವ ಮಹತ್ವದ ಪ್ರತಿಪಕ್ಷ ನಾಯಕರಿಗೆ ಸರ್ಕಾರದಲ್ಲಿ ಮನ್ನಣೆ ಇಲ್ಲ. ಸರ್ಕಾರಿ ಬಂಗಲೆ, ಕಾರು ನೀಡದೇ ವಿಪಕ್ಷ ನಾಯಕರನ್ನು ಕಡೆಗಣಿಸಿದೆ.

ಮೇ 20ಕ್ಕೆ ರಾಜ್ಯ ಸರ್ಕಾರ ಎರಡು ವರ್ಷಗಳ ಸಂಭ್ರಮಾಚರಣೆಗೆ ಸಜ್ಜಾಗಿದೆ. ಹಾಲಿ ವಿಧಾನಸಭೆಯ ಶೇ. 40 ರಷ್ಟು ಅವಧಿ ಪೂರ್ಣಗೊಂಡಿದೆ. ಕಳೆದ ವಿಧಾನಸಭಾ ಚುನಾವಣೆಯಲ್ಲಿ ಬಿಜೆಪಿ ಹೀನಾಯವಾಗಿ ಪರಾಭವಗೊಂಡ ಹಿನ್ನೆಲೆಯಲ್ಲಿ ಆರು ತಿಂಗಳ ಕಾಲ ಅಳೆದು ತೂಗಿ ಕೊನೆಗೆ 2023ರ ಡಿಸೆಂಬರ್ ಎರಡನೇ ವಾರದಲ್ಲಿ ಅಶೋಕ ಅವರಿಗೆ ಬಿಜೆಪಿ ವರಿಷ್ಠರು ಪ್ರತಿಪಕ್ಷ ನಾಯಕನ ಹುದ್ದೆಗೆ ನೇಮಿಸಿದರು. ಎರಡು ವಿಧಾನಮಂಡಲ ಅಧಿವೇಶನ ಪ್ರತಿಪಕ್ಷ ನಾಯಕರಿಲ್ಲದೇ ನಡೆಯುವ ದಯನೀಯ ಪರಿಸ್ಥಿತಿ ನಿರ್ಮಾಣವಾಗಿತ್ತು. ಸಂಸದೀಯ ಪ್ರಜಾತಂತ್ರದ ಇತಿಹಾಸದಲ್ಲಿ ಇದೊಂದು ಕಪ್ಪು ಚುಕ್ಕೆ.

ಈ ಹಿಂದೆ ಸಿದ್ದರಾಮಯ್ಯ ಪ್ರತಿಪಕ್ಷ ನಾಯಕರಾಗಿದ್ದಾಗ ಶಾಡೋ ಸಿಎಂ ರೀತಿ ಕಾರ್ಯನಿರ್ವಹಿಸಿದ್ದರು. ರಾಜ್ಯದ ವಿವಿಧ ಜಿಲ್ಲೆಗಳಲ್ಲಿ ಅಧಿಕಾರಿಗಳ ಸಭೆ ಕರೆದು ಬರ, ನೆರೆ ಮತ್ತಿತರ ವಿಚಾರಗಳ ಬಗ್ಗೆ ಮಾಹಿತಿ ಪಡೆಯುತ್ತಿದ್ದರು. ಆದರೆ ಈಗಿನ ವಿಪಕ್ಷ ನಾಯಕರಿಗೆ ಪ್ರವಾಸ ಮಾಡಲು ಸೂಕ್ತ ವಾಹನವನ್ನು ಸಹ ಕೊಟ್ಟಿಲ್ಲ.

ಈ ಹಿಂದೆ ಪ್ರತಿಪಕ್ಷ ನಾಯಕರಾಗಿದ್ದಾಗ ಸಿದ್ದರಾಮಯ್ಯ ಕಾವೇರಿ ಸರ್ಕಾರಿ ಬಂಗಲೆ ತೊರೆಯುವ ಸಂದರ್ಭದಲ್ಲಿ ಆಕ್ರೋಶ ಗೊಂಡಿದ್ದರು. ಆರು ವರ್ಷಗಳಿಗೂ ಹೆಚ್ಚು ಅವಧಿವರೆಗೆ ಕಾವೇರಿಯಲ್ಲಿದ್ದ ಸಿದ್ದರಾಮಯ್ಯ 2018ರ ವಿಧಾನಸಭೆ ಚುನಾವಣೆ ಬಳಿಕ ಜೆಡಿಎಸ್ ಕಾಂಗ್ರೆಸ್ ಮೈತ್ರಿ ಸರ್ಕಾರದ ಸಮನ್ವಯ ಸಮಿತಿ ಅಧ್ಯಕ್ಷರಾದರು. ತಮಗೆ ಸಚಿವ ಸ್ಥಾನಮಾನ ಸಿಗುತ್ತದೆ ಎಂಬ ಲೆಕ್ಕಾಚಾರದಲ್ಲಿ ಅಲ್ಲಿಯೇ ತಮ್ಮ ವಾಸ್ತವ್ಯ ಮುಂದುವರಿಸಿದ್ದರು. ಮೈತ್ರಿ ಸರ್ಕಾರದ ಅವಧಿಯಲ್ಲಿ ಕಾವೇರಿಯನ್ನು ಬಿಟ್ಟುಕೊಡಬೇಕಾದ ಸಂದರ್ಭ ಎದುರಾದಾಗ ಅಂದು ಸಚಿವರಾಗಿದ್ದ ಕೆ.ಜೆ. ಜಾರ್ಜ್ ಹೆಸರಿಗೆ ಕಾವೇರಿ ಹಂಚಿಕೆ ಮಾಡಿಸಿಕೊಂಡು ಅಲ್ಲಿಯೇ ಉಳಿದುಕೊಂಡಿದ್ದರು.

ಬಿಜೆಪಿ ಸರ್ಕಾರ ಬರುತ್ತಿದ್ದಂತೆ ಸಿದ್ದರಾಮಯ್ಯ ವಿಪಕ್ಷ ನಾಯಕರಾದರು. ಮುಖ್ಯಮಂತ್ರಿಯಾದ ಯಡಿಯೂರಪ್ಪ ಕಾವೇರಿ ಬಂಗಲೆಯನ್ನು ತಮಗಾಗಿ ಪಡೆದುಕೊಂಡರು. ಆಗ ಸಿದ್ದರಾಮಯ್ಯ ಶಿವಾನಂದ ಸರ್ಕಲ್ ನಲ್ಲಿರುವ ಸರ್ಕಾರಿ ಬಂಗಲೆಗೆ ತಮ್ಮ ವಾಸ್ತವ್ಯ ಬದಲಿಸಿದ್ದರು. ಸಿದ್ದರಾಮಯ್ಯ ಮುಖ್ಯಮಂತ್ರಿಯಾಗುವವರೆಗೂ ಇದೇ ನಿವಾಸದಲ್ಲಿದ್ದರು.

ಕಳೆದ ವರ್ಷದ ನವೆಂಬರ್‌ನಲ್ಲಿ ಸರ್ಕಾರದ ಮುಖ್ಯ ಕಾರ್ಯದರ್ಶಿಗಳಿಗೆ, ಈ ವರ್ಷ ಮುಖ್ಯಮಂತ್ರಿಗಳಿಗೆ ಕುಮಾರ ಕೃಪಾ ಪಶ್ಚಿಮ, ರೇಸ್ ವ್ಯೂ ಕಾಟೇಜ್ ಪೈಕಿ ಒಂದನ್ನು ತಮಗೆ ಹಂಚಿಕೆ ಮಾಡುವಂತೆ ಒಟ್ಟು ಆರು ಪತ್ರಗಳನ್ನು ಬರೆದಿದ್ದಾರೆ. ವಿಪಕ್ಷ ನಾಯಕರ ಮನವಿಗಳಿಗೆ ಸರ್ಕಾರ ಕ್ಯಾರೇ ಎನ್ನುತ್ತಿಲ್ಲ. ಆದರೆ ಅಧಿಕಾರಿಗಳ ಪ್ರಕಾರ, ಅಶೋಕ ಅವರು ಕೇಳುವ ಬಂಗಲೆಗಳು ಖಾಲಿ ಇಲ್ಲ. ಇದೊಂದು ದೊಡ್ಡ ಪೀಕಲಾಟಕ್ಕೆ ಕಾರಣವಾಗಿದೆ.

ಸರ್ಕಾರಿ ಬಂಗಲೆ ಇಲ್ಲದ ಕಾರಣ ಶಕ್ತಿ ಕೇಂದ್ರ ವಿಧಾನಸೌಧದಿಂದ ಹತ್ತು ಕಿಲೋಮಿಟರ್ ದೂರದ ಜಯನಗರದ ತಮ್ಮ ಸ್ವಂತ ನಿವಾಸದಲ್ಲಿ ಪ್ರತಿಪಕ್ಷ ನಾಯಕ ಆರ್. ಅಶೋಕ ಸಭೆಗಳನ್ನು ನಡೆಸಬೇಕಾಗಿದೆ. ಅಧಿಕಾರಿಗಳು, ಶಾಸಕರ ಜೊತೆ ಸಭೆ ನಡೆಸುವುದು ಮಾತ್ರವಲ್ಲ, ರಾಜ್ಯದ ಬೇರೆ–ಬೇರೆ ಜಿಲ್ಲೆಗಳಿಂದ ಆಗಮಿಸುವ ಜನರನ್ನು ಭೇಟಿಯಾಗಲು ಸರ್ಕಾರಿ ನಿವಾಸ ಇಲ್ಲವಾಗಿದೆ. ವಿಧಾನಸೌಧದ ಬಳಿ ಬಂಗಲೆ ಹಂಚಿಕೆ ಮಾಡಿದರೆ ಸರ್ಕಾರಿ ಬಂಗಲೆಯಲ್ಲಿ ಅಧಿಕಾರಿಗಳ ಸಭೆ ನಡೆಸಲು ಅನುಕೂಲವಾಗುತ್ತಿತ್ತು.

ಸರ್ಕಾರ ಶಿಷ್ಟಾಚಾರದ ಅನ್ವಯ ಪ್ರತಿಪಕ್ಷ ನಾಯಕರಿಗೆ ಸರ್ಕಾರಿ ಬಂಗಲೆ, ಸರ್ಕಾರಿ ಕಾರು ನೀಡಬೇಕು. ಅಧಿಕಾರಿಗಳ ಸಭೆ ನಡೆಸುವುದು ಸೇರಿದಂತೆ ಹಲವು ಅಧಿಕಾರ ಪ್ರತಿಪಕ್ಷ ನಾಯಕರಿಗೆ ಇರುತ್ತದೆ. ಆದರೆ ಕಾಂಗ್ರೆಸ್ ಸರ್ಕಾರ ಸರ್ಕಾರಿ ಬಂಗಲೆ ಹಂಚಿಕೆ ಮಾಡಿಲ್ಲ ಎಂದು ಎಂಬುದು ಪ್ರಮುಖ ಆರೋಪವಾಗಿದೆ.

> **ಮುಖ್ಯಮಂತ್ರಿ ಸಿದ್ದರಾಮಯ್ಯ ಅವರಿಗೆ ಈ ಕುರಿತು ಆರು ಬಾರಿ ಪತ್ರ ಬರೆದಿರುವ ಆರ್. ಅಶೋಕ, ಎರಡು ಬಾರಿ ಖುದ್ದಾಗಿ ಭೇಟಿ ಮಾಡಿ ಸರ್ಕಾರಿ ಬಂಗಲೆ ನೀಡುವಂತೆ ಕೋರಿದ್ದಾರೆ. ಮುಖ್ಯ ಕಾರ್ಯದರ್ಶಿಗೂ ಹಲವು ಮನವಿ ಸಲ್ಲಿಸಿದ್ದಾರೆ. ಆದರೆ ಬಂಗಲೆ ಮಾತ್ರ ದೊರೆತಿಲ್ಲ.**

Managing Editor : SANDEEP RENU ✆ 99728 72151 | Executive Editor : SHARAT JYOTSNA B.R ✆ 9886766483 ✉ vaarthe@gmail.com

Published from: K10,A/4, Khriki Extension, Malviya Nagar, New Delhi-110 017. Phone: 95-120-3917916-20
Printed at: Jyoti Printers, E-94, Sector 6, Noida, UP. Phone: 0120-4232687 Off : E-94,Sector 6, Noida,UP | RNI No. DELKAN/2003/10363

22 ವರ್ಷಗಳಿಂದ ದೆಹಲಿಯಲ್ಲಿ ಪ್ರಕಟವಾಗುತ್ತಿರುವ ಪ್ರಪ್ರಥಮ ರಾಷ್ಟ್ರೀಯ ಕನ್ನಡ ದಿನಪತ್ರಿಕೆ

ದೆಹಲಿ ವಾರ್ತೆ

ಮೇ 12, 2025, ಸೋಮವಾರ

## ಒಳಪುಟಗಳಲ್ಲಿ

ಸಂಶಯಾಸ್ಪದ ವ್ಯಕ್ತಿ, ದೋಣಿ ಕಂಡರೆ ಕಾವಲುಪಡೆಗೆ ಮಾಹಿತಿ ನೀಡಲು ಮೀನುಗಾರರಿಗೆ ಬಬೀನ್ ಬೋಪಣ್ಣ ಸೂಚನೆ – ಪು.5

ಕೆಕೆ ಎಕ್ಸ್‌ಪ್ರೆಸ್ ರೈಲಿನಲ್ಲಿ ಪ್ರಯಾಣಿಕನಿಂದಲೇ ಹುಸಿಬಾಂಬ್ ಕರೆ: ಆರೋಪಿಯ ಬಂಧನ – ಪು.6

# ಪಾಕ್ ದಾಳಿ ಮಾಡಿದರೆ ಭಾರತದಿಂದ ಭೀಕರ ಆಕ್ರಮಣ : ಮೋದಿ ಎಚ್ಚರಿಕೆ

## ಪಿಓಕೆ ಬಿಟ್ಟು ತೆರಳಿದರೆ ಮಾತ್ರ ಪಾಕ್ ಜೊತೆ ಮಾತುಕತೆ? ಯಾರ ಮಧ್ಯಸ್ಥಿಕೆ ಒಪ್ಪಲ್ಲ



**ನವದೆಹಲಿ, ಮೇ 11:** ಮ್ಯಾರಥಾನ್ ಸಭೆ ನಡೆಸಿದ ಮೋದಿ, ರಾಜನಾಥ್ ಸಿಂಗ್, ಎನ್‌ಎಸ್‌ಎ ಅಜಿತ್ ದೋವಲ್, ಸಿಡಿಎಸ್ ಮೇಜರ್ ಅನಿಲ್ ಚೌಹಾಣ್, ಮೂರೂ ಸೇನೆಗಳ ಮುಖ್ಯಸ್ಥರ ಜೊತೆ ಎರಡು ಗಂಟೆ ಚರ್ಚೆ ನಡೆಸಿದ್ದಾರೆ. ಮುಂದಿನ ಕಾರ್ಯತಂತ್ರಗಳ ಬಗ್ಗೆ ಸಲಹೆ ಸೂಚನೆ ನೀಡಿದ್ದಾರೆ. ಆಕ್ರಮಿತ ಕಾಶ್ಮೀರ ಬಿಟ್ಟು ತೆರಳಿದರೆ ಮಾತ್ರ ಪಾಕ್ ಜೊತೆ ನಮ್ಮ ಮಾತುಕತೆ. ಇನ್ನೂ ನಾವು ಯಾರ ಮಧ್ಯಸ್ಥಿಕೆಯನ್ನೂ ಒಪ್ಪುವುದಿಲ್ಲ. ಕಾಶ್ಮೀರ ವಿಚಾರದಲ್ಲಿ ಅಮೆರಿಕ ಮಧ್ಯಸ್ಥಿಕೆ ನಾವು ಒಪ್ಪಲ್ಲ. ನಾಳೆ ಪಿಓಕೆ ವಿಚಾರವಾಗಿ ಮಾತುಕತೆ ನಡೆಸಿ ನಿರ್ಣಯ ಮಾಡಲಾಗುವುದು ಎಂದು ಪ್ರಧಾನಿ ಮೋದಿ ನೇತೃತ್ವದಲ್ಲಿ ನಡೆದ ಸಭೆಯಲ್ಲಿ ನಿರ್ಣಯಿಸಲಾಗಿದೆ ಎಂದು ವಿದೇಶಾಂಗ ಸಚಿವ ಜೈಶಂಕರ್ ತಿಳಿಸಿದ್ದಾರೆ. ಪಾಕ್ ದಾಳಿ ಮಾಡಿದರೆ ಭಾರತ ಪ್ರತಿಯಾಗಿ ಭೀಕರ ದಾಳಿ ಮಾಡುತ್ತದೆ ಎಂದು ಪ್ರಧಾನಿ ಮೋದಿ ಪಾಕಿಸ್ತಾನಕ್ಕೆ ನೇರ ಎಚ್ಚರಿಕೆ ಕೊಟ್ಟಿದ್ದಾರೆ. ಆಪರೇಷನ್ ಸಿಂಧೂರ ಇನ್ನೂ ಪೂರ್ಣಗೊಂಡಿಲ್ಲ. ಪಾಕ್ ಗುಂಡು ಹೊಡೆದರೆ, ನಾವು ಫಿರಂಗಿಗಳ ಮೂಲಕ ಉತ್ತರಿಸಬೇಕು. ಉಗ್ರವಾದ ನಿಲ್ಲುವವರೆಗೂ ಸಿಂಧೂ ಒಪ್ಪಂದ ಸ್ಥಗಿತಗೊಳಿಸಲಾಗುವುದು. ಸೋಮವಾರದ ಸಭೆಯಲ್ಲಿ ಪಿಓಕೆ ವಿಚಾರ ಮಾತ್ರ ಚರ್ಚೆ ಮಾಡಲಾಗುವುದು. ಕಾಶ್ಮೀರ ವಿಚಾರದಲ್ಲಿ ಅಮೆರಿಕ ಮಧ್ಯಸ್ಥಿಕೆ ಅಗತ್ಯವಿಲ್ಲ. ಕಾಶ್ಮೀರ ವಿವಾದ ಬಗೆಹರಿಸುವ ಶಕ್ತಿ ಭಾರತಕ್ಕಿದೆ. ಕಾಶ್ಮೀರ ವಿವಾದ ಜಾಗತಿಕಗೊಳಿಸಲು ಇಷ್ಟ ಪಡಲ್ಲ ಎಂದು ಮೋದಿ, ಅಮೆರಿಕಕ್ಕೆ ಕಠಿಣ ಸಂದೇಶ ರವಾನಿಸಿದ್ದಾರೆ. ಭಯೋತ್ಪಾದಕರನ್ನು ನಿರ್ಮೂಲನೆ ಮಾಡುವವರೆಗೂ ಕಾರ್ಯಾಚರಣೆ ಮುಂದುವರಿಯುತ್ತದೆ ಎಂದು ಮೋದಿ ತಿಳಿಸಿದ್ದಾರೆ. ಪ್ರಧಾನ ಮಂತ್ರಿಯವರ ಈ ಹೇಳಿಕೆ ಭಯೋತ್ಪಾದಕರಿಗೆ ಎಚ್ಚರಿಕೆಯಷ್ಟೇ ಅಲ್ಲ, ಅಂತರರಾಷ್ಟ್ರೀಯ ವೇದಿಕೆಯಲ್ಲಿ ಭಾರತದ ಸ್ಪಷ್ಟ ನೀತಿಯ ಘೋಷಣೆಯೂ ಆಗಿದೆ. ಸಿಂಧೂ ನೀರಿನ ಒಪ್ಪಂದವು ಗಡಿಯಾಚೆಗಿನ ಭಯೋತ್ಪಾದನೆಗೆ ಸಂಬಂಧಿಸಿದೆ. ರಾಜತಾಂತ್ರಿಕ ಸಂಬಂಧಗಳನ್ನು ಕಡಿತಗೊಳಿಸಲಾಗುವುದು, ಪಾಕಿಸ್ತಾನದ ಪ್ರಜೆಗಳ ವೀಸಾ ರದ್ದುಗೊಳಿಸುವುದು, ಭಾರತೀಯ ವಾಯು ಪ್ರದೇಶವನ್ನು ಪಾಕಿಸ್ತಾನದ ವಿಮಾನಗಳಿಗೆ ಮುಚ್ಚುವುದು, ದ್ವಿಪಕ್ಷೀಯ ವ್ಯಾಪಾರವನ್ನು ಅಮಾನತುಗೊಳಿಸುವುದು, ಪಾಕಿಸ್ತಾನವನ್ನು ಆರ್ಥಿಕವಾಗಿ ಮತ್ತು ಜಾಗತಿಕವಾಗಿ ಪ್ರತ್ಯೇಕಿಸಲಾಗುವುದು ಎಂದಿದ್ದಾರೆ.

## ಕರಾಚಿ ಮೇಲೆ ದಾಳಿಗೆ ಸಜ್ಜಾಗಿದ್ದ ನೌಕಾಪಡೆ



**ನವದೆಹಲಿ, ಮೇ 11:** ಭಾರತ ಪಾಕಿಸ್ತಾನದ ವಿರುದ್ಧ ಆಪರೇಷನ್ ಸಿಂಧೂರ ಹೆಸರಿನಲ್ಲಿ ದಾಳಿ ಮಾಡಲು ಆರಂಭಿಸಿದಾಗ ಭಾರತೀಯ ನೌಕಾಪಡೆಯು ಸಂಪೂರ್ಣವಾಗಿ ಸನ್ನದ್ಧವಾಗಿತ್ತು ಮತ್ತು ಕರಾಚಿ ಸೇರಿದಂತೆ ಸಮುದ್ರ ಮತ್ತು ಭೂಮಿಯ ಮೇಲಿನ ಹಲವು ಪ್ರಮುಖ ಸ್ಥಳಗಳ ಮೇಲೆ ದಾಳಿ ಮಾಡಲು ಸಂಪೂರ್ಣವಾಗಿ ಸಮರ್ಥವಾಗಿತ್ತು ಎಂದು ವೈಸ್ ಅಡ್ಮಿರಲ್ ಎಎನ್ ಪ್ರಮೋದ್ ಭಾನುವಾರ ಮಾಹಿತಿ ನೀಡಿದ್ದಾರೆ.

ನಮ್ಮ ಪಡೆಗಳು ಅರೇಬಿಯನ್ ಸಮುದ್ರದಲ್ಲಿ ಸರಿಯಾದ ಸ್ಥಳದಲ್ಲಿ ನಿಯೋಜಿಸಲ್ಪಟ್ಟಿದ್ದವು, ನಾವು ಆಯ್ಕೆ ಮಾಡಿದ ಸಮಯದಲ್ಲಿ ಕರಾಚಿ ಸೇರಿದಂತೆ ಸಮುದ್ರ ಮತ್ತು ಭೂಮಿಯಲ್ಲಿನ ಆಯ್ದ ಕಡೆಗಳಲ್ಲಿ ದಾಳಿ ಮಾಡಲು ಸಂಪೂರ್ಣವಾಗಿ ಸಜ್ಜಾಗಿದ್ದವು ವೈಸ್ ಅಡ್ಮಿರಲ್ ಎಎನ್ ಪ್ರಮೋದ್ ಆಪರೇಷನ್ ಸಿಂಧೂರ್ ಕುರಿತು ಮೂರು ಪಡೆಗಳ ಜಂಟಿ ಮಾಧ್ಯಮಗೋಷ್ಠಿಯಲ್ಲಿ ತಿಳಿಸಿದರು.

ಪಾಕಿಸ್ತಾನ ನೌಕಾಪಡೆಯು ಅರೇಬಿಯನ್ ಸಮುದ್ರದಲ್ಲಿ ಭಾರತೀಯ ನೌಕಾಪಡೆಯ ಬಲವಾದ ನಿರ್ಣಾಯಕ ನಿಲುವಿನ ಮೇಲೆ ತಮ್ಮ ಬಂದರಿಗೆ ಹಿಂತಿರುಗಿದೆ ಎಂದು ಸಹ ವರದಿಯಾಗಿದೆ.

# ಆಪರೇಷನ್ ಸಿಂಧೂರ: 100ಕ್ಕೂ ಹೆಚ್ಚು ಉಗ್ರರ ನಿರ್ಮೂಲನೆ




**ನವದೆಹಲಿ, ಮೇ 11:** ಆಪರೇಷನ್ ಸಿಂಧೂರ ಕಾರ್ಯಾಚರಣೆಯಲ್ಲಿ 100ಕ್ಕೂ ಹೆಚ್ಚು ಉಗ್ರರು ಹತ್ಯೆಯಾಗಿದ್ದಾರೆ ಎಂದು ಭಾರತೀಯ ಸೇನೆ ತಿಳಿಸಿದೆ. ಹಿರಿಯ ಮಿಲಿಟರಿ ಅಧಿಕಾರಿಗಳು ಭಾನುವಾರ ಸುದ್ದಿಗೋಷ್ಠಿ ನಡೆಸಿ ಕಾರ್ಯಾಚರಣೆ ಕುರಿತು ಮಾಹಿತಿ ಹಂಚಿಕೊಂಡರು. ಆಪರೇಷನ್ ಸಿಂಧೂರ ಅಡಿಯಲ್ಲಿ ಎಚ್ಚರಿಕೆಯಿಂದ ಚರ್ಚಿಸಿದ ನಂತರ ಭಾರತೀಯ ವಾಯುಪಡೆ (ಐಎಎಫ್) ಪಾಕಿಸ್ತಾನದಲ್ಲಿ ಒಂಬತ್ತು ಉಗ್ರರ ನೆಲೆಗಳನ್ನು ಗುರಿಯಾಗಿಸಿತ್ತು. ಮೇ 7 ರಂದು ದಾಳಿಗಳನ್ನು ನಡೆಸಿ, 100 ಕ್ಕೂ ಹೆಚ್ಚು ಭಯೋತ್ಪಾದಕರನ್ನು ಕೊಂದಿತು ಎಂದು ಲೆಫ್ಟಿನೆಂಟ್ ಜನರಲ್ ರಾಜೀವ್ ಘಾಯ್ ತಿಳಿಸಿದ್ದಾರೆ. ಪಾಕಿಸ್ತಾನ ಮತ್ತು ಪಾಕ್ ಆಕ್ರಮಿತ ಕಾಶ್ಮೀರ (ಪಿಓಕೆ) ಮೇಲೆ ಭಾರತ ನಡೆಸಿದ ಮಿಲಿಟರಿ ದಾಳಿಗಳು ಭಯೋತ್ಪಾದಕರನ್ನು ಕೊಲ್ಲುವ ಉದ್ದೇಶವನ್ನು ಹೊಂದಿದ್ದವು ಎಂದು ಮಾಹಿತಿ ನೀಡಿದ್ದಾರೆ. ಕಾರ್ಯಾಚರಣೆ ಬಗ್ಗೆ ಲೆಫ್ಟಿನೆಂಟ್ ಜನರಲ್ ರಾಜೀವ್ ಘಾಯ್, ಏರ್ ಮಾರ್ಷಲ್ ಅವಧೇಶ್ ಕುಮಾರ್ ಭಾರ್ತಿ, ವೈಸ್ ಅಡ್ಮಿರಲ್ ಎಎನ್ ಪ್ರಮೋದ್ ಮತ್ತು ಮೇಜರ್ ಜನರಲ್ ಸಂದೀಪ್ ಎಸ್ ಶಾರದಾ ವಿವರ ನೀಡಿದ್ದಾರೆ. ಪಾಕಿಸ್ತಾನ ನಡೆಸಿದ ಡ್ರೋನ್ ದಾಳಿಗಳನ್ನು ಹಿಮ್ಮೆಟ್ಟಿಸುವಲ್ಲಿ ಭಾರತದ ವಾಯು ರಕ್ಷಣಾ ಪಡೆ ಯಶಸ್ವಿಯಾಗಿದೆ. ಜೊತೆಗೆ ಪ್ರತಿದಾಳಿ ಕೂಡ ನಡೆಸಿದೆ. ಪಾಕಿಸ್ತಾನದ ಲಾಹೋರ್‌ನಲ್ಲಿರುವ ರೆಡಾರ್ ಸ್ಥಾಪನೆಯನ್ನು ನಾಶಪಡಿಸಿದೆ ಎಂದಿದ್ದಾರೆ. ಪಾಕಿಸ್ತಾನದ ದಾಳಿಯನ್ನು ತಡೆಯಲು ಸೇನೆಯು ಹಲವಾರು ಕ್ರಮಗಳನ್ನು ತೆಗೆದುಕೊಂಡಿದೆ ಎಂದು ಲೆಫ್ಟಿನೆಂಟ್ ಜನರಲ್ ರಾಜೀವ್ ಘಾಯ್ ವಿವರಿಸಿದ್ದಾರೆ.

ಮೇ 7 ಮತ್ತು 10 ರ ನಡುವೆ ನಿಯಂತ್ರಣದ ಹಾದಿಯಲ್ಲಿ ಸುಮಾರು 35 ರಿಂದ 40 ಪಾಕಿಸ್ತಾನಿ ಸೇನಾ ಸಿಬ್ಬಂದಿ ಫಿರಂಗಿ ಮತ್ತು ಸಣ್ಣ ಶಸ್ತ್ರಾಸ್ತ್ರ ಕೇಂದ್ರಗಳ ಮೇಲಿನ ದಾಳಿಯಿಂದಾಗಿ ಕೊಲ್ಲಲ್ಪಟ್ಟರು ಎಂದು ಮಿಲಿಟರಿ ಬಹಿರಂಗಪಡಿಸಿದೆ. ಪಾಕಿಸ್ತಾನದ ಪಾಶ್ಚಿಮಾತ್ಯ ಮುಂಭಾಗದಲ್ಲಿ ಎಫ್ –16 ಏರ್‌ಬೇಸ್‌ಗಳು, ತರಬೇತಿ ಕೇಂದ್ರಗಳು, ವಾಯು ರಕ್ಷಣಾ ಘಟಕಗಳು ಮತ್ತು ಕಮಾಂಡ್ ಹಬ್‌ಗಳನ್ನು ನಿಖರವಾಗಿ ಗುರಿಯಾಗಿಸುತ್ತದೆ ಎಂದು ಅವರು ದೃಢಪಡಿಸಿದರು.


### ಆಪರೇಷನ್ ಸಿಂದೂರ ಇನ್ನೂ ನಡೆಯುತ್ತಿದೆ, ಯಶಸ್ವಿಯಾಗಿ ಕಾರ್ಯಗತಗೊಳಿಸಿದ ನಿಯೋಜಿತ ಕಾರ್ಯಗಳು: ಐಎಎಫ್

ನಿಯೋಜಿತ ಕಾರ್ಯಗಳನ್ನು ಯಶಸ್ವಿಯಾಗಿ ಕಾರ್ಯಗತಗೊಳಿಸಿದೆ ಎಂದು ದೃಕರಿಸಿದ ಭಾರತೀಯ ವಾಯುಪಡೆ (ಐಎಎಫ್) ಭಾನುವಾರ ಆಪರೇಷನ್ ಸಿಂಡೂರ್ ಇನ್ನೂ ನಡೆಯುತ್ತಿದೆ ಎಂದು ಹೇಳಿದರು ಮತ್ತು ಯಾವುದೇ ಊಹಾಪೋಹ ಮತ್ತು ಪರಿಶೀಲಿಸದ ಮಾಹಿತಿಯ ಪ್ರಸಾರದಿಂದ ದೂರವಿರಲು ಎಲ್ಲರೂ ಒತ್ತಾಯಿಸಿದ್ದಾರೆ. ಕಾರ್ಯಾಚರಣೆಗಳನ್ನು ಉದ್ದೇಶಪೂರ್ವಕ ಮತ್ತು ವಿವೇಚನಾಯುಕ್ತ ರೀತಿಯಲ್ಲಿ ನಡೆಸಲಾಯಿತು, ರಾಷ್ಟ್ರೀಯ ಉದ್ದೇಶಗಳೊಂದಿಗೆ ಹೊಂದಾಣಿಕೆ ಮಾಡಿಕೊಂಡಿದೆ ಎಂದು ಐಎಎಫ್ ಹೇಳಿದೆ. ಇದು ಮತ್ತಷ್ಟು ಸೇರಿಸಿದೆ, ಕಾರ್ಯಾಚರಣೆಗಳು ಇನ್ನೂ ನಡೆಯುತ್ತಿರುವುದರಿಂದ, ಸರಿಯಾದ ಸಮಯದಲ್ಲಿ ವಿವರವಾದ ಬ್ರೀಫಿಂಗ್ ನಡೆಸಲಾಗುವುದು.

# ಆಪರೇಷನ್ ಸಿಂಧೂರ: ಇತ್ತೀಚಿನ ಬೆಳವಣಿಗೆಗಳ ಚರ್ಚೆಗೆ ಸಂಸತ್ ಅಧಿವೇಶನಕ್ಕೆ ಕಾಂಗ್ರೆಸ್ ಪತ್ರ


**ನವದೆಹಲಿ, ಮೇ 11:** ಕಾಂಗ್ರೆಸ್ ಅಧ್ಯಕ್ಷ ಮಲ್ಲಿಕಾರ್ಜುನ ಖರ್ಗೆ ಮತ್ತು ಲೋಕಸಭೆಯ ವಿರೋಧ ಪಕ್ಷದ ನಾಯಕ ರಾಹುಲ್ ಗಾಂಧಿ ಭಾನುವಾರ ಪ್ರಧಾನಿ ನರೇಂದ್ರ ಮೋದಿ ಅವರನ್ನು "ಪಹಲ್ಗಾಮ್ ಭಯೋತ್ಪಾದಕ ದಾಳಿ, ಆಪರೇಷನ್ ಸಿಂಧೂರ್ ಮತ್ತು ಭಾರತ–ಪಾಕಿಸ್ತಾನ ಕದನ ವಿರಾಮ ಘೋಷಣೆಗಳು" ಕುರಿತು ಚರ್ಚಿಸಲು ಸಂಸತ್ತಿನ ವಿಶೇಷ ಅಧಿವೇಶನವನ್ನು ತಕ್ಷಣವೇ ಕರೆಯುವಂತೆ ಒತ್ತಾಯಿಸಿದ್ದಾರೆ.

**ಮಲ್ಲಿಕಾರ್ಜುನ ಖರ್ಗೆ:**




ಪ್ರಧಾನಿ ಅವರಿಗೆ ಬರೆದ ಪತ್ರದಲ್ಲಿ, ಖರ್ಗೆ, ಇತ್ತೀಚಿನ ಬೆಳವಣಿಗೆಗಳನ್ನು ಗಮನದಲ್ಲಿಟ್ಟು ಕೊಂಡು, ಪಹಲ್ಗಾಮ್ ಭಯೋತ್ಪಾದನೆ, ಆಪರೇಷನ್ ಸಿಂಧೂರ್ ಮತ್ತು ವಾಷಿಂಗ್ಟನ್ ಡಿಸಿಯಿಂದ ಮೊದಲು ಮತ್ತು ನಂತರ ಭಾರತ ಮತ್ತು ಪಾಕಿಸ್ತಾನ ಸರ್ಕಾರಗಳಿಂದ ಕದನ ವಿರಾಮ ಘೋಷಣೆಗಳ ಕುರಿತು ಚರ್ಚಿಸಲು ಸಂಸತ್ತಿನ ವಿಶೇಷ ಅಧಿವೇಶನವನ್ನು ಕರೆಯಬೇಕೆಂದು ಎಲ್ಲಾ ವಿರೋಧ ಪಕ್ಷಗಳು ಸರ್ವಾನುಮತದಿಂದ ವಿನಂತಿಸುತ್ತಿವೆ ಎಂದು ಹೇಳಿದರು. ಪಹಲ್ಗಾಮ್‌ನಲ್ಲಿ ನಡೆದ ಭೀಕರ ಭಯೋತ್ಪಾದಕ ದಾಳಿಯ ನಂತರ ಅವರು ಮತ್ತು ರಾಹುಲ್ ಗಾಂಧಿ ಅವರು ಏ.28 ರಂದು ಸಂಸತ್ತಿನ ಉಭಯ ಸದನಗಳ ವಿಶೇಷ ಅಧಿವೇಶನವನ್ನು ಕೋರಿದ್ದರು ಎಂದು ಖರ್ಗೆ ನೆನಪಿಸಿದರು.

**ರಾಹುಲ್ ಗಾಂಧಿ:**




ರಾಹುಲ್ ಗಾಂಧಿ ಅವರು ಮೋದಿಗೆ ಬರೆದ ಪತ್ರದಲ್ಲಿ ಇತ್ತೀಚಿನ ಬೆಳವಣಿಗೆಗಳ ಕುರಿತು ಚರ್ಚಿಸಲು ಸಂಸತ್ತಿನ ವಿಶೇಷ ಅಧಿವೇಶನವನ್ನು ಕರೆಯುವಂತೆ ಕೋರಿದ್ದಾರೆ. "ಪಹಲ್ಗಾಮ್ ಭಯೋತ್ಪಾದಕ ದಾಳಿ, ಆಪರೇಷನ್ ಸಿಂಧೂರ ಮತ್ತು ಇಂದಿನ ಕದನ ವಿರಾಮವನ್ನು ಅಮೆರಿಕ ಅಧ್ಯಕ್ಷ ಡೊನಾಲ್ಡ್ ಟ್ರಂಪ್ ಮೊದಲು ಘೋಷಿಸಿದರು. ಇದು ಮುಂಬರುವ ಸವಾಲುಗಳನ್ನು ಎದುರಿಸಲು ನಮ್ಮ ಸಾಮೂಹಿಕ ಸಂಕಲ್ಪವನ್ನು ಪ್ರದರ್ಶಿಸಲು ಒಂದು ಅವಕಾಶವಾಗಿದೆ" ಎಂದು ಗಾಂಧಿಯವರ ಪತ್ರದಲ್ಲಿ ಹೇಳಲಾಗಿದೆ, ಪ್ರಧಾನಿ ಈ ಬೇಡಿಕೆಯನ್ನು ಗಂಭೀರವಾಗಿ ಮತ್ತು ತ್ವರಿತವಾಗಿ ಪರಿಗಣಿಸುತ್ತಾರೆ ಎಂದು ಅವರು ಆಶಿಸಿದ್ದಾರೆ.

**ಪ್ರಧಾನ ಕಾರ್ಯದರ್ಶಿ ವೇಣುಗೋಪಾಲ್:**



ಮಾಜಿ ಪ್ರಧಾನಿ ಇಂದಿರಾಗಾಂಧಿ ಅವಧಿಯಲ್ಲಿ ನಡೆದ ಪಾಕಿಸ್ತಾನದ ಮೇಲಿನ ಯುದ್ಧದಲ್ಲಿ ವಿದೇಶಿ ನಾಯಕರ ಮಧ್ಯ ಪ್ರವೇಶಕ್ಕೆ ಅವಕಾಶ ನೀಡಲಿಲ್ಲ. ಈಗ ಅಮೆರಿಕವು ಭಾರತ ಮತ್ತು ಪಾಕ್ ಸಂಘರ್ಷದಲ್ಲಿ ತಾನೇ ಕದನ ವಿರಾಮ ಘೋಷಿಸಿದೆ. ಈ ಕುರಿತು ಸರ್ಕಾರ ಕೇಂದ್ರ ಸ್ಪಷ್ಟನೆ ನೀಡಿದೆ ಎಂದು ಕಾಂಗ್ರೆಸ್ ಪ್ರಧಾನ ಕಾರ್ಯದರ್ಶಿ ವೇಣುಗೋಪಾಲ್ ತಿಳಿಸಿದ್ದಾರೆ.

## ಪಾಕ್‌ನಿಂದ ಗುಂಡು ಹಾರಿದರೆ ನೀವು ಬಾಂಬ್ ಹಾಕಿ: ಕಮಾಂಡರ್‌ಗಳಿಗೆ ಪ್ರಧಾನಿಯಿಂದ ಸಿಕ್ಕಿತು ಪರಮಾಧಿಕಾರ



ಪಾಕಿಸ್ತಾನ ಕದನ ವಿರಾಮ ಉಲ್ಲಂಘಿಸಿ ಮತ್ತೆ ದಾಳಿ ನಡೆಸಿದರೆ ಭೀಕರ ತಿರುಗೇಟು ನೀಡಲು ಸೇನೆಗೆ ಪ್ರಧಾನಿ ನರೇಂದ್ರ ಮೋದಿ ಅವರು ಪರಮಾಧಿಕಾರ ನೀಡಿದ್ದಾರೆ.

ಪಾಕಿಸ್ತಾನ ಸೇನೆಯು ಗಡಿಯಲ್ಲಿ ಒಪ್ಪಂದ ಉಲ್ಲಂಘಿಸಿದರೆ ಅದರ ದುಪ್ಪಟ್ಟು ಪ್ರಮಾಣದಲ್ಲಿ ತಿರುಗೇಟು ನೀಡಲು ಸೇನಾ ಮುಖ್ಯಸ್ಥ ಜನರಲ್ ಉಪೇಂದ್ರ ದ್ವಿವೇದಿ ಅವರು ಸೇನಾ ಕಮಾಂಡರ್‌ಗಳಿಗೆ ಸಂಪೂರ್ಣ ಅಧಿಕಾರ ನೀಡಿದ್ದಾರೆ. ಪಶ್ಚಿಮ ಗಡಿಗಳ ಸೇನಾ ಕಮಾಂಡರ್ಗಳ ಜೊತೆ ಭದ್ರತಾ ಪರಿಸ್ಥಿತಿಯನ್ನು ಪರಿಶೀಲಿಸಿದರು. ಈ ವೇಳೆ ಪಾಕಿಸ್ತಾನಕ್ಕೆ ತಕ್ಕ ಶಾಸ್ತಿ ಕಲಿಸಲು ಪರಮಾಧಿಕಾರ ನೀಡಿರುವುದಾಗಿ ಪ್ರಕಟಿಸಿದ್ದಾರೆ.

ಸಂಘರ್ಷವನ್ನು ನಿಲ್ಲಿಸಲು ಮೇ 10ರಂದು ಪಾಕಿಸ್ತಾನ ಮತ್ತು ಭಾರತದ ಡಿಜಿಎಂಬಗಳು ಮಾತುಕತೆ ನಡೆಸಿ ಕದನ ವಿರಾಮ ಘೋಷಿಸಿದ್ದಾರೆ. ಇಷ್ಟಾಗಿಯೂ ಪಾಕಿಸ್ತಾನ ನಿಯಮ ಮುರಿದಲ್ಲಿ ಭಾರತದ ಪ್ರತಿ ದಾಳಿ ಭೀಕರವಾಗಿರಬೇಕು. ಸೇನಾ ಕಮಾಂಡರ್‌ಗಳು ಯಾವುದೇ ನಿರ್ಧಾರವನ್ನು ತೆಗೆದುಕೊಳ್ಳಲು ಸೇನಾ ಮುಖ್ಯಸ್ಥರು ಪರಮಾಧಿಕಾರ ನೀಡಿದ್ದಾಗಿ ಸೇನೆ ತಿಳಿಸಿದೆ.

# ಭಾರತ ನೆರವಾದರೆ ಪಾಕಿಸ್ತಾನದ ವಿರುದ್ಧ ಸಮರಕ್ಕೆ ನಾವು ಸಿದ್ಧ: ಬಲೂಚಿಸ್ತಾನ ಬಂಡುಕೋರರ ಘೋಷಣೆ



**ಬಲೂಚಿಸ್ತಾನ. ಮೇ 11:** ಭಾರತ ಮತ್ತು ಪಾಕಿಸ್ತಾನ ನಡುವೆ ಕದನ ವಿರಾಮ ಒಪ್ಪಂದಕ್ಕೆ ಬರಲಾಗಿದೆ. ಸೋಮವಾರ ಎರಡೂ ದೇಶಗಳ ನಡುವೆ ಮಾತುಕತೆ ನಡೆಯಲಿದೆ. ಈ ಸಂದರ್ಭದಲ್ಲಿ, ಬಲೂಚ್ ಲಿಬರೇಶನ್ ಆರ್ಮಿ (ಃಐಂ) ಒಂದು ಪ್ರಮುಖ ಘೋಷಣೆಯನ್ನು ಮಾಡಿದೆ. ಭಾರತಕ್ಕೆ ಬೆಂಬಲ ಘೋಷಿಸಿರುವ ಬಲೂಚ್ ಲಿಬರೇಶನ್ ಆರ್ಮಿ, ಪಾಕಿಸ್ತಾನದ ಮೇಲೆ ದಾಳಿಗೆ ಕರೆ ನೀಡಿದೆ.

ನಾವು ಪಶ್ಚಿಮ ಗಡಿಯಿಂದ ಬೆಂಬಲ ನೀಡಲು ಸಿದ್ಧರಿದ್ದೇವೆ ಎಂದು ಹೇಳಿದರು. ಭಾರತ ಪಾಕಿಸ್ತಾನದ ವಿರುದ್ಧ ನಿರ್ಣಾಯಕ ಕ್ರಮ ಕೈಗೊಂಡರೆ, ಪಾಕಿಸ್ತಾನದ ಮೇಲೆ ದಾಳಿ ಮಾಡುವುದಾಗಿ ಅದು ಹೇಳಿದೆ. ಭಾರತದ ಕ್ರಮವನ್ನು ಸ್ವಾಗತಿಸುವುದಾಗಿ ಮತ್ತು ಭಾರತದ ಪರವಾಗಿ ಮಿಲಿಟರಿ ವಡೆಯಾಗಿ ನಿಲ್ಲುವುದಾಗಿ ಅದು ಘೋಷಿಸಿದೆ. ಪಾಕಿಸ್ತಾನವನ್ನು ಭಯೋತ್ಪಾದಕ ರಾಷ್ಟ್ರವೆಂದು ಗುರುತಿಸಬೇಕೆಂದು ಅದು ಒತ್ತಾಯಿಸಿದೆ. ಪಾಕಿಸ್ತಾನ ಸೇನೆಯ ವಿರುದ್ಧ ಹೋರಾಡುತ್ತಿರುವ ಬಲೂಚ್ ಲಿಬರೇಶನ್ ಆರ್ಮಿ (ಬಿಎಲ್‌ಎ) ಭಾನುವಾರ ಭಾರತದಿಂದ ಸಹಾಯ ಕೋರಿ ಪತ್ರ ಬರೆದಿದೆ. ಅದು ಭಾರತವನ್ನು ಪಾಕಿಸ್ತಾನದ ಮೇಲೆ ದಾಳಿ ಮಾಡಲು ಕೇಳಿಕೊಂಡಿದೆ. ಭಾರತ ಒಂದು ಹೆಜ್ಜೆ ಮುಂದಿಡಬೇಕು. ಪಶ್ಚಿಮ ದೇಶಗಳು ಅದನ್ನು ನಾಶಮಾಡಲು ಸಿದ್ದ ಎಂದು ಹೇಳಿವೆ. ಬಲೂಚ್ ಲಿಬರೇಶನ್ ಆರ್ಮಿ ಯಾವುದೇ ದೇಶದ ಕೈಗೊಂಬೆಯಲ್ಲ, ಬದಲಾಗಿ

ಪ್ರಾದೇಶಿಕ ಮಿಲಿಟರಿ ಮತ್ತು ರಾಜಕೀಯ ಸಮೀಕರಣಗಳಲ್ಲಿ ನಿರ್ಣಾಯಕ ಪಕ್ಷವಾಗಿ ಹೊರಹೊಮ್ಮಿದೆ ಎಂದು ಸ್ಪಷ್ಟಪಡಿಸಿದೆ. ಪಾಕಿಸ್ತಾನದ ಶಾಂತಿ ಮತ್ತು ಕದನ ವಿರಾಮ ಘೋಷಣೆಗಳನ್ನು ಸುಳ್ಳು ಪ್ರಚಾರ ಮತ್ತು ವಂಚನೆ ಎಂದು ಬಿಎಲ್‌ಎ ಬಣ್ಣಿಸಿದೆ. ಇದು ಪಾಕಿಸ್ತಾನದ ಕಾರ್ಯತಂತ್ರದ ನಡೆ ಮಾತ್ರ ಎಂದು ಪತ್ರದಲ್ಲಿ ಉಲ್ಲೇಖಿಸಲಾಗಿದೆ. ಪಾಕಿಸ್ತಾನದ ವಾಗ್ಮಿತೆಗೆ ಬಲಿಯಾಗದಂತೆ ಮತ್ತು ನಿರ್ಣಾಯಕ ಕ್ರಮ ಕೈಗೊಳ್ಳುವಂತೆ ಅವರು ಭಾರತ ಮತ್ತು ಪ್ರಾದೇಶಿಕ ಶಕ್ತಿಗಳನ್ನು ಒತ್ತಾಯಿಸಿದರು. ಬಿಎಲ್‌ಎ ಪಾಕಿಸ್ತಾನವನ್ನು ಭಯೋತ್ಪಾದಕ ರಾಷ್ಟ್ರ ಎಂದು ಬಣ್ಣಿಸಿದ್ದು, ಪಾಕಿಸ್ತಾನದ ಗುಪ್ತಚರ ಸಂಸ್ಥೆ ಐಎಸ್‌ಐ ಜಾಗತಿಕ ಭಯೋತ್ಪಾದನೆಯ ಕೇಂದ್ರವಾಗಿ ಕಾರ್ಯನಿರ್ವಹಿಸುತ್ತದೆ ಎಂದು ಹೇಳಿದೆ.

**ನಾವು ಪಾಕಿಸ್ತಾನ ಸೇನೆಯನ್ನು ಸೋಲಿಸಿದ್ದೇವೆ: ಬಲೂಚಿಸ್ತಾನ್ ಲಿಬರೇಶನ್ ಆರ್ಮಿ:**

ಬಲೂಚಿಸ್ತಾನದ ನೆಲದಲ್ಲಿ, ಯಾವುದೇ ಬಾಹ್ಯ ಬೆಂಬಲವಿಲ್ಲದೆ, ಪಾಕಿಸ್ತಾನದಂತಹ ವರಮಾಣು ಶಸ್ತ್ರಸಜ್ಜಿತ ಶಕ್ತಿಯನ್ನು ಹಲವು ರಂಗಗಳಲ್ಲಿ ಸೋಲಿಸಿರುವುದಾಗಿ ಬಲೂಚ್ ಲಿಬರೇಶನ್ ಆರ್ಮಿ ಘೋಷಿಸಿದೆ. ಪಾಕಿಸ್ತಾನವನ್ನು ಅದರ ಬೇರುಗಳಿಂದ ನಿರ್ಮೂಲನೆ ಮಾಡಲು ಭಾರತ ಅವರಿಗೆ ರಾಜಕೀಯ, ರಾಜತಾಂತ್ರಿಕ ಮತ್ತು ಮಿಲಿಟರಿ ಬೆಂಬಲವನ್ನು ನೀಡಬೇಕು. ಪಾಕಿಸ್ತಾನ ಇರುವವರೆಗೂ ಈ ಪ್ರದೇಶದಲ್ಲಿ ಭಯೋತ್ಪಾದನೆ ಮತ್ತು ಅಸ್ಥಿರತೆ ಮುಂದುವರಿಯುತ್ತದೆ ಎಂದು ಬಿಎಲ್‌ಎ ಹೇಳಿದೆ. ಭಾರತ ಪಾಕಿಸ್ತಾನವನ್ನು ನಾಶಮಾಡಲು ನಿರ್ಧರಿಸಿದರೆ, ಪಶ್ಚಿಮ ಗಡಿಯಿಂದ ಬಿಎಲ್‌ಎ ಮಿಲಿಟರಿ ಬೆಂಬಲವನ್ನು ನೀಡಲು ಸಿದ್ಧವಾಗಿದೆ. ಎಂದು ಬಲೂಚ್ ಲಿಬರೇಶನ್ ಆರ್ಮಿ ಹೇಳಿದೆ. ಈ ಅವಕಾಶವನ್ನು ಜಗತ್ತು ಗುರುತಿಸದಿದ್ದರೆ, ಬಲೂಚ್ ಜನರು ಸ್ವತಃ ಈ ಹೋರಾಟವನ್ನು ಮುಂದುವರಿಸುತ್ತಾರೆ. ಸ್ವತಂತ್ರ ಬಲೂಚಿಸ್ತಾನ್ ಮಾತ್ರ ಈ ಪ್ರದೇಶದಲ್ಲಿ ಶಾಶ್ವತ ಶಾಂತಿ, ಸಮತೋಲನ ಮತ್ತು ಭಯೋತ್ಪಾದನೆಯನ್ನು ಕೊನೆಗೊಳಿಸಲು ಸಾಧ್ಯ ಎಂದು ಬಿಎಲ್‌ಎ ಹೇಳಿದೆ.

## ಆಪರೇಷನ್ ಸಿಂದೂರ್ ಕಾರ್ಯಾಚರಣೆಯಲ್ಲಿ ಭಾರತ ರಫೇಲ್ ಯುದ್ಧ ವಿಮಾನವನ್ನು ಕಳೆದುಕೊಂಡಿದೆಯೇ?



**ನವದೆಹಲಿ, ಮೇ 11:** ಭಾರತೀಯ ಮಿಲಿಟರಿ ಅಧಿಕಾರಿಗಳು ಭಾನುವಾರ ಪತ್ರಿಕಾಗೋಷ್ಠಿ ನಡೆಸಿ ಆಪರೇಷನ್ ಸಿಂದೂರ್, ಅದರ ಪರಿಣಾಮ ಮತ್ತು ಫಲಿತಾಂಶಗಳ ಕುರಿತು ಪ್ರಮುಖ ವಿವರಗಳನ್ನು ಒದಗಿಸುತ್ತಾ, "ಉದ್ದೇಶ ಸಾಧಿಸಲಾಗಿದೆ" ಎಂದು ಹೇಳಿದರು. ಆಪರೇಷನ್ ಸಿಂದೂರ್ ಸಮಯದಲ್ಲಿ ರಫೇಲ್ ಯುದ್ಧ ವಿಮಾನಗಳನ್ನು ಹೊಡೆದುರುಳಿಸ ಲಾಯಿತು ಎಂಬ ವರದಿಗಳಿಗೆ ಪ್ರತಿಕ್ರಿಯಿಸಿದ ಏರ್ ಮಾರ್ಷಲ್ ಎ.ಕೆ. ಭಾರ್ತಿ ಅವರು ಹಕ್ಕುಗಳನ್ನು ದೃಢೀಕರಿಸಲಿಲ್ಲ ಅಥವಾ ನಿರಾಕರಿಸಲಿಲ್ಲ, ಬದಲಿಗೆ ನಷ್ಟಗಳು ಯಾವುದೇ ಯುದ್ಧ ಸನ್ನಿವೇಶದ ಭಾಗವಾಗಿದೆ ಎಂದು ಹೇಳಿದರು. ಪ್ರಶ್ನೆಯೆಂದರೆ ನಾವು ನಮ್ಮ ಉದ್ದೇಶವನ್ನು ಸಾಧಿಸಿದ್ದೇವೆಯೇ? ಉತ್ತರವು ಹೌದು ಎಂಬುದು ಅದ್ಭುತವಾಗಿದೆ. ವಿವರಗಳಿಗೆ ಸಂಬಂಧಿಸಿದಂತೆ, ಈ ಸಮಯದಲ್ಲಿ ನಾವು ಇನ್ನೂ ಯುದ್ಧದಲ್ಲಿದ್ದೇವೆ ಮತ್ತು ಎದುರಾಳಿಗೆ ಅನುಕೂಲವನ್ನು ನೀಡುತ್ತಿರುವುದರಿಂದ ನಾನು ಅದರ ಬಗ್ಗೆ ಪ್ರತಿಕ್ರಿಯಿಸಲು ಇಷ್ಟಪಡುವುದಿಲ್ಲ. ನಮ್ಮ ಎಲ್ಲಾ ಪೈಲಟ್ಗಳು ಮನೆಗೆ ಮರಳಿದ್ದಾರೆ ಎಂದು ಅವರು ಹೇಳಿದರು.

## ಬಾರ್ಮರ್‌ನಲ್ಲಿ ಡ್ರೋನ್ ದಾಳಿಗೆ ಯತ್ನ; ಬ್ಲ್ಯಾಕ್‌ಔಟ್ ಘೋಷಣೆ

ನವದೆಹಲಿ: ಭಯೋತ್ಪಾದನೆ ವಿಷಯದಲ್ಲಿ ಮೊದಲಿನಿಂದಲೂ ಕಪಟ ನಾಟಕ ಆಡುತ್ತಿದ್ದ ಪಾಕಿಸ್ತಾನ ಶನಿವಾರ ಕದನ ವಿರಾಮ ಘೋಷಣೆಯ ಬಳಿಕವೂ ಭಾರತದ ಮೇಲೆ ದಾಳಿ ನಡೆಸಿ ನರಿ ಬುದ್ಧಿ ತೋರಿಸಿತ್ತು. ಇದೀಗ ಭಾನುವಾರ ಕೂಡ ಕದನ ವಿರಾಮ ಉಲ್ಲಂಘಿಸಿ ರಾಜಸ್ಥಾನದ ಬಾರ್ಮರ್ನಲ್ಲಿ ಮತ್ತೆ ಡ್ರೋನ್ ದಾಳಿಗೆ ಯತ್ನಿಸಿದ್ದು, ಜಿಲ್ಲಾಡಳಿತ ಸಂಪೂರ್ಣ ವಿದ್ಯುತ್ ಕಡಿತಗೊಳಿಸಲು ಆದೇಶಿಸಿದೆ ಎಂದು ತಿಳಿದುಬಂದಿದೆ. ಬಾರ್ಮರ್ ಜಿಲ್ಲಾಧಿಕಾರಿ 'ಎಕ್ಸ್' ನಲ್ಲಿ ಪೋಸ್ಟ್ ಮಾಡಿದ್ದು, ನಿವಾಸಿಗಳು ಮನೆಯೊಳಗೆ ಇರಲು ಮತ್ತು ವಿದ್ಯುತ್ ಕಡಿತವನ್ನು ಗಮನಿಸಲು ಸೂಚಿಸಲಾಗಿದೆ.

ಬಾರ್ಮರ್ನಲ್ಲಿ ಡ್ರೋನ್ ಚಟುವಟಿಕೆ ಕಂಡು ಬಂದ ಕಾರಣ ಜಮ್ಮು ಪ್ರದೇಶದ ಉಧಂಪುರ ಮತ್ತು ಸಾಂಬಾ ಜಿಲ್ಲೆಗಳಲ್ಲಿ ಸಂಪೂರ್ಣ ವಿದ್ಯುತ್ ಕಡಿತಗೊಂಡಿದೆ. ಶನಿವಾರ ಪಾಕಿಸ್ತಾನ ಕದನ ವಿರಾಮ ಉಲ್ಲಂಘಿಸಿದ ಹಿನ್ನೆಲೆಯಲ್ಲಿ ಮುನ್ನೆಚ್ಚರಿಕೆ ಕ್ರಮವಾಗಿ ರಾಜಸ್ಥಾನದ ಜೈಸಲ್ಮೇರ್, ಬಾರ್ಮರ್ ಮತ್ತು ಇತರ ಗಡಿ ಪ್ರದೇಶಗಳಲ್ಲಿ ಭಾರೀ ಭದ್ರತೆ ವಹಿಸಲಾಗಿತ್ತು.

# ರಾಷ್ಟ್ರರಕ್ಷಣೆಗಾಗಿ ನಾವೆಲ್ಲರೂ ಘೋಷವಾಕ್ಯದಡಿ ತಿರಂಗಾಯಾತ್ರೆ




**ಬೆಂಗಳೂರು, ಮೇ.11–** ಪೆಹಲ್ಗಾಮ್ ದಾಳಿಗೆ ಪ್ರತಿಯಾಗಿ ನಮ್ಮ ಭಾರತೀಯ ಸೇನೆ ಆಪರೇಷನ್ ಸಿಂದೂರ ಮೂಲಕ ಪಾಕಿಸ್ತಾನದ ಉಗ್ರರ ನೆಲೆಗಳ ಮೇಲೆ ದಾಳಿ ನಡೆಸಿದೆ.

ಈ ಕಾರ್ಯಾಚರಣೆ ಯಶಸ್ವಿಯಾಗಲೆಂದು ಪ್ರಾರ್ಥಿಸಿ 'ರಾಷ್ಟ್ರರಕ್ಷಣೆಗಾಗಿ ನಾವೆಲ್ಲರೂ' ಎಂಬ ಘೋಷವಾಕ್ಯದಡಿ ಇಂದು ವಿದ್ಯಾರಣ್ಯಪುರದ ಎನ್‌ಟಿಐ ಆಟದ ಮೈದಾನದಿಂದ ಸಹಕಾರ ನಗರದ ಗಣೇಶ ದೇವಸ್ಥಾನದ ತನಕ ತಿರಂಗಾಯಾತ್ರೆ ಹಮ್ಮಿಕೊಳ್ಳಲಾಗಿತ್ತು.

ಯಾತ್ರೆಯಲ್ಲಿ ಕೇಂದ್ರ ಸಚಿವೆ ಶೋಭಾ ಕರಂದ್ಲಾಜೆ, ವಿಧಾನ ಪರಿಷತ್ ವಿಪಕ್ಷ ನಾಯಕ ಛಲವಾದಿ ನಾರಾಯಣಸ್ವಾಮಿ, ನಿವೃತ್ತ ಮಾರ್ಷಲ್ ಎಸ್.ಪಿಸಿಂಗ್ ಸೇರಿದಂತೆ ಇತರರು ಉಪಸ್ಥಿತರಿದ್ದರು.

ಶೋಭಾ ಕರಂದ್ಲಾಜೆ ಮಾತನಾಡಿ, ಭಾರತ ಎಂದಿಗೂ ಇನ್ನೊಂದು ದೇಶದ ಮೇಲೆ ದಂಡೆತ್ತಿ ಹೋದ ಉದಾಹರಣೆ ಇಲ್ಲ. ಭಾರತ ಶಾಂತಿ ಬಯಸುವ ದೇಶ. ಆದರೆ ಪಾಕಿಸ್ತಾನ ನಂಬಿಕೆ ಅರ್ಹ ದೇಶವಲ್ಲ. ಕದನ ವಿರಾಮ ಘೋಷಣೆಯಾದ ಮೂರು ಗಂಟೆಯಲ್ಲಿಯೇ ಉಲ್ಲಂಘನೆ ಮಾಡಿದೆ ಎಂದು ಹೇಳಿದರು. ವಿದ್ಯಾರಣ್ಯಪುರದ ಎನ್‌ಐಟಿ ಆಟದ ಮೈದಾನದಿಂದ ಸಹಕಾರ ನಗರದ ಗಣೇಶ ದೇವಸ್ಥಾನದವರೆಗೆ ತಿರಂಗ ಯಾತ್ರೆ ಸಾಗಿತ್ತು.



ಧಾರವಾಡದಲ್ಲಿ ಭಾನುವಾರ ನಡೆದ ರಾಷ್ಟ್ರೀಯ ಸ್ವಯಂಸೇವಕ ಸಂಘದ ಪದಾಧಿಕಾರಿಗಳ ತರಬೇತಿ ಶಿಬಿರ ಸಂಘ ಶಿಕ್ಷಾ ವರ್ಗದಲ್ಲಿ ಶಿಬಿರಾರ್ಥಿಗಳು ಕೌಶಲ್ಯ ಪ್ರದರ್ಶಿಸಿದರು.

# ಸಂಶಯಾಸ್ಪದ ವ್ಯಕ್ತಿ, ದೋಣಿ ಕಂಡರೆ ಕಾವಲುಪಡೆಗೆ ಮಾಹಿತಿ ನೀಡಲು ಮೀನುಗಾರರಿಗೆ ಬಬೀನ್ ಬೋಪಣ್ಣ ಸೂಚನೆ



**ಬೆಂಗಳೂರು, ಮೇ,11–** ಸಮುದ್ರದಲ್ಲಿ ಯಾವುದೇ ಸಂಶಯಾಸ್ಪದ ವ್ಯಕ್ತಿ ಅಥವಾ ದೋಣಿಗಳು ಕಂಡು ಬಂದರೆ ಕೂಡಲೇ ಕೋಸ್ಟ್ ಗಾರ್ಡ್, ಕರಾವಳಿ ಕಾವಲು ಪಡೆ ಅಥವಾ ಮೀನುಗಾರಿಕಾ ಇಲಾಖೆಗೆ ಮಾಹಿತಿ ನೀಡುವಂತೆ ಉತ್ತರ ಕನ್ನಡ ಜಿಲ್ಲಾ ಮೀನುಗಾರಿಕೆ ಇಲಾಖೆ ಜಂಟಿ ನಿರ್ದೇಶಕ ಬಬೀನ್ ಬೋಪಣ್ಣ ಮೀನುಗಾರರಿಗೆ ಕಾರವಾರದಲ್ಲಿ ಸೂಚನೆ ನೀಡಿದ್ದಾರೆ.

ನಾಳೆ ಅಣುಕು ಕವಾಯಿತು ನಡೆಯಲಿರುವ ಹಿನ್ನೆಲೆಯಲ್ಲಿ ಮೀನುಗಾರರು ಹಾಗೂ ದೋಣಿ ಮಾಲಿಕರ ಸಭೆ ನಡೆಸಿ ಅವರು ಮಾತಾನಾಡುತ್ತಿದ್ದರು. ಸಮುದ್ರದಲ್ಲಿ ಮೀನುಗಾರರು ಯಾವುದೇ ಆಮಿಷಕ್ಕೆ ಒಳಗಾಗದೇ ಕರಾವಳಿಯ ಸುರಕ್ಷತೆಗೆ ಒತ್ತು ನೀಡಬೇಕು. ಸಮುದ್ರಕ್ಕೆ ತೆರಳುವ ಮೀನುಗಾರರು ಅಕ್ಕ–ಪಕ್ಕದ ದೋಣಿಗಳು ಹಾಗೂ ಹೊರ ರಾಜ್ಯದ ದೋಣಿಗಳ ಮೇಲೆ ನಿಗಾ ಇಡಬೇಕು. ಜಿಲ್ಲೆಯಲ್ಲಿ ಎಂಟು ಬಂದರುಗಳಿವೆ.

ಹೀಗಾಗಿ ನಮ್ಮ ಜನರನ್ನು ಬಿಟ್ಟು ಬೇರೆಯವರ ಓಡಾಟ ಇದ್ದರೆ ತಕ್ಷಣ ಸಂಬಂಧಪಟ್ಟ ಅಧಿಕಾರಿಗಳಿಗೆ ತಿಳಿಸಬೇಕು ಎಂದರು. ಅಣಕು ಕಾರ್ಯಾಚರಣೆಗೆ ಮೀನುಗಾರರರು ಸಹಕಾರ ನೀಡಬೇಕು. ವಾಕ್ ಡ್ರಿಲ್ ಸಂದರ್ಭದಲ್ಲಿ ಯಾರು ಆತಂಕಕ್ಕೆ ಒಳಗಾಗುವುದು ಬೇಡ ಎಂದು ಸಲಹೆ ನೀಡಿದರು. ನಾಳೆ ರಾತ್ರಿ 7.30 ರಿಂದ 8ರ ವೇಳೆ ಸೈರನ್ ಕೂಗಲಾಗುವುದು. ಈ ಸಂದರ್ಭದಲ್ಲಿ ಲೈಟ್ ಬಂದ್ ಮಾಡಿ ಬ್ಲಾಕ್ ಔಟ್ ಮಾಡಬೇಕು. ಸೈರನ್ ಕೇಳಿ ಗೊಂದಲಕ್ಕೆ ಒಳಗಾಗಬಾರದು.

ಈಗಾಗಲೇ ಕೋಸ್ಟ್ ಗಾರ್ಡ್, ಕರಾವಳಿ ಕಾವಲು ಪಡೆ ಸಮುದ್ರದಲ್ಲಿ ಗಸ್ತು ತಿರುಗುತ್ತಿದೆ. ನಮ್ಮ ವ್ಯಾಪ್ತಿಯಲ್ಲಿ ನಡೆಯುವ ಚಟುವಟಿಕೆಗಳ ಬಗ್ಗೆ ಮಾಹಿತಿ ನೀಡಿ ದೇಶದ ಭದ್ರತೆಗೆ ಸಹಾಯ ಮಾಡಬೇಕು. ಶತ್ರುಗಳು ಯಾವ ಸ್ವರೂಪದಲ್ಲಾದರೂ ಬರಬಹುದು. ಈ ಎಲ್ಲಾ ವಿದ್ಯಮಾನಗಳ ಬಗ್ಗೆ ಸಮುದ್ರದಲ್ಲಿರುವ ಮೀನುಗಾರರಿಗೆ ಮೊದಲು ಮಾಹಿತಿ ಲಭ್ಯವಾಗುತ್ತದೆ. ಮೀನುಗಾರರು ಯಾವುದೇ ರೀತಿಯ ಆಮಿಷಕ್ಕೆ ಒಳಗಾಗದೆ, ದೇಶ ರಕ್ಷಣೆಗೆ ತಮ್ಮ ಕಿರು ಕಾಣಿಕೆ ನೀಡಬೇಕು ಎಂದರು.

# ಟಾರ್ಪಲ್ ಹಾಕಿಕೊಂಡು ಹೋಗದ ವಾಹನಗಳ ವಿರುದ್ಧ ಕ್ರಮಕ್ಕೆ ಆಯುಕ್ತ ದಯಾನಂದ್ ಸೂಚನೆ



**ಬೆಂಗಳೂರು, ಮೇ.11–** ನಿರ್ಮಾಣ ಸಾಮಗ್ರಿಗಳು ಸಾಗಿಸುವ ವೇಳೆ ಲಾರಿಗಳ ಮೇಲ್ಭಾಗದಲ್ಲಿ ಟಾರ್ಪಲ್ ಹಾಕಿಕೊಂಡು ಹೋಗದ ವಾಹನಗಳ ವಿರುದ್ಧ ಕ್ರಮ ಜರುಗಿಸುವುದಾಗಿ ಎಂದು ನಗರ ಪೊಲೀಸ್ ಆಯುಕ್ತ ಬಿ.ದಯಾನಂದ್ ತಿಳಿಸಿದ್ದಾರೆ.

ಸಂಚಾರ ಸಂಪರ್ಕ ದಿವಸ ಅಂಗವಾಗಿ ಕೊಟ್ಟಿಗೆಪಾಳ್ಯದಲ್ಲಿರುವ ರಾಷ್ಟ್ರೀಯ ಯುನಾನಿ ವೈದ್ಯಕೀಯ ಸಂಸ್ಥೆಯಲ್ಲಿ ನಡೆದ ಕಾರ್ಯಕ್ರಮದಲ್ಲಿ ಅವರು ಸಾರ್ವಜನಿಕರ ಪ್ರಶ್ನೆಗಳಿಗೆ ಉತ್ತರಿಸಿದರು.

ನಗರಾದ್ಯಂತ ನಿರ್ಮಾಣ ಚಟುವಟಿಕೆಗಳು ಹೆಚ್ಚಾಗುತ್ತಿದ್ದು, ಅವುಗಳಿಗೆ ಬೇಕಾದ ಕಲ್ಲು, ಜೆಲ್ಲಿ, ಸಿಮೆಂಟ್, ಮರಳುಗಳನ್ನು ಲಾರಿಗಳಲ್ಲಿ ಸಾಗಾಟ ಮಾಡಲಾಗುತ್ತಿದೆ. ಆದರೆ, ಲಾರಿ ಚಾಲಕರು, ಅವುಗಳ ಮೇಲ್ಭಾಗವನ್ನು ಮುಚ್ಚದೆ ನಿರ್ಮಾಣ ಸಾಮಗ್ರಿಗಳನ್ನು ಕೊಂಡೊಯ್ಯುತ್ತಿದ್ದಾರೆ. ಅವುಗಳ ಸಾಗಿಸುವ ವೇಳೆ ಧೂಳಿನ ಕಣಗಳು ಹೆಚ್ಚಾಗುತ್ತವೆ. ಜತೆಗೆ ಕೆಲವೊಮ್ಮೆ ಜೆಲ್ಲಿ ಕಲ್ಲುಗಳನ್ನು ರಸ್ತೆ ಮಧ್ಯೆಯೇ ಬೀಳಿಸಿಕೊಂಡು ಹೋಗುತ್ತಿದ್ದಾರೆ. ಅದ್ದರಿಂದ ರಸ್ತೆಯಲ್ಲಿ ಸಂಚಾರಕ್ಕೆ ತೊಡಕಾಗುತ್ತಿದೆ. ರಸ್ತೆ ಅಪಘಾತಗಳು ಆಗುತ್ತಿವೆ ಎಂದು ಸಾರ್ವಜನಿಕರು ಅಳಲು ತೋಡಿಕೊಂಡರು.

ಇದಕ್ಕೆ ಉತ್ತರಿಸಿದ ಪೊಲೀಸ್ ಆಯುಕ್ತರು, ಸದ್ಯ ಬೆಳಗ್ಗೆ ಮತ್ತು ಸಂಜೆಯ ಕೆಲವು ಗಂಟೆಗಳ ಕಾಲ ಭಾರೀ ವಾಹನಗಳ ಸಂಚಾರವನ್ನು ನಗರದಲ್ಲಿ ನಿರ್ಬಂಧಿಸಲಾಗಿದೆ. ಇನ್ನು ಲಾರಿಗಳ ಮೇಲ್ಭಾಗದಲ್ಲಿ ಟಾರ್ಪಲ್ ಹಾಕಿಕೊಂಡು ಹೋಗದ ವಾಹನಗಳ ವಿರುದ್ಧ ಕ್ರಮಕ್ಕೆ ಸಾರಿಗೆ ಇಲಾಖೆ ಜತೆ ಚರ್ಚಿಸಿ ಕ್ರಮಕೈಗೊಳ್ಳುವುದಾಗಿ ತಿಳಿಸಿದರು.

ಕಾರ್ಯಕ್ರಮದಲ್ಲಿ ಸಂಚಾರ ವಿಭಾಗದ ಜಂಟಿ ಪೊಲೀಸ್ ಆಯುಕ್ತ ಎಂ.ಎನ್.ಅನುಚೇತ್ ಹಾಗೂ ಇತರೆ ಅಧಿಕಾರಿಗಳು ಇದ್ದರು.

# ಶುಲ್ಕ ರಿಯಾಯಿತಿ ನೀಡಲು ಉನ್ನತ ಶಿಕ್ಷಣ ಇಲಾಖೆ ಚಿಂತನೆ

HIGHER EDUCATION DEPARTMENT

**ಬೆಂಗಳೂರು, ಮೇ.11–** ಕೆಲವು ಇಂಜಿನಿಯರಿಂಗ್ ಕೋರ್ಸ್‌ಗಳ ಶುಲ್ಕವನ್ನು ಕಡಿಮೆ ಮಾಡಲು ಉನ್ನತ ಶಿಕ್ಷಣ ಇಲಾಖೆ ಮುಂದಾಗಿದೆ.ಇತ್ತೀಚೆಗಷ್ಟೇ ಉನ್ನತ ಶಿಕ್ಷಣ ಇಲಾಖೆ ವೃತ್ತಿಪರ ಕೋರ್ಸ್‌ಗಳ ಶುಲ್ಕವನ್ನು ಶೇಕಡ 7.5 ರಷ್ಟು ಹೆಚ್ಚಳ ಮಾಡಿತ್ತು, ಇದರ ಬೆನ್ನಲ್ಲೇ ಬೇಡಿಕೆ ಇಲ್ಲದ ಕೋರ್ಸ್‌ಗಳಿಗೆ ಮರು ಜೀವ ನೀಡಲು ಮುಂದಾಗಿದೆ. ಕಡಿಮೆ ಸಂಖ್ಯೆಯ ವಿದ್ಯಾರ್ಥಿಗಳು ಪ್ರವೇಶ ಪಡೆಯುತ್ತಿರುವ ಸಿವಿಲ್ ಮತ್ತು ಮೆಕಾನಿಕಲ್ ಸೇರಿದಂತೆ ಕೆಲವು ಕೋರ್ಸ್‌ಗಳಿಗೆ ಶುಲ್ಕ ರಿಯಾಯಿತಿ ನೀಡಲು ಚಿಂತನೆ ನಡೆಸಿದೆ.

ಇದು ಸರ್ಕಾರಿ ಮತ್ತು ಅನುದಾನಿತ ಕಾಲೇಜುಗಳಲ್ಲಿ ಪ್ರವೇಶ ಪಡೆಯುವ ವಿದ್ಯಾರ್ಥಿಗಳಿಗೆ ಮಾತ್ರ ಅನ್ವಯವಾಗುತ್ತದೆ. ರಾಜ್ಯದಲ್ಲಿ 16 ಸರ್ಕಾರಿ, 8 ಅನುದಾನಿತ ಇಂಜಿನಿಯರಿಂಗ್ ಕಾಲೇಜುಗಳಿವೆ. 107 ಸರ್ಕಾರಿ ಪಾಲಿಟೆಕ್ನಿಕ್, 43 ಅನುದಾನಿತ ಪಾಲಿಟೆಕ್ನಿಕ್ ಕಾಲೇಜುಗಳಿದ್ದು, ಈ ಕಾಲೇಜುಗಳಲ್ಲಿ ಶುಲ್ಕದಲ್ಲಿ ರಿಯಾಯಿತಿ ನೀಡಲು ಉದ್ದೇಶಿಸಲಾಗಿದೆ. ವಿದ್ಯಾರ್ಥಿಗಳನ್ನು ಆಕರ್ಷಿಸಲು ಹಾಲಿ ನಿಗದಿಪಡಿಸಿರುವ 48 ಸಾವಿರ ರೂ. ಶುಲ್ಕದಲ್ಲಿ ರಿಯಾಯಿತಿ ನೀಡಲಾಗುವುದು ಎಂದು ಹೇಳಲಾಗಿದೆ.

# ಅತಿ ಸುರಕ್ಷಿತ ನೋಂದಣಿ ಫಲಕ ಅಳವಡಿಕೆಗೆ ಡಿ.5ರ ವರೆಗೂ ಗಡುವು




**ಬೆಂಗಳೂರು, ಮೇ.11–** ಅತಿ ಸುರಕ್ಷಿತ ನೋಂದಣಿ ಫಲಕಗಳನ್ನು (ಎಚ್‌ಎಸ್‌ಆರ್‌ಪಿ) ಕಡ್ಡಾಯ ಅಳವಡಿಕೆಗಿದ್ದ ಗಡುವನ್ನು ಹೈಕೋರ್ಟ್ ಡಿಸೆಂಬರ್ 5ರ ವರೆಗೂ ವಿಸ್ತರಣೆ ಮಾಡಿದೆ.

ನಿರ್ದಿಷ್ಟ ಉತ್ಪಾದಕರು ಮಾತ್ರ ಪೂರೈಸಬೇಕು ಮತ್ತು ನಿರ್ದಿಷ್ಟ ಡೀಲರ್‌ಗಳು ಮಾತ್ರ ಅಳವಡಿಸಬೇಕು ಎಂಬ ಸರ್ಕಾರದ ಆದೇಶವನ್ನು ಪ್ರಶ್ನಿಸಿ ಸಲ್ಲಿಸಿರುವ ಮೇಲ್ಮನವಿಗಳ ವಿಚಾರಣೆ ನಡೆಸಿದ ನ್ಯಾಯಮೂರ್ತಿಗಳಾದ ಕೆ ಕಾಮೇಶ್ವರ ರಾವ್ ಮತ್ತು ಕೆ.ರಾಜೇಶ್ ರೈ ಅವರ ನೇತೃತ್ವದ ವಿಭಾಗೀಯ ಪೀಠ ಈ ಆದೇಶ ಮಾಡಿದೆ.

ವಿಚಾರಣೆ ವೇಳೆ ಮೇಲ್ಮನವಿ ಅರ್ಜಿದಾರರ ಪರ ವಾದಿಸಿದ ಹಿರಿಯ ವಕೀಲರು, ಹಲವು ಅರ್ಜಿಗಳನ್ನು ಸಲ್ಲಿಕೆ ಮಾಡಿರುವುದರಿಂದ ಪೀಠಕ್ಕೆ ಅನುಕೂಲವಾಗುವ ರೀತಿಯಲ್ಲಿ ಸಮಗ್ರವಾದ ವರದಿ ನೀಡಲಾಗುವುದು. ಮುಂದಿನ ವಾರ ಯಾವುದೇ ದಿನ ವಿಚಾರಣೆ ನಡೆಸಬಹುದು ಎಂದು ಪೀಠಕ್ಕೆ ಮನವಿ ಮಾಡಿದರು. ರಾಜ್ಯ ಸರ್ಕಾರದ ಪರವಾಗಿ ಹಾಜರಾಗಿದ್ದ ಅಡ್ವೊಕೇಟ್ ಜನರಲ್ ಕೆ ಶಶಿಕಿರಣ್ ಶೆಟ್ಟಿ, ಏಕಸದಸ್ಯ ಪೀಠದ ಮಧ್ಯಂತರ ಆದೇಶವನ್ನು ಪ್ರಶ್ನಿಸಿ ಮೇಲ್ಮನವಿ ಸಲ್ಲಿಕೆ ಮಾಡಲಾಗಿದೆ.

ಈಗಾಗಲೇ ಚಾಲ್ತಿಯಲ್ಲಿರುವ ಮಧ್ಯಂತರ ಆದೇಶ ಮುಂದುವರಿಯಲಿ. ಅದರ ಜೊತೆಗೆ ಏಕ ಸದಸ್ಯ ಪೀಠವು ಪ್ರಕರಣ ನಿರ್ಧರಿಸಿ ಆದೇಶಿಸಬಹುದು ಎಂದು ತಿಳಿಸಿದರು.

ಇದಕ್ಕೆ ಸಮ್ಮತಿ ಸಿದ್ದ ಪೀಠವು ಮಧ್ಯಂತರ ಆದೇಶ ವಿಸ್ತರಿಸಿ, ವಿಚಾರಣೆಯನ್ನು ಡಿಸೆಂಬರ್.4ಕ್ಕೆ ವಿಚಾರಣೆ ಮುಂದೂಡಿತು.

# ರಾಜ್ಯದ 13 ವಿದ್ಯಾರ್ಥಿಗಳು ಸುರಕ್ಷಿತವಾಗಿ ವಾಪಸ್: ನಿಖಿಲ್ ಕುಮಾರಸ್ವಾಮಿ



**ಬೆಂಗಳೂರು, ಮೇ 11–** ಭಾರತ ಮತ್ತು ಪಾಕಿಸ್ತಾನದ ನಡುವೆ ಉಂಟಾಗಿದ್ದ ಉದ್ರಿಕ್ತ ಪರಿಸ್ಥಿತಿಯ ನಡುವೆ ಕಾಶ್ಮೀರದಲ್ಲಿ ಸಿಲುಕಿಕೊಂಡಿದ್ದ ರಾಜ್ಯದ 13 ವಿದ್ಯಾರ್ಥಿಗಳನ್ನು ಸುರಕ್ಷಿತವಾಗಿ ವಾಪಸ್ ಕರೆತರಲಾಗಿದೆ ಎಂದು ಜೆಡಿಎಸ್ ಯುವ ಘಟಕದ ರಾಜ್ಯಾಧ್ಯಕ್ಷ ನಿಖಿಲ್ ಕುಮಾರಸ್ವಾಮಿ ಅವರು ತಿಳಿಸಿದ್ದಾರೆ.

ಈ ಬಗ್ಗೆ ಮಾಧ್ಯಮ ಹೇಳಿಕೆ ಬಿಡುಗಡೆ ಮಾಡಿರುವ ಅವರು. ಕಾಶ್ಮೀರದ ಕೃಷಿ ವಿಶ್ವವಿದ್ಯಾಲಯದಲ್ಲಿ ರಾಜ್ಯದ ಈ ವಿದ್ಯಾರ್ಥಿಗಳು ವ್ಯಾಸಂಗ ಮಾಡುತ್ತಿದ್ದರು. ಭಯೋತ್ಪಾದಕರು ಪಹಲ್ಗಾಮ್‌ನಲ್ಲಿ ಪ್ರವಾಸಿಗರ ಮೇಲೆ ಪೈಶಾಚಿಕ ದಾಳಿ ನಡೆಸಿದ ನಂತರ ಭಾರತವು ನೆರೆಯ ರಾಷ್ಟಕ್ಕೆ ತಕ್ಕ ತಿರುಗೇಟು ನೀಡಿತ್ತು.

ಈ ಸಂದರ್ಭದಲ್ಲಿ ಯುದ್ಧ ಸನ್ನಿವೇಶ ತಲೆದೋರಿತ್ತು. ತಮ್ಮನ್ನು ರಕ್ಷಣೆ ಮಾಡುವಂತೆ ವಿದ್ಯಾರ್ಥಿಗಳು ಮನವಿ ಮಾಡಿದ್ದರು ಎಂದು ಅವರು ಮಾಹಿತಿ ನೀಡಿದ್ದಾರೆ. ಶುಕ್ರವಾರದಂದು ನಾನು ಚನ್ನಪಟ್ಟಣದ ಕಾರ್ಯಕ್ರಮದಲ್ಲಿ ಭಾವಿಯಾಗಿದ್ದ ಸಂದರ್ಭದಲ್ಲಿ ತಗಚಗೆರೆ ಗ್ರಾಮದ ಜೆಡಿಎಸ್ ಮುಖಂಡರು ಈ ಬಗ್ಗೆ ಮನವಿ ಮಾಡಿದರು. ತಮ್ಮ ಪುತ್ರ ಹರ್ಷಿತ್ ಅವರು ಕಾಶ್ಮೀರದ ಕೃಷಿ ವಿಶ್ವವಿದ್ಯಾಲಯದಲ್ಲಿ ಓದುತ್ತಿದ್ದು, ಯುದ್ಧ ಭೀತಿಯಿಂದ ಅವರನ್ನು ಕರ್ನಾಟಕಕ್ಕೆ ಕರೆತರಲು ನನ್ನ ಸಹಾಯ ಕೋರಿದರು.

ಅಲ್ಲದೆ, ಕರ್ನಾಟಕದ ಇನ್ನೂ ಹಲವಾರು ವಿದ್ಯಾರ್ಥಿಗಳು ಅಲ್ಲಿ ಓದುತ್ತಿರುವ ಮಾಹಿತಿ ಸಿಕ್ಕಿತು. ಕೂಡಲೇ ನಾನು ಈ ವಿಷಯವನ್ನು ಕೇಂದ್ರ ಸಚಿವರಾದ ಹೆಚ್.ಡಿ. ಕುಮಾರಸ್ವಾಮಿ ಅವರ ಗಮನಕ್ಕೆ ತಂದಾಗ ಅವರು ಕೂಡಲೇ ಸಂಬಂಧಪಟ್ಟ ಅಧಿಕಾರಿಗಳೊಂದಿಗೆ ಚರ್ಚಿಸಿದರು ಹಾಗೂ ಮಕ್ಕಳ ರಕ್ಷಣೆಗಾಗಿ ತಮ್ಮ ಸಚಿವಾಲಯದ ಅಧಿಕಾರಿಗಳನ್ನು ನಿಯೋಜಿಸಿದರು. ಈ ಮೂಲಕ ಕೃಷಿ ವಿಶ್ವವಿದ್ಯಾಲಯದಲ್ಲಿ ವಿದ್ಯಾಭ್ಯಾಸ ಮಾಡುತ್ತಿರುವ ಕರ್ನಾಟಕದ 13 ವಿದ್ಯಾರ್ಥಿಗಳನ್ನು ಮರಳಿ ನಮ್ಮ ನಾಡಿಗೆ ಕರೆತರುವ ವ್ಯವಸ್ಥೆಯನ್ನು ತ್ವರಿತಗತಿಯಲ್ಲಿ ಮಾಡಲಾಯಿತು ಎಂದು ನಿಖಿಲ್ ಅವರು ತಿಳಿಸಿದ್ದಾರೆ.

ಎಲ್ಲಾ ವಿದ್ಯಾರ್ಥಿ ಗಳು ಒಮ್ಮುವಿನಿಂದ ಹೊರಟು ನಿನ್ನೆ ರಾತ್ರಿ ನವದೆಹಲಿ ತಲುಪಿದ್ದರು. ಅಲ್ಲಿಂದ ಅವರೆಲ್ಲರನ್ನೂ ಬೆಂಗಳೂರಿಗೆ ಸುರಕ್ಷಿತವಾಗಿ ಕರೆತರುವ ವ್ಯವಸ್ಥೆ ಮಾಡಲಾಯಿತು. ಕಾಶ್ಮೀರದಿಂದ ಕರ್ನಾಟಕಕ್ಕೇ ಮರಳುತ್ತಿರುವ ವಿದ್ಯಾರ್ಥಿಗಳ ಜೊತೆಯಲ್ಲಿರುವ ಚನ್ನಪಟ್ಟಣ ತಾಲ್ಲೂಕಿನ ವಿದ್ಯಾರ್ಥಿ ಹರ್ಷಿತ್ ಅವರೊಂದಿಗೆ ವಿಡಿಯೋ ಕರೆ ಮಾಡಿ ಎಲ್ಲರ ಯೋಗಕ್ಷೇಮ ವಿಚಾರಿಸಿದೆ ಎಂದಿದ್ದಾರೆ. ವಿದ್ಯಾರ್ಥಿಗಳನ್ನು ಬೆಂಗಳೂರಿಗೆ ಕರೆತರಲು ಸಹಾಯ ಮಾಡಿದ ಎಲ್ಲಾ ಕೇಂದ್ರ ಸರ್ಕಾರದ ಇಲಾಖೆಯ ಅಧಿಕಾರಿಗಳಿಗೂ ಧನ್ಯವಾದಗಳನ್ನು ನಿಖಿಲ್ ಕುಮಾರಸ್ವಾಮಿ ಅವರು ತಿಳಿಸಿದ್ದಾರೆ.

# ಆಸ್ತಿ ಆದಾಯ ಸಂಗ್ರಹದಲ್ಲಿ ಗ್ರಾಮ ಪಂಚಾಯಿತಿಗಳು ಮುಂದು

**ಬೆಂಗಳೂರು, ಮೇ.11–** ರಾಜ್ಯದಲ್ಲಿ ಗ್ರಾಮ ಪಂಚಾಯಿತಿಗಳು ಸಹ ಆಸ್ತಿ ಆದಾಯ ಸಂಗ್ರಹದಲ್ಲಿ ಮುಂದಿವೆ. ಕಳೆದ ಎರಡು ವರ್ಷಕ್ಕೆ ಹೋಲಿಸಿದರೆ 2024–25ನೇ ಸಾಲಿನಲ್ಲಿ 505 ಕೋಟಿ ರೂ. ಅಧಿಕ ತೆರಿಗೆ ಸಂಗ್ರಹಿಸಿವೆ.

ಪ್ರಸ್ತುತ 5,950 ಗ್ರಾಮ ಪಂಚಾಯಿತಿಗಳಲ್ಲಿ 2022–23ನೇ ಸಾಲಿನಲ್ಲಿ 571 ಕೋಟಿ ರೂ., 2023–24ನೇ ಸಾಲಿನಲ್ಲಿ 767 ಕೋಟಿ ರೂ.ಮತ್ತು 2024–25ನೇ ಸಾಲಿನಲ್ಲಿ 1,272 ಕೋಟಿ ರೂ. ಆಸ್ತಿ ತೆರಿಗೆ ಸಂಗ್ರಹ ಮಾಡಿವೆ. ಈ ಪೈಕಿ ಬೆಂಗಳೂರು ನಗರ ಮತ್ತು ಬೆಂಗಳೂರು ಗ್ರಾಮಾಂತರ ಜಿಲ್ಲೆಯ ಗ್ರಾಮ ಪಂಚಾಯಿತಿಯಿಂದಲೇ ಶೇ.30 ಆಸ್ತಿ ತೆರಿಗೆ ಕ್ರೋಡೀಕರಣವಾಗುತ್ತಿದೆ ಎಂದು ಗ್ರಾಮೀಣಾ ಮತ್ತು ಪಂಚಾಯತ್ ರಾಜ್ ಇಲಾಖೆಯ ಅಂಕಿಅಂಶಗಳಿಂದ ಬಹಿರಂಗವಾಗಿದೆ.

ಬೆಂಗಳೂರು ನಗರ ವ್ಯಾಪ್ತಿಯಲ್ಲಿ ಇರುವ 85 ಗ್ರಾಮ ಪಂಚಾಯಿತಿಗಳಿಂದ 296 ಕೋಟಿ ರೂ. ಮತ್ತು ಬೆಂಗಳೂರು ಗ್ರಾಮಾಂತರದಲ್ಲಿ ಇರುವ 101 ಗ್ರಾಮ ಪಂಚಾಯಿತಿಗಳಿಂದ 120 ಕೋಟಿ ರೂ. ಆಸ್ತಿ ತೆರಿಗೆ ವಸೂಲಿ ಮಾಡಲಾಗಿದೆ.ಆದರೆ, ರಾಮನಗರ ಜಿಲ್ಲೆ ರಾಮನಗರ ತಾಲೂಕಿನ ಮಂಚನಾಯನಕಹಳ್ಳಿ ಗ್ರಾಮ ಪಂಚಾಯಿತಿ 2024–25ನೇ ಸಾಲಿನಲ್ಲಿ 18.37 ಕೋಟಿ ರೂ. ಸಂಗ್ರಹ ಮಾಡುವ ಮೂಲಕ ಪ್ರಥಮ ಸ್ಥಾನದಲ್ಲಿದೆ.

ಬಿಡದಿ ಕೈಗಾರಿಕಾ ಪ್ರದೇಶ ಇದರ ವ್ಯಾಪ್ತಿಯಲ್ಲಿ ಇರುವ ಕಾರಣಕ್ಕೆ ಹೆಚ್ಚಿನ ತೆರಿಗೆ ಸಂಗ್ರಹವಾಗುತ್ತಿದೆ. ಬೆಂಗಳೂರು ನಗರ ಜಿಲ್ಲೆ ಆನೇಕಲ್ ತಾಲೂಕಿನ ಹೆನ್ನಾಗರ ಗ್ರಾಮ ಪಂಚಾಯಿತಿ 18.19 ಕೋಟಿ ರೂ. ಮತ್ತು ಬೆಂಗಳೂರು ಗ್ರಾಮಾಂತರ ಜಿಲ್ಲೆ ದೇವನಹಳ್ಳಿ ಅನ್ನೇಶ್ವರ ಗ್ರಾಮ ಪಂಚಾಯಿತಿ 15.03 ಕೋಟಿ ರೂ. ಸಂಗ್ರಹ ಮಾಡುವ ಮೂಲಕ 2 ಮತ್ತು 3ನೇ ಸ್ಥಾನದಲ್ಲಿವೆ. ಆದರೆ, 2023–24ನೇ ಸಾಲಿನಲ್ಲಿ ಹೆನ್ನಾಗರ ಗ್ರಾಮ ಪಂಚಾಯಿತಿ 16.09 ಕೋಟಿ ರೂ. ಸಂಗ್ರಹ ಮಾಡುವ ಮೂಲಕ ಪ್ರಥಮ ಸ್ಥಾನದಲ್ಲಿ ಇತ್ತು. ಇದೇ ವೇಳೆ ಮಂಚನಾಯಕನಹಳ್ಳಿ ಗ್ರಾಮ ಪಂಚಾಯಿತಿ 15.51 ಕೋಟಿ ರೂ. ವಸೂಲಿಗೆ ತೃಪ್ತಿಪಟ್ಟು 2ನೇ ಸ್ಥಾನದಲ್ಲಿತ್ತು. ಹೆನ್ನಾಗರ ಗ್ರಾಮ ಪಂಚಾಯಿತಿ ವ್ಯಾಪ್ತಿಯಲ್ಲಿ 350 ಕೈಗಾರಿಕೆಗಳು ಇದ್ದು, ಇದರಿಂದ ಹೆಚ್ಚಿನ ಆದಾಯ ಬರಲಿದೆ. ಅದೇ ರೀತಿಯಾಗಿ ಅನ್ನೇಶ್ವರ ಗ್ರಾಮ ಪಂಚಾಯಿತಿ ವ್ಯಾಪ್ತಿಯಲ್ಲಿ ಕೆಂಪೇಗೌಡ ಅಂತಾರಾಷ್ಟ್ರೀಯ ವಿಮಾನ ನಿಲ್ದಾಣ ಇರುವ ಕಾರಣಕ್ಕೆ ಅದರ ಖಜಾನೆಗೂ ಹೆಚ್ಚು ಹೆಚ್ಚು ಆಸ್ತಿ ತೆರಿಗೆ ತುಂಬುತ್ತಿದೆ ಎಂದು ಅಧಿಕಾರಿಗಳು ತಿಳಿಸಿದ್ದಾರೆ.

ಕೈರಿಕಾ ಪ್ರದೇಶ ಅಭಿವೃದ್ಧಿ ಮಂಡಳಿ (ಕೆಐಎಡಿಬಿ) ಕಾಯ್ದೆಗೆ ತಿದ್ದುಪಡಿ ತಂದು ಕೈಗಾರಿಕಾ ಪ್ರದೇಶಗಳನ್ನು ವಿಶೇಷ ಆರ್ಥಿಕ ವಲಯ ಎಂದು ಘೋಷಣೆ ಮಾಡಿವೆ. ಈ ಪ್ರದೇಶದ ಅಭಿವೃದ್ಧಿ ಮತ್ತು ತೆರಿಗೆ ಸಂಗ್ರಹವನ್ನು ಕೆಐಎಡಿಬಿಯೇ ವಹಿಸಿಕೊಳ್ಳುವ ಪರಿಣಾಮ ಕೆಲ ಗ್ರಾಮ ಪಂಚಾಯಿತಿಗಳಿಗೆ ಆದಾಯ ಖೋತಾ ಆಗಲಿದೆ. ಮಂಚನಾಯಕನ ಹಳ್ಳಿ, ಅನ್ನೇಶ್ವರ ಮತ್ತು ಹೆನ್ನಾಗರ ಸೇರಿದಂತೆ ಹಲವು ಗ್ರಾಮ ಪಂಚಾಯಿತಿ ಆದಾಯಕ್ಕೆ ಕತ್ತರಿ ಬೀಳಲಿದೆ. ಬಾಕಿ ತೆರಿಗೆಯೂ ಹೆಚ್ಚಿದೆ.

ರಾಜ್ಯದ 5950 ಗ್ರಾಮ ಪಂಚಾಯಿತಿಗಳಲ್ಲಿ ಆಸ್ತಿ ತೆರಿಗೆ ಸಂಗ್ರಹ ಆಗುತ್ತಿರುವ 1272 ಕೋಟಿ ರೂ. ಗಿಂತ ಬಾಕಿ ಇರುವ ಪಾಲು ಹೆಚ್ಚಾಗಿದೆ. ಪ್ರಸ್ತುತ 2657 ಕೋಟಿ ರೂ. ಬಾಕಿ ಉಳಿದಿದೆ. ಇದನ್ನು ವಸೂಲಿ ಮಾಡುವಲ್ಲಿ ಗ್ರಾಮ ಪಂಚಾಯಿತಿ ನಿರ್ಲಕ್ಷ್ಯ ವಹಿಸಿವೆ.

# ಕನ್ನಡ ಕೈವಲ್ಯ ಸಾಹಿತ್ಯ ಬಳಗದಿಂದ ನಾಲ್ಕು ಪುಸ್ತಕಗಳ ಲೋಕಾರ್ಪಣೆ




ಕನ್ನಡ ಕೈವಲ್ಯ ಸಾಹಿತ್ಯ ಬಳಗದಿಂದ ಹೊಸ ಕೋಟೆ ತಿರುಮಲ ಶೆಟ್ಟಿಹಳ್ಳಿಯಲ್ಲಿ ನಾಲ್ಕು ಪುಸ್ತಕಗಳ ಲೋಕಾರ್ಪಣೆಯಾಯಿತು.


ಬೋ. ಪಾ.ವೆಂಕಟೇಶ ರವರ ಕೈವಲ್ಯ ಸಾಹಿತಿಯ ಕರಾರ್ಪಿತ, ಹಾಗೂ ಸಾಹಿತ್ಯ ಹನಿಗಳ ರಸಾಯನ, ವಿನು ಕುಮಾರ್ ರವರ ಮೌನ ಬರಹವಾದಾಗ, ದೇ. ನಾರಾಯಣಸ್ವಾಮಿ ರವರ ಕಾಡು ಬೆಳದಿಂಗಳ ಸಿರಿ., ಲೋಕಾರ್ಪಣೆಗೊಂಡ ಕೃತಿಗಳು ಅಧ್ಯಕ್ಷತೆ ವಹಿಸಿದ್ದ ಸಾಹಿತಿ, ಕನ್ನಡ ಪರ ಸಂಘಟಕ ಲಕ್ಷ್ಮೀ ಶ್ರೀನಿವಾಸರವರು ಮಾತನಾಡಿ ಕಾವ್ಯ ರಚಿಸುವ ವರು ಹೆಚ್ಚು ಹೆಚ್ಚು. ಕಾವ್ಯಗಳನ್ನು ಓದಬೇಕು, ಅದರ ತಿರುಳನ್ನು ತಿಳಿದು ಕೇಳುಗರು ಆಸ್ವಾದಿಸುವಂತೆ ಮಾಡಬೇಕು. ಸಮಾಜದ ಸೇವೆ ಮಾಡಿದರೆ ಸಮಾಜ ತಡವಾಗಿಯಾದರೂ ನಮ್ಮನ್ನು ಗುರುತಿಸುತ್ತದೆ. ಕನ್ನಡ ಭಾಷೆಗೆ ಎಲ್ಲರನ್ನು ತನ್ನತ್ತ ಸೆಳೆದುಕೊಳ್ಳುವ ಶಕ್ತಿಯಿದೆ. ಭಾಷೆಯನ್ನು ತಾಯಿಯಷ್ಟೇ ಪ್ರೀತಿಸಿದರೆ ಭಾಷೆ ಸಮೃದ್ಧವಾಗುತ್ತದೆ. ಎಂದು ನುಡಿದರು.

ಮುಖ್ಯ ಅತಿಥಿಗಳಾಗಿ ಡಾ. ಬಾಲ ಗುರು ಮಾರ್ತಿ ಉಪನಿದೇಶಕ, ಶಿಕ್ಷಣ ಇಲಾಖೆ ತುಮಕೂರು, ಮಲ್ಲಿಕಾರ್ಜುನ ಮಹಾಮನೆ, ರಾಜೇಂದ್ರ,, ಶ್ರೀಮತಿ ವಿಶಾಲಾರಾಧ್ಯ, ಶ್ರೀಮತಿ ರೂಪ ಹೊಸದುರ್ಗ ಭಾಗವಹಿಸಿದ್ದರು. ಮಂಜುಳ ಪಾವಗಡರ ನಿರೂಪಣೆ, ಭೋ. ಪಾ.ವೆಂಕಟೇಶ್ ಪ್ರಾಸ್ತಾವಿಕ ನುಡಿ ನುಡಿದರು.

# ಸಹೋದ್ಯೋಗಿಗಳ ಅಶ್ಲೀಲ ಫೋಟೋ ಮಾರ್ಫ್ ಜಾಲತಾಣದಲ್ಲಿ ಪೋಸ್ಟ್ ಮಾಡುತ್ತಿದ್ದವನ ಬಂಧನ

**ಬೆಂಗಳೂರು, ಮೇ.11–** ಮಹಿಳೆಯರ ಫೋಟೋಗಳನ್ನು ಕ್ಲಿಕ್ಕಿಸಿ ಅಶ್ಲೀಲವಾಗಿ ಎಡಿಟ್ ಮಾಡಿ ಸಾಮಾಜಿಕ ಜಾಲತಾಣಗಳಲ್ಲಿ ಪೋಸ್ಟ್ ಮಾಡುತ್ತಿದ್ದ ಕಿರಾತಕನನ್ನು ಬಾಣಸವಾಡಿ ಠಾಣೆ ಪೊಲೀಸರು ಬಂಧಿಸಿದ್ದಾರೆ. ಆಶಿಶ್ ಮೊನ್ನಪ್ಪ ಬಂಧಿತ ಆರೋಪಿ. ಕೊಡಗು ಜಿಲ್ಲೆಯ ಮಡಿಕೇರಿ ಮೂಲದ ಅಶಿಶ್, ಪತ್ನಿ–ಮಕ್ಕಳೊಂದಿಗೆ ಜಕ್ಕೂರಿನ ಬಾಡಿಗೆ ಮನೆಯಲ್ಲಿದ್ದ ವಾಸವಾಗಿದ್ದ. ಖಾಸಗಿ ಕಂಪನಿಯಲ್ಲಿ ಕೆಲಸ ಮಾಡುತ್ತಿದ್ದ ಈತ ಕಳೆದ ಜನವರಿಯಲ್ಲಿ ಕೆಲಸ ಬಿಟ್ಟಿದ್ದ. ಬಳಿಕ ಬೇರೆ ಕಂಪನಿಗೆ ಕೆಲಸಕ್ಕೆ ಸೇರಲು ರೆಸ್ಯೂಮ್ ಕಳುಹಿಸಲೆಂದು ಮಹಿಳಾ ಸಹೋದ್ಯೋಗಿಯೊಬ್ಬರ ಲ್ಯಾಪ್‌ಟಾಪ್ ಪಡೆದಿದ್ದ. ಕೆಲ ದಿನಗಳ ಬಳಿಕ ಲ್ಯಾಪ್ ಟಾಪ್‌ನ್ನು ವಾಪಾಸ್ ನೀಡಿದ್ದ. ಆದರೆ ಲ್ಯಾಪ್ ಟಾಪ್ ಕೊಡುವಾಗ ತಾನು ಮಹಿಳೆಯರ ಫೋಟೋಗಳನ್ನು ಅಶ್ಲೀಲವಾಗಿ ಎಡಿಟ್ ಮಾಡಿಟ್ಟಿದ್ದ ಫೋಲ್ಡರ್ ಡಿಲೀಟ್ ಮಾಡುವುದನ್ನು ಮರೆತಿದ್ದ. ಮಹಿಳೆ ತನ್ನ ಲ್ಯಾಪ್ ಟಾಪ್ ಚೆಕ್ ಮಾಡಿದಾಗ ಕಂಪನಿಯ ಮಹಿಳಾ ಸಹೋದ್ಯೋಗಿಗಳ ಫೋಟೋಗಳನ್ನು ಮಾರ್ಫ್ ಮಾಡಿರುವುದು ಕಂಡುಬಂದಿದೆ. ಈ ಹಿನ್ನೆಲೆಯಲ್ಲಿ ಆತನನ್ನು ಪ್ರಶ್ನಿಸಿ ಪ್ರಕರಣ ದಾಖಲಿಸಲಾಗಿತ್ತು. ಪೊಲೀಸರು ಆರೋಪಿಯನ್ನು ಬಂಧಿಸಿ ನ್ಯಾಯಾಂಗ ಬಂಧನಕ್ಕೆ ಒಪ್ಪಿಸಿದ್ದಾರೆ.

# ರನ್ಯಾರಾವ್ ಜಾಮೀನು ಅರ್ಜಿ ವಿಚಾರಣೆ: ಇಂದು ಆದೇಶ ಪ್ರಕಟ



**ಬೆಂಗಳೂರು, ಮೇ.11–** ಚಿನ್ನ ಅಕ್ರಮ ಸಾಗಾಟ ಪ್ರಕರಣದಲ್ಲಿ ಬಂಧನಕ್ಕೊಳಗಾಗಿರುವ ನಟಿ ರನ್ಯಾರಾವ್ ಜಾಮೀನು ಅರ್ಜಿ ವಿಚಾರಣೆ ಆದೇಶವನ್ನು ನಗರದ ಆರ್ಥಿಕ ಅಪರಾಧಗಳ ವಿಶೇಷ ನ್ಯಾಯಾಲಯ ಸೋಮವಾರ ಪ್ರಕಟಿಸಲಿದೆ.

ರನ್ಯಾ ಈ ಹಿಂದೆ ವಿಶೇಷ ನ್ಯಾಯಾಲಯ ಮತ್ತು ಹೈಕೋರ್ಟ್‌ನಿಂದ ಜಾಮೀನು ಪಡೆಯಲು ಆಕೆ ವಿಫಲ ಪ್ರಯತ್ನಗಳನ್ನು ಮಾಡಿದರು. ಈ ಮಧ್ಯೆ ಡಿಆರ್‌ಐ ನಿಗದಿತ ಅವಧಿಯಲ್ಲಿ ಚಾರ್ಜ್‌ಶೀಟ್ ಸಲ್ಲಿಸದ ಕಾರಣ ಶಾಸನಬದ್ಧ ಜಾಮೀನಿಗಾಗಿ ಅರ್ಜಿ ಸಲ್ಲಿಸಿದ್ದೇವೆ. ಆದ್ದರಿಂದ ರನ್ಯಾರಾವ್‌ಗೆ ಜಾಮೀನು ಮಂಜೂರು ಮಾಡಬೇಕೆಂದು ಆಕೆ ಪರ ವಕೀಲ ಕಿರಣ್ ಜವಳಿ ಹೇಳಿದರು. ಆದ್ದರಿಂದ ಅರ್ಜಿ ವಿಚಾರಣೆ ನಡೆಸಿದ ಕೋರ್ಟ್ ಸೋಮವಾರ ತೀರ್ಪು ನೀಡುವುದಾಗಿ ತಿಳಿಸಿದೆ.

ಹಿರಿಯ ಐಪಿಎಸ್ ಅಧಿಕಾರಿ ರಾಮಚಂದ್ರ ರಾವ್ ಅವರ ಪುತ್ರಿ ರನ್ಯಾ ಅವರನ್ನು ಮಾ.3ರಂದು ಕೆಂಪೇಗೌಡ ವಿಮಾನ ನಿಲ್ದಾಣದಲ್ಲಿ ಕಂದಾಯ ಗುಪ್ತಚರ ನಿರ್ದೇಶನಾಲಯದ ಅಧಿಕಾರಿಗಳು, ದುಬೈಯಿಂದ ಚಿನ್ನವನ್ನು ಕಳ್ಳಸಾಗಣೆ ಮಾಡಿದ ಆರೋಪದ ಮೇಲೆ ಬಂಧಿಸಿ 14.2 ಕೆಜಿ ಚಿನ್ನವನ್ನು ವಶಪಡಿಸಿಕೊಂಡಿದ್ದರು.



ಭಾರತೀಯ ಸೇನೆಯನ್ನು ಬೆಂಬಲಿಸಲು ಭಾನುವಾರ ಮೈಸೂರಿನಲ್ಲಿ ರ್‍ಯಾಲಿ ಫಾರ್ ದಿ ನೇಷನ್ ಬೈಕ್ ರ್‍ಯಾಲಿ ಆಯೋಜಿಸಲಾಗಿತ್ತು.

# ಕಲ್ಯಾಣ ಕರ್ನಾಟಕ ಪ್ರದೇಶಾಭಿವೃದ್ಧಿಮಂಡಳಿ ಸಭೆ: 5 ಸಾವಿರ ಕೋಟಿ ಮೊತ್ತದ ಕ್ರಿಯಾ ಯೋಜನೆ ರೂಪಿಸಲು ಒಪ್ಪಿಗೆ




**ಕಲಬುರಗಿ, ಮೇ. 11–** ಕಲ್ಯಾಣ ಕರ್ನಾಟಕ ಪ್ರದೇಶ ಅಭಿವೃದ್ಧಿ ಮಂಡಳಿಗೆ 2025–26ನೇ ಆರ್ಥಿಕ ಸಾಲಿಗೆ ರಾಜ್ಯ ಸರ್ಕಾರ ಘೋಷಿಸಿರುವ 5,000 ಕೋಟಿ ರೂ. ಮೊತ್ತದಲ್ಲಿ ರಾಜ್ಯ ವಲಯದ ಕಾರ್ಯಕ್ರಮಗಳು, ಮೈಕ್ರೋ ಮತ್ತು ಮ್ಯಾಕ್ರೋ ಕ್ರಿಯಾ ಯೋಜನೆ ರೂಪಿಸಲು ಇಂದಿಲ್ಲಿ ಜರುಗಿದ ಮಂಡಳಿ ಸಭೆಯಲ್ಲಿ ಸರ್ವಾನುಮತದ ನಿರ್ಣಯ ಕೈಗೊಂಡಿದೆ ಎಂದು ಮಂಡಳಿಯ ಅಧ್ಯಕ್ಷ ಡಾ. ಅಜಯ್‌ಸಿಂಗ್ ತಿಳಿಸಿದರು.

ಮಂಡಳಿಯ ಸಭೆಯ ನಂತರ ಮಧ್ಯಮಗಳೊಂದಿಗೆ ಮಾತನಡಿದ ಅವರು, ಕಲಬುರಗಿಯಲ್ಲಿ ಇಂದಿರಾ ಗಾಂಧಿ ಮಕ್ಕಳ ಆಸ್ಪತ್ರೆ ಸ್ಥಾಪನೆ, ಯಲಬುರ್ಗಾ, ಯಾದಗಿರಿ, ಜೇವರ್ಗಿಯಲ್ಲಿ ನರ್ಸಿಂಗ್ ಕಾಲೇಜು ನಿರ್ಮಾಣ, ಕಂಪ್ಲಿ, ಸಿಂಧನೂರು, ರಾಯಚೂರಿನಲ್ಲಿ ಜಿ.ಟಿ.ಟಿ.ಸಿ. ನಿರ್ಮಾಣ, ಸೇಡಂ ಐ.ಟಿ.ಐ. ಕಾಲೇಜು ನಿರ್ಮಾಣ ಮಾಡಲು ಸಹ ಸಭೆಯಲ್ಲಿ ನಿರ್ಧಾರ ತೆಗೆದುಕೊಳ್ಳಲಾಗಿದೆ.

ಕಲ್ಯಾಣ ಕರ್ನಾಟಕ ಭಾಗದಲ್ಲಿ ಸಮುದಾಯ ಆರೋಗ್ಯ ಕೇಂದ್ರ, ಪ್ರಾಥಮಿಕ ಆರೋಗ್ಯ ಕೇಂದ್ರ, ಆಸ್ಪತ್ರೆ ನಿರ್ಮಾಣ, ಶಿಕ್ಷಣ ಮೂಲಸೌಕರ್ಯಕ್ಕೆ ಅನುದಾನ ಮೀಸಲು, ಪ್ರವಾಸಿ ತಾಣಗಳ ಅಭಿವೃದ್ಧಿ, ಅರಣ್ಯ ಕ್ಷೇತ್ರ ವಿಸ್ತಾರ, ಕಲ್ಯಾಣ ಪಥದ ಮುಂದುವರೆದ ಕಾಮಗಾರಿಗೆ ಅನುದಾನ ಮೀಸಲಿರಿಸುವುದು ಸೇರಿದಂತೆ ರಾಜ್ಯ ಸರ್ಕಾರದ ಆಯವ್ಯಯ ಘೋಷಣೆ ಮತ್ತು ಸಚಿವ ಸಂಪುಟ ಸಭೆಯ ನಿರ್ಣಯದಂತೆ ಯೋಜನೆಗಳಿಗೆ ಅನುದಾನವನ್ನು ಹಂತ ಹಂತವಾಗಿ ನೀಡಲು ಮತ್ತು ಹಳೇ ಯೋಜನೆಗಳನ್ನು ಮುಂದುವರೆಸಲು ಸಭೆಯಲ್ಲಿ ನಿರ್ಧರಿಸಲಾಗಿದೆ.

ಸಭೆಯಲ್ಲಿ ಮಂಡಳಿ ಸದಸ್ಯರಾಗಿರುವ ಅರಣ್ಯ, ಜೀವಿಶಾಸ್ತ್ರ ಹಾಗೂ ಪರಿಸರ ಸಚಿವ ಈಶ್ವರ ಖಂಡ್ರೆ, ಸಣ್ಣ ಕೈಗಾರಿಕೆ ಮತ್ತು ಸಾರ್ವಜನಿಕ ಉದ್ದಿಮೆಗಳ ಸಚಿವ ಶರಣಬಸಪ್ಪ ದರ್ಶನಾಪುರ, ವೈದ್ಯಕೀಯ ಶಿಕ್ಷಣ, ಕೌಶಲ್ಯಾಭಿವೃದ್ಧಿ, ಉದ್ಯಮಶೀಲತೆ ಹಾಗೂ ಜೀವನೋಪಾಯ ಖಾತೆ ಸಚಿವ ಡಾ.ಶರಣಪ್ರಕಾಶ ಪಾಟೀಲ, ಹಿಂದುಳಿದ ವರ್ಗಗಳ ಕಲ್ಯಾಣ ಮತ್ತು ಕನ್ನಡ ಮತ್ತು ಸಂಸ್ಕೃತಿ ಸಚಿವ ಶಿವರಾಜ ಎಸ್. ತಂಗಡಗಿ, ವಸತಿ ವಕ್ಫ ಹಾಗೂ ಅಲ್ಪಸಂಖ್ಯಾತ ಕಲ್ಯಾಣ ಸಚಿವ ಬಿ.ಝೆಡ್. ಜಮೀರ್ ಅಹ್ಮದ್ ಖಾನ್, ಕರ್ನಾಟಕ ರಾಜ್ಯ ನೀತಿ ಮತ್ತು ಯೋಜನಾ ಆಯೋಗದ ಉಪಾಧ್ಯಕ್ಷರು ಹಾಗೂ ಆಳಂದ ಶಾಸಕ ಬಿ.ಆರ್.ಪಾಟೀಲ, ಮುಖ್ಯಮಂತ್ರಿ ಗಳ ಆರ್ಥಿಕ ಸಲಹೆಗಾರ ಹಾಗೂ ಯಲಬುರ್ಗಾ ಶಾಸಕ ಬಸವರಾಜ ರಾಯರೆಡ್ಡಿ, ಕೆ.ರಾಘವೇಂದ್ರ ಹಿಟ್ನಾಳ, ಸಿಂಧನೂರು ಶಾಸಕ ಹಂಪನಗೌಡ ಬಾದರ್ಲಿ, ವಿಜಯನಗರ ಶಾಸಕ ಹೆಚ್.ಆರ್. ಗವಿಯಪ್ಪ ಇದ್ದರು. ಇದಲ್ಲದೆ ಮಂಡಳಿಯ ಜಂಟಿ ನಿರ್ದೇಶಕಿ ಪ್ರವೀಣ ಪ್ರಿಯಾ ಸೇರಿದಂತೆ ಇತರೆ ಅಧಿಕಾರಿಗಳಿದ್ದರು.

2022–23 ರಿಂದ 2024–25ನೇ ಸಾಲಿನ ವರೆಗಿನ ಮಂಡಳಿಯ ಆರ್ಥಿಕ ಮತ್ತು ಭೌತಿಕ ಪ್ರಗತಿ ವಿವರಿಸುತ್ತಾ, ಪ್ರಸಕ್ತ ಸಾಲಿಗೆ 5,000 ಕೋಟಿ ರೂ. ಅನುದಾನ ಘೋಷಣೆ ಮಾಡಿದ್ದರಿಂದ ಚರ್ಚಿಸಬೇಕಾದ ವಿಷಯಗಳನ್ನು ಸಭೆ ಮುಂದಿಟ್ಟರು.

ಎಸ್.ಎಸ್.ಎಲ್.ಸಿ. ಫಲಿತಾಂಶಕ್ಕೆ ಕಳವಳ: ಶಿಕ್ಷಣ ಸುಧಾರಣೆ ಕುರಿತು ಚರ್ಚೆಯಲ್ಲಿ ಇತ್ತೀಚೆಗೆ ಎಸ್.ಎಸ್.ಎಲ್.ಸಿ. ಫಲಿತಾಂಶ ಪ್ರಕಟಗೊಂಡಿದ್ದು, ಅದರಲ್ಲಿ ಕಲಬುರಗಿ ಕೊನೆ ಸ್ಥಾನ ಸೇರಿದಂತೆ ಪ್ರದೇಶದ ಜಿಲ್ಲೆಗಳ ಕಳಪೆ ಸಾಧನೆ ಕುರಿತು ಕೆ.ಕೆ.ಆರ್.ಡಿ.ಬಿ. ಅಧ್ಯಕ್ಷ ಡಾ. ಅಜಯ್ ಸಿಂಗ್ ನೇತೃತ್ವದಲ್ಲಿ ಮಂಡಳಿ ಸದಸ್ಯರು ಮತ್ತು ಶಿಕ್ಷಣ ತಜ್ಞರ ನಡುವೆ ನಡೆದ ಸಭೆಯಲ್ಲಿ ತೀವ್ರ ಕಳವಳ ವ್ಯಕ್ತಪಡಿಸಿದರು.

ಮಂಡಳಿ ಸಭೆ ನಂತರ ಶಿಕ್ಷಣ ತಜ್ಞರೊಂದಿಗೆ ನಡೆದ ಚರ್ಚೆಯಲ್ಲಿ ವಿಧಾನ ಪರಿಷತ್ ಶಾಸಕ ತಿಪ್ಪಣ್ಣಪ್ಪ ಕಮಕನೂರ ಮಾತನಾಡಿ, ಕಲ್ಯಾಣ ಕರ್ನಾಟಕ ಕೇಂದ್ರವಾಗಿರುವ ಕಲಬುರಗಿ ಜಿಲ್ಲೆ ಎಸ್.ಎಸ್.ಎಲ್.ಸಿ ಫಲಿತಾಂಶದಲ್ಲಿ ಕೊನೆ ಸ್ಥಾನಕ್ಕೆ ಬಂದಿದೆ, ಫಲಿತಾಂಶ ಸುಧಾರಣೆಗೆ ವಿಶೇಷ ಯೋಜನೆ ರೂಪಿಸಬೇಕೆಂದು ವಿಷಯ ಪ್ರಸ್ತಾಪಿಸಿದರು. ಸಭೆಯಲ್ಲಿದ್ದ ಸಚಿವರು, ಶಾಸಕರು ಫಲಿತಾಂಶ ಕುಸಿತಕ್ಕೆ ತೀವ್ರ ಕಳವಳ ವ್ಯಕ್ತಪಡಿಸಿದರು.

ಸಭೆಯಲ್ಲಿ ಶಿಕ್ಷಣ ತಜ್ಞರ ಸಮಿತಿ ಅಧ್ಯಕ್ಷೆ ಪ್ರೊ.ಛಾಯಾ ದೇವಗಾಂವಕರ್ ಮಾತನಾಡಿ, ಪ್ರದೇಶದಲ್ಲಿ ಓರ್ವ ಬಿ.ಇ.ಓ ವ್ಯಾಪ್ತಿಯಲ್ಲಿ 70 ಸಾವಿರದಿಂದ 1 ಲಕ್ಷದ ವರೆಗೆ ಮಕ್ಕಳಿದ್ದಾರೆ. ಬೇರೆ ವಿಭಾಗಕ್ಕೆ ಹೋಲಿಸಿದಲ್ಲಿ ಇದು ದುಪ್ಪಟ್ಟು. ಮೇಲಾಗಿ ಒಬ್ಬರಿಗೆ ಮೂರು ತಾಲೂಕು ಹೊಣೆ ಬೇರೆ ಇದೆ. ಪ್ರಾಥಮಿಕ ಮತ್ತು ಪ್ರೌಢ ಸೇರಿ ವಿಭಾಗಕ್ಕೆ ಮಂಜೂರಾದ 57,224 ಶಿಕ್ಷಕರ ಪೈಕಿ 21,381 ಶಿಕ್ಷಕರ ಕೊರತೆ ಸಹ ಎಸ್.ಎಸ್.ಎಲ್.ಸಿ. ಫಲಿತಾಂಶ ಹಿನ್ನಡೆಗೆ ಪ್ರಮುಖ ಕಾರಣವಾಗಿದೆ ಎಂದು ತಿಳಿಸಿದರು.

### ಕಲ್ಯಾಣ ಕರ್ನಾಟಕ ಶಿಕ್ಷಕರ ನೇಮಕಾತಿ ಪೂರ್ಣ

# ಒಳಮೀಸಲಾತಿಯಿಂದ ನೇಮಕಾತಿ ಆದೇಶ ವಿಳಂಬ: ಸಚಿವ ಡಾ.ಶರಣಪ್ರಕಾಶ



ಕಲಬುರಗಿ ಐವಾನ್ ಶಾಹಿ ಅತಿಥಿ ಗೃಹದಲ್ಲಿ ವೈದ್ಯಕೀಯ ಶಿಕ್ಷಣ ಸಚಿವ ಡಾ.ಶರಣಪ್ರಕಾಶ ಪಾಟೀಲ್ ಮಾಧ್ಯಮಗೋಷ್ಠಿಯಲ್ಲಿ ಮಾತನಾಡಿದರು. ಸಚಿವ ಈಶ್ವರ ಖಂಡ್ರೆ, ಶರಣಬಸಪ್ಪಗೌಡ ದರ್ಶನಾಪುರ, ಶಾಸಕ ತಿಪ್ಪಣಪ್ಪ ಕಮಕನೂರ ಅವರಿದ್ದರು.

**ಕಲಬುರಗಿ, ಮೇ.11–** ಕಲ್ಯಾಣ ಕರ್ನಾಟಕ ಪ್ರದೇಶಕ್ಕೆ ಈಗಾಗಲೆ 5,530 ಶಿಕ್ಷಕರ ನೇಮಕಾತಿಯಾಗಿದ್ದು, ಪರಿಶಿಷ್ಟ ಜಾತಿ ಒಳ ಮೀಸಲಾತಿ ಕಾರಣ ಅದೇಶ ನೀಡುವಲ್ಲಿ ವಿಳಂಬವಾಗಿದೆ ಎಂದು ರಾಜ್ಯದ ವೈದ್ಯಕೀಯ ಶಿಕ್ಷಣ, ಕೌಶಲ್ಯಾಭಿವೃದ್ಧಿ, ಉದ್ಯಮಶೀಲತೆ ಹಾಗೂ ಜೀವನೋಪಾಯ ಖಾತೆ ಸಚಿವ ಡಾ.ಶರಣಪ್ರಕಾಶ ಪಾಟೀಲ ಹೇಳಿದರು.

ನಗರದ ಐವಾನ್–ಎ–ಶಾಹಿ ಅತಿಥಿಗೃಹದಲ್ಲಿ ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ಎಸ್.ಎಸ್.ಎಲ್. ಫಲಿತಾಂಶ ಕುಸಿಯಲು ಶಿಕ್ಷಕರ ಕೊರತೆಯೆ ಪ್ರಮುಖ ಕಾರಣ ಎಂಬ ಪತ್ರಕರ್ತರ ಪ್ರಶ್ನೆಗೆ ಉತ್ತರಿಸಿದ ಅವರು, ಒಳ ಮೀಸಲಾತಿ ಸಮೀಕ್ಷೆ ನಂತರ ಶಿಕ್ಷಕರ ನೇಮಕಾತಿಯಾಗಿ ಸಮಸ್ಯೆ ಬಗೆಹರಿಯಲಿದೆ. ಖಾಯಂ ಶಿಕ್ಷಕರು ಇಲ್ಲದಕ್ಕಾಗಿಯೇ ಅತಿಥಿ ಶಿಕ್ಷಕರ ನೇಮಕಾತಿಯಾಗಿದೆ ಎಂದರು. ಕಲ್ಯಾಣ ಕರ್ನಾಟಕ ಪ್ರದೇಶ ಅಭಿವೃದ್ಧಿ ಮಂಡಳಿಗೆ ಪ್ರಸಕ್ತ 2025–26ನೇ ಆರ್ಥಿಕ ಸಾಲಿಗೆ 5,000 ಕೋಟಿ ರೂ. ಅನುದಾನ ನೀಡಿದ್ದು, ಈ ಅನುದಾನ ಸಮರ್ಪಕ ಖರ್ಚು ಮಾಡಲು ಕೂಡಲೆ ಕ್ರಿಯಾ ಯೋಜನೆ ರೂಪಿಸಿ ಅನುಷ್ಠಾನ ತರಲು ಕೆಲಸ ಕಾರ್ಯಗಳಿಗೆ ಚಾಲನೆ ನೀಡಲು ಇಂದು ಮಂಡಳಿ ಸಭೆ ಕರೆಯಲಾಗಿದೆ ಎಂದರು.

ಇನ್ನು ಮಂಡಳಿಯಿಂದಲೆ ಪ್ರತ್ಯೇಕ ಇಂಜಿನೀಯರಿಂಗ್ ವಿಂಗ್ ಸ್ಥಾಪನೆ ಕುರಿತಂತೆ ಮಾತನಾಡಿದ ಸಚಿವರು ಮಂಡಳಿಯಿಂದ ವಿಂಗ್ ಅದು ಮತ್ತೊಂದು ಇಲಾಖೆಯಾಗಿ ಹೊರಹೊಮ್ಮತ್ತೆ ವಿನಃ ಸಮಸ್ಯೆಗೆ ಅದುವೇ ಮುಕ್ತಿ ಅಲ್ಲ. ಪ್ರಸ್ತುತ ಇರುವ ಲೋಕೋಪಯೋಗಿ, ಅರ್.ಡಿ.ಪಿ.ರ್., ನಿರ್ಮಿತಿ ಕೇಂದ್ರ, ಲ್ಯಾಂಡ್ ಆರ್ಮಿ ಸೇರಿದಂತೆ ಎಲ್ಲಾ ಇಲಾಖೆಗಳನ್ನು ಬಳಸಿಕೊಂಡಲ್ಲಿ ಕೆಲಸದ ವೇಗ ಹೆಚ್ಚಲಿದೆ. ಹೀಗಾಗಿ ಎಲ್ಲಾ ಇಲಾಖೆಗಳಿಗೆ ಕೆಲಸ ಹಂಚಲಾಗುತ್ತಿದೆ ಎಂದರು.

ಪತ್ರಿಕಾಗೋಷ್ಠಿಯಲ್ಲಿ ಅರಣ್ಯ, ಜೀವಿಶಾಸ್ತ್ರ ಹಾಗೂ ಪರಿಸರ ಸಚಿವ ಈಶ್ವರ ಖಂಡ್ರೆ, ಕೆ.ಕೆ.ಅರ್.ಡಿ.ಬಿ ಅಧ್ಯಕ್ಷ ಡಾ.ಅಜಯ್ ಸಿಂಗ್, ಶಾಸಕ ತಿಪ್ಪಣ್ಣಪ್ಪ ಕಮಕನೂರ, ಕರ್ನಾಟಕ ರಾಜ್ಯ ಪರಿಸರ ಮಾಲಿನ್ಯ ನಿಯಂತ್ರಣ ಮಂಡಳಿ ಸದಸ್ಯ ಶರಣು ಮೋದಿ, ಮುಖಂಡ ನೀಲಕಂಠ ಮೂಲಗೆ ಇದ್ದರು.

# ಅಮಾಯಕ ಜೀವಗಳಿಗೆ ಬೆಲೆ ಇಲ್ಲ: ಮೃತ್ಯುಕೂಪವಾಗಿರುವ ಮುರುಮ್ ಕ್ವಾರಿ ಹೊಂಡಗಳು



**ಯಾದಗಿರಿ, ಮೇ.11–** ಜಿಲ್ಲೆಯ ವಡಗೇರಾ ತಾಲೂಕಿನಲ್ಲಿರುವ ಮುರಮ್ ಕ್ವಾರಿಗಳು ಮತ್ತು ಕೃಷಿ ಹೊಂಡಗಳು ಮೃತ್ಯೂಕೂಪಗಳಾಗಿ ಮಾರ್ಪಟ್ಟಿವೆ. ಕಳೆದ ನಾಲ್ಕು ತಿಂಗಳು ಹಿಂದೆಯಷ್ಟೇ ತಾಲೂಕಿನ ಕಂಠಿ ತಾಂಡದಲ್ಲಿ ಒಂದೇ ಕುಟುಂಬದ ತಾಯಿ ಮತ್ತು ಇಬ್ಬರು ಮಕ್ಕಳು ಕೃಷಿ ಹೊಂಡದಲ್ಲಿ ಕಾಲು ಜಾರಿ ಸಾವನ್ನಪ್ಪಿರುವ ಘಟನೆ ಮರೆಮಾಚುವ ಮುನ್ನವೇ ಮತ್ತೊಂದು ಇಂತಹದೆ ದುರ್ಘಟನೆಯು ತಾಲೂಕಿನ ಕಮಲ ನಾಯಕ್ ತಾಂಡ ಹತ್ತಿರದ ಮುರಮ್ ಕ್ವಾರಿಯಲ್ಲಿ ಶಾಲಾ ಬಾಲಕ ಸಾವನ್ನಪ್ಪಿದ ಘಟನೆ ಭಾನುವಾರ ಮಧ್ಯಾಹ್ನ ನಡೆದಿದೆ.

ಇನ್ನು ಹೋಳಿ ಹಬ್ಬದ ಬಣ್ಣದಾಟ ದಿನದಂದು ಖಾನಾಪುರ–ಬಲಕಲ್ ರಸ್ತೆಯ ಸೂರತ್–ಚನ್ನೈ ಚತುಷಪತ್ ಹೆದ್ದಾರಿ ಸಮೀಪ ಮುರಮ್ ಆಳವಾದ ಕ್ವಾರಿಯಲ್ಲಿ ತಾಲೂಕಿನ ನಾಯ್ಕಲ್ ಗ್ರಾಮದ ಓರ್ವ ಯುವಕ ಸಾವನ್ನಪ್ಪಿದನು. ಹೀಗೆ ಇನ್ನೂಷ್ಟೂ ಅಮಾಯಕ ಜೀವ ಬಲಿಗಾಗಿ ಕಾಯುತ್ತಿವೆ ಎಂಬ ಆತಂಕ ಸಾರ್ವಜನಿಕರನ್ನು ಕಾಡುತ್ತಿದೆ. ಇದಕ್ಕೆ ಪ್ರಮುಖ ಕಾರಣ ಹಲವು ಸ್ಥಳೀಯ ಗುತ್ತಿಗೆದಾರರು ಮತ್ತು ಸೂರತ್–ಚೆನ್ನೈ ಚತುಷ್ಪಥ ಹೆದ್ದಾರಿ ರಸ್ತೆಯ ಡಿಬಿಎಲ್ ಕಂಪನಿಯ ಮಾಲೀಕರು ರಸ್ತೆ ನಿರ್ಮಾಣಕ್ಕಾಗಿ ಅಲ್ಲಲ್ಲಿ ಬಡ ರೈತರ ಜಮೀನುಗಳನ್ನು ಅಗ್ಗ ದರದಲ್ಲಿ ಖರೀದಿ ಮಾಡಿದ್ದಾರೆ. ಮತ್ತು ಕೆಲವರು ಸರಕಾರಿ ಜಮೀನುಗಳಲ್ಲಿ ಹಗಲು ರಾತ್ರಿ ಎನ್ನದೆ ಮುರಮ ಸಾಗಾಟ ಮಾಡಿ ಅಳತೆ ಪ್ರಮಾಣ ಮೀರಿ ಬೃಹತ್ ಆಳವಾದ ತಗ್ಗುಗಳನ್ನು ತೋಡಿದ್ದಾರೆ. ಇದರಿಂದ ಹೊಂಡಗಳಲ್ಲಿ ನೀರು ಸಂಗ್ರಹವಾಗಿ ಅಮಾಯಕ ಯುವಕರು ಬಲಿಯಾಗುತ್ತಿದ್ದಾರೆ ಎಂದು ಕರ್ನಾಟಕ ರಕ್ಷಣಾ ವೇದಿಕೆ ತಾಲೂಕು ಅಧ್ಯಕ್ಷ ಅಬ್ದುಲ್ ಚಿಗಾನೂರ ಆರೂಪಿಸಿದ್ದಾರೆ.

ಯಾರದೋ ತಪ್ಪಿಗೆ ಅಮಾಯಕ ಜೀವಗಳ ಬಲಿ ಇನ್ನೆಷ್ಟು ಬಲಿ ಎಂಬ ಭಯ ಜನರಲ್ಲಿ ಕಾಡುತ್ತಿದೆ. ಆದರೆ ಭೂ ಮತ್ತು ಗಣಿ ವಿಜ್ಞಾನ ಇಲಾಖೆ ಮಾತ್ರ ಕಣ್ಮುಚ್ಚಿ ಕುಳಿತಿದೆ ಎಂದು ಸಾರ್ವಜನಿಕರು ಆರೋಪಿಸಿದ್ದಾರೆ. ಆರ್‌ಟಿಓ ಅಧಿಕಾರಿಗಳು ಕಣ್ಣಾರೆ ಕಂಡರೂ ಕಾಣದಂತೆ ವರ್ತಿಸುತ್ತಾರೆ. ಈಚೆಗೆ ಕಲಬುರಗಿ ಬಂದಿದ್ದ ಸಾರಿಗೆ ಸಚಿವ ರಾಮಲಿಂಗರೆಡ್ಡಿ ಅವರು ಸಾರಿಗೆ ಇಲಾಖೆ ಅಧಿಕಾರಿಗಳ ಸಭೆಯಲ್ಲಿ ಓವರ್ ಲೋಡ್, ಅತಿ ಭಾರವಾದ ಲಾರಿಗಳು ಮೀತಿ ಮೀರಿ ಲೋಡ್ ಸಾಗಿಸಿದರೆ ಮುಲಾಜಿಲ್ಲದೆ ಕಠಿಣ ಕ್ರಮ ಕೈಗೊಳ್ಳಬೇಕು ಎಂದು ಸಾರಿಗೆ ಇಲಾಖೆ ಅಧಿಕಾರಿಗಳ ಸಭೆಯಲ್ಲಿ ಖಡಕ್ ಸೂಚನೆ ನೀಡಿದ್ದಾರೆ. ಆದರೂ ಕೂಡ ಸಚಿವರ ಮಾತಿಗೂ ಅಧಿಕಾರಿಗಳು ಕವಡೆ ಕಾಸಿನ ಕಿಮ್ಮತ್ತು ನೀಡುತ್ತಿಲ್ಲ ಎಂದು ಕರವೇ ಅಧ್ಯಕ್ಷ ಚಿಗಾನೂರ ತೀವ್ರ ಆಕ್ರೋಶ ವ್ಯಕ್ತಪಡಿಸಿದ್ದಾರೆ.

ಆ ಮುರಮು ಕ್ವಾರಿಗಳಲ್ಲಿ ನೀರು ಸಂಗ್ರಹವಾಗಿ ಕುರಿ ಧನ ಗಾಯಿಗಳು ಮತ್ತು ಮಹಿಳೆಯರು ಮಕ್ಕಳು ಆಕಸ್ಮಿಕವಾಗಿ ಆ ಕಡೆ ಓಡಾಡುವಾಗ ಕಾಲು ಜಾರಿ ಬಿದ್ದು ಸಾವನಪ್ಪಿದರೆ ಇದಕ್ಕೆ ಹೊಣೆ ಯಾರು ? ಈ ಮುಂಚೆಯೂ ಹಲವಾರು ಸಾವು ನೋವುಗಳು ಆದ ಉದಾಹರಣೆಗಳಿವೆ. ಆದರೆ ಸಂಬಂಧಿಸಿದ ಅಧಿಕಾರಿಗಳು ಮಾತ್ರ ದಿವ್ಯ ನಿರ್ಲಕ್ಷ ವಹಿಸುತ್ತಿರುವುದು ಸರಿಯಲ್ಲ. ಇಂಥ ಘಟನೆಗಳು ಮತ್ತಷ್ಟು ಜರುಗುವ ಮುನ್ನವೇ ಸಂಬಂಧಿಸಿದ ಅಧಿಕಾರಿಗಳು ಎಚ್ಚೆತ್ತುಕೊಂಡು ಸೂಕ್ತ ಕ್ರಮ ಕೈಗೊಳ್ಳುವಂತೆ ಕರ್ನಾಟಕ ರಕ್ಷಣಾ ವೇದಿಕೆ ತಾಲೂಕು ಅಧ್ಯಕ್ಷ ಅಬ್ದುಲ್ ಚಿಗಾನೂರ ಒತ್ತಾಯಿಸಿದ್ದಾರೆ.

# ಕೆಕೆ ಎಕ್ಸ್‌ಪ್ರೆಸ್ ರೈಲಿನಲ್ಲಿ ಪ್ರಯಾಣಿಕನಿಂದಲೇ ಹುಸಿಬಾಂಬ್ ಕರೆ: ಆರೋಪಿಯ ಬಂಧನ



ಹುಸಿಬಾಂಬ್ ಕರೆ ಮಾಡಿದ ಆರೋಪಿ ದೀಪಸಿಂಗ್ ರಾಠೋಡ್

**ಕಲಬುರಗಿ, ಮೇ.11–** ನವದೆಹಲಿ–ಬೆಂಗಳೂರು ಮಧ್ಯೆ ಓಡಾಡುವ ಕರ್ನಾಟಕ ಎಕ್ಸ್‌ಪ್ರೆಸ್ (ಕೆಕೆ ಎಕ್ಸಪ್ರೆಸ್) ರೈಲಿನಲ್ಲಿ ಪ್ರಯಾಣಿಸುತ್ತಿದ್ದ ಪ್ರಯಾಣಿಕನೊಬ್ಬ ಅದೇ ರೈಲಿನಲ್ಲಿ ಬಾಂಬ್ ಇಡಲಾಗಿದೆ ಎಂದು ರೈಲ್ವೆ ಕಂಟ್ರೋಲ್ ರೂಮ್‌ಗೆ ಬೆದರಿಕೆ ಕರೆ ಮಾಡಿರುವ ಘಟನೆ ಇಂದು ಬೆಳಗಿನ ಜಾವ ನಡೆದಿದೆ.


ಈ ಸಂಬಂಧ ಜಿಲ್ಲೆಯ ವಾಡಿ ಜಂಕ್ಷನ್‌ನಲ್ಲಿ ನಾಲ್ಕು ತಾಸುಗಳ ವರೆಗೆ ರೈಲನ್ನು ನಿಲ್ಲಿಸಿ, ತಪಾಸಣೆ ನಡೆಸಿ, ಆರೋಪಿಯನ್ನು ಪತ್ತೆ ಹಚ್ಚಿ ಬಂಧಿಸುವಲ್ಲಿ ವಾಡಿ ರೈಲ್ವೆ ಪೊಲೀಸರು ಯಶಸ್ವಿಯಾಗಿದ್ದಾರೆ.

ಉತ್ತರ ಪ್ರದೇಶ ಮೂಲದ ದೀಪಸಿಂಗ್ ರಾಠೋಡ್ (33) ಬಂಧಿತ ಆರೋಪಿ. ಆತನನ್ನು ನ್ಯಾಯಾಂಗ ಬಂಧನಕ್ಕೆ ಒಪ್ಪಿಸಲಾಗಿದೆ ಎಂದು ವಾಡಿ ರೈಲ್ವೆ ಪೊಲೀಸ್ ಠಾಣೆಯ ಪಿಎಸ್ಐ ವೀರಭದ್ರಪ್ಪ ಎಚ್.ಎಸ್. ತಿಳಿಸಿದ್ದಾರೆ.

**4 ಗಂಟೆ ಕೆಕೆ ಎಕ್ಸ್ ಪ್ರೆಸ್ ರೈಲು ತಪಾಸಣೆ:** ಕೆಕೆ ಎಕ್ಸ್ ಪ್ರೆಸ್ ರೈಲಿನಲ್ಲಿ ಬಾಂಬ್ ಇಟ್ಟಿರುವ ಅನುಮಾನವಿದೆ ಎಂದು ಬಂಧಿತ ಆರೋಪಿ ಪ್ರಯಾಣಿಕ ರೈಲ್ವೆ ಕಂಟ್ರೋಲ್ ರೂಮ್‌ಗೆ ಕರೆ ಮಾಡಿದ್ದಾನೆ. ಈ ಹಿನ್ನೆಲೆಯಲ್ಲಿ ಹೊಸದಿಲ್ಲಿ–ಬೆಂಗಳೂರು ಕರ್ನಾಟಕ ಎಕ್ಸ್ ಪ್ರೆಸ್ ರೈಲನ್ನು ಇಂದು ಬೆಳಗಿನಜಾವ ವಾಡಿ ಜಂಕ್ಷನ್ ರೈಲು ನಿಲ್ದಾಣದಲ್ಲಿ ನಿಲ್ಲಿಸಿ, ಸುಮಾರು 4 ಗಂಟೆಗಳ ಕಾಲ ತಪಾಸಣೆಗೊಳಪಡಿಸಲಾಯಿತು. ಬಾಂಬ್ ನಿಷ್ಕ್ರಿಯ ದಳದ ಡಾಗ್ ಸಿಬ್ಬಂದಿ ಪ್ರಯಾಣಿಕರನ್ನು ಕೆಳಗಿಳಿಸಿ ರೈಲಿನ ಎಲ್ಲ 22 ಬೋಗಿಗಳನ್ನು ತಪಾಸಣೆ ಮಾಡಿದರು. ಬಳಿಕ ಅದೊಂದು ಹುಸಿಬಾಂಬ್ ಕರೆ ಎಂಬುದು ದೃಢಪಟ್ಟಿತ್ತು.

ಹಾಗಾದರೆ ಹುಸಿ ಬಾಂಬ್ ಕರೆ ಮಾಡಿದವರು ಯಾರು? ಪೊಲೀಸರು ಹರಸಾಹಸ ನಡೆಸಿ ಕೊನೆಗೆ ಹುಸಿ ಬಾಂಬ್ ಮಾಡಿರುವ ವ್ಯಕ್ತಿಯನ್ನು ಪತ್ತೆಹಚ್ಚಲಾಯಿತು. ಆರೋಪಿ ದೀಪಸಿಂಗ್ ರಾಠೋಡ್‌ನನ್ನು ವಿಚಾರಣೆಗೆ ಒಳಪಡಿಸಿದಾಗ ಸುಳ್ಳು ಮಾಹಿತಿ ನೀಡಿದ್ದಾಗಿ ಒಪ್ಪಿಕೊಂಡಿದ್ದಾನೆ. ಆತ ಗುಂತಕಲ್ ಕಡೆ ಹೊರಟಿದ್ದ ಎಂದು ಪೊಲೀಸರು ತಿಳಿಸಿದ್ದಾರೆ ಈ ಕುರಿತು ವಾಡಿ ರೈಲ್ವೆ ಪೊಲೀಸ್ ಠಾಣೆಯಲ್ಲಿ ಪ್ರಕರಣ ದಾಖಲಾಗಿದೆ.

# ಕದನ ವಿರಾಮ ಆಗಿರುವ ನಿರ್ಧಾರ ಸರಿಯಲ್ಲ: ಪ್ರಮೋದ್ ಮುತಾಲಿಕ್ ಆಕ್ರೋಶ



**ಹುಬ್ಬಳ್ಳಿ, ಮೇ.11–** ಪಾಪಿ ಪಾಕಿಸ್ತಾನದ ರಕ್ತ ಹರಿಸದೇ ಕದನ ವಿರಾಮ ಆಗಿರುವ ನಿರ್ಧಾರವನ್ನು ನಾವು ಒಪ್ಪುವುದಿಲ್ಲ. ಪ್ರಧಾನಮಂತ್ರಿ ನರೇಂದ್ರ ಮೋದಿಯವರ ಬಗ್ಗೆ ಸಾಕಷ್ಟು ವಿಶ್ವಾಸ ಇಟ್ಟಿದ್ದೇವು. ಆದರೆ ಈಗ ನಮ್ಮ ಭರವಸೆ ಹುಸಿಯಾಗಿದೆ. ಯಾವುದೇ ಕಾರಣಕ್ಕೂ ಕದನವಿರಾಮ ನಿರ್ಧಾರವನ್ನು ಒಪ್ಪುವುದಿಲ್ಲ ಎಂದು ಶ್ರೀರಾಮಸೇನಾ ರಾಷ್ಟ್ರೀಯ ಅಧ್ಯಕ್ಷ ಪ್ರಮೋದ್ ಮುತಾಲಿಕ್ ಆಕ್ರೋಶ ವ್ಯಕ್ತಪಡಿಸಿದರು.


ಯುದ್ಧ ವಿರಾಮದ ಬಗ್ಗೆ ಮಾಧ್ಯಮದ ಜೊತೆಗೆ ಮಾತನಾಡಿದ ಅವರು, ಅಮಾಯಕರ ಜೀವ ತೆಗೆದು ರಕ್ತ ಹರಿಸಿದ ಪಾಪಿ ಪಾಕಿಸ್ತಾನಕ್ಕೆ ತಕ್ಕ ಉತ್ತರ ಭಾರತ ಕೊಡುತ್ತದೆ ಎಂದು ನಂಬಿದ್ದೆವು. ಆದರೆ ಈಗ ಏಕಾಏಕಿ ಕದನ ವಿರಾಮ ಆಗಿರುವುದು ನಿಜಕ್ಕೂ ನಮಗೆ ನೋವನ್ನು ತಂದಿದೆ. ಈ ನಿರ್ಧಾರ ಕೈ ಬಿಟ್ಟು ಪಾಪಿ ಪಾಕಿಸ್ತಾನ ನಿರ್ನಾಮ ಮಾಡಬೇಕು ಎಂದು ಆಗ್ರಹಿಸಿದರು.ಡೋನಾಲ್ಡ್ ಟ್ರಂಪ್ ಯಾರ ರೀ ಅವರು..? ನಮ್ಮ ನೋವು ಅವರಿಗೆ ಏನು ಗೊತ್ತು. ನಮ್ಮ ಭಾರತದ ಪ್ರತಿಕಾರದ ಬಗ್ಗೆ ನಿರ್ಧಾರ ತೆಗೆದುಕೊಳ್ಳುವ, ಮಧ್ಯಸ್ಥಿಕೆ ವಹಿಸುವ ದೊಡ್ಡಸ್ಥಿಕೆ ಮಾಡುವ ಅವಶ್ಯಕತೆ ಏನಿತ್ತು..? ಎಂದು ನಿರ್ಧಾರದ ವಿರುದ್ಧ ಆಕ್ರೋಶ ವ್ಯಕ್ತಪಡಿಸಿದರು.

# ಕ್ಯಾಥೊಲಿಕ್ ಚರ್ಚ್‌ನಲ್ಲಿ ಯೋಧರಿಗಾಗಿ ವಿಶೇಷ ಪ್ರಾರ್ಥನೆ

**ಉಡುಪಿ, ಮೇ.11–** ಭಾರತೀಯ ಕೆಥೊಲಿಕ್ ಧರ್ಮಾಧ್ಯಕ್ಷರ ಮಂಡಳಿಯ ಸೂಚನೆಯ ಮೇರೆಗೆ ಉಡುಪಿ ಧರ್ಮಪ್ರಾಂಣದ ಚರ್ಚು ಗಳಲ್ಲಿ ರವಿವಾರ ಭಾರತೀಯ ಸೇನೆಗೆ ಹಾಗೂ ಯೋಧರಿಗೆ ಒಳಿತಾಗುವಂತೆ ಆಶಿಸಿ ವಿಶೇಷ ಪ್ರಾರ್ಥನೆ ಸಲ್ಲಿಸಲಾಯಿತು.

ಪ್ರತಿಯೊಂದು ಚರ್ಚುಗಳಲ್ಲಿ ರವಿವಾರದ ಬಲಿಪೂಜೆಯ ವೇಳೆ ಗಡಿಯಲ್ಲಿ ದೇಶವನ್ನು ಕಾಯುವ ಸೈನಿಕರಿಗೆ ಒಳಿತಾಗುವಂತೆ ಕೋರಿ ವಿಶೇಷ ಪರಮ ಪ್ರಸಾದದ ಆರಾಧನೆಯ ಮೂಲಕ ಧರ್ಮಗುರು ಗಳು ಪ್ರಾರ್ಥನೆ ಸಲ್ಲಿಸಿದರು. ತಮ್ಮ ಅಧಿಕೃತ ವಾರ್ಷಿಕ ಭೇಟಿಯಲ್ಲಿರುವ ಧರ್ಮಪ್ರಾಂತದ ಧರ್ಮಾಧ್ಯಕ್ಷ ರೆ.ಫಾ. ಡಾ.ಜೆರಾಲ್ಡ್ ಐಸಾಕ್ ಲೋಬೊ ಅವರು ಕಾರ್ಕಳ ತಾಲೂಕಿನ ಬೆಳ್ಮಣ್ ಸಂತ ಜೋಸೆಫರ ಚರ್ಚಿನಲ್ಲಿ ವಿಶೇಷ ಪ್ರಾರ್ಥನಾ ವಿಧಿಯನ್ನು ನೆರವೇರಿಸಿ ದೇಶ ಕಾಯುವ ಸೈನಿಕರಿಗಾಗಿ ಪ್ರಾರ್ಥನೆ ಸಲ್ಲಿಸಿದರು. ಈ ವೇಳೆ ಧರ್ಮಾಧ್ಯಕ್ಷರು, ಇಂದು ಜಗತ್ತಿನಾದ್ಯಂತ ಕ್ರೈಸ್ತ ಸಮುದಾಯ ಯೇಸು ಒಳ್ಳೆಯ ಕುರುಬರ ಹಬ್ಬದ ಆಚರಣೆಯನ್ನು ಮಾಡುತ್ತಿದ್ದು ದೇಶದ ಗಡಿಯಲ್ಲಿ ಭಾರತ ಮತ್ತು ಪಾಕಿಸ್ತಾನದ ನಡುವೆ ಯುದ್ಧ ಭೀತಿ ಆವರಿಸಿದ್ದು ನಮ್ಮ ಸೈನಿಕರು ತಮ್ಮ ಜೀವದ ಹಂಗು ತೊರೆದು ತಮ್ಮ ದೇಶದ ಪ್ರಜೆಗಳ ರಕ್ಷಣೆಗೆ ಕಟಿಬದ್ಧರಾಗಿ ನಿಂತಿದ್ದಾರೆ.

# ಮಾರಿಗುಡಿಗೆ ವಿಶೇಷ ಪೂಜೆ ಸಲ್ಲಿಸಿದ ಲಕ್ಷ್ಮೀ ಹೆಬ್ಬಾಳ್ಕರ್



**ಉಡುಪಿ, ಮೇ.11–** ಕಾಪು ಹೊಸ ಮಾರಿಗುಡಿಗೆ ಸಚಿವೆ ಲಕ್ಷ್ಮಿ ಹೆಬ್ಬಾಳ್ಕರ್ ಭೇಟಿ ನೀಡಿ, ತಾಯಿಗೆ ವಿಶೇಷ ಪೂಜೆ ಸಲ್ಲಿಸಿದ್ದಾರೆ.

ಸಚಿವೆ ಲಕ್ಷ್ಮೀ ಹೆಬ್ಬಾಳ್ಕರ್ ಕಾರು ಅಪಘಾತದಲ್ಲಿ ಗಾಯಗೊಂಡಿದ್ದರು. ಹೀಗಾಗಿ ಆಸ್ಪತ್ರೆಗೆ ದಾಖಲಾದ ನಂತರ ಉಡುಪಿಗೆ ಪ್ರಥಮ ಭೇಟಿ ನೀಡಿದ್ದಾರೆ. ಹಲವು ತಿಂಗಳ ಬಳಿಕ, ತಾಯಿಯ ದರ್ಶನ ಮಾಡಿ ತಮ್ಮ ಕೆಲಸ ಆರಂಭಿಸಿದ್ದಾರೆ. ಈ ವೇಳೆ ಮಾತನಾಡಿದ ಅವರು, ಖುಷಿಯಿಂದ ಮತ್ತೆ ಮರಳಿ ಕೆಲಸಕ್ಕೆ ಬಂದಿದ್ದೇನೆ. ಅಮ್ಮನವರಿಂದ ಆಶೀರ್ವಾದ ಪಡೆದು ಕೆಲಸ ಆರಂಭಿಸುತ್ತಿದ್ದೇನೆ. ದೇವಿಯ ಸನ್ನಿಧಾನದಲ್ಲಿ ಉತ್ತಮ ಕೆಲಸ ಮಾಡುವ ಸಂಕಲ್ಪ ಮಾಡಿದ್ದೇನೆ. ಈ ದೇವಾಲಯದ ಕಲ್ಪನೆ ಅದ್ಭುತವಾಗಿದೆ. ದೇವಾಲಯದ ಇತಿಹಾಸ ಕೇಳಿ ನಾನು ಅಚ್ಚರಿಗೊಂಡೆ. ಭಕ್ತರ ಸಹಕಾರದಿಂದಲೇ ದೇಗುಲ ನಿರ್ಮಾಣವಾಗಿದೆ ಎಂಬುವುದನ್ನು ತಿಳಿದುಕೊಂಡಿದ್ದೇನೆ. ಸ್ವರ್ಣ ಗದ್ದುಗೆಯ ಮೇಲೆ ಕುಳಿತ ತಾಯಿಯನ್ನು ಕಂಡರೆ ಭಾರತದ ಸಂಸ್ಕೃತಿ ನಿಜ ಎನ್ನುವುದು ಅರಿವಾಗುತ್ತದೆ ಎಂದಿದ್ದಾರೆ.

# ವಿದ್ಯಾರ್ಥಿಗಳಲ್ಲಿ ಸ್ಪರ್ಧಾತ್ಮಕ ಮನೋಭಾವ ಅಗತ್ಯ: ಕುಲಪತಿ ಡಾ. ಅನಿಲಕುಮಾರ್ ಬಿಡವೆ




**ಬೀದರ್, ಮೇ.11–** ವಿದ್ಯಾರ್ಥಿಗಳಲ್ಲಿ ಸ್ಪರ್ಧಾತ್ಮಕ ಮನೋಭಾವನೆಯು ಅತ್ಯಂತ ಅಗತ್ಯವಾಗಿದೆ. ಸ್ಪರ್ಧೆ ಇಲ್ಲದೇ ಪ್ರತಿಭೆ ಹೊರಬರಲು ಸಾಧ್ಯವಿಲ್ಲ. ಆದರೆ ಆರೋಗ್ಯಕರ ಸ್ಪರ್ಧೆ ಇರಬೇಕು ಎಂದು ಶರಣಬಸವೇಶ್ವರ ವಿಶ್ವವಿದ್ಯಾಲಯದ ಕುಲಪತಿ ಡಾ. ಅನಿಲಕುಮಾರ್ ಬಿಡವೆ ಹೇಳಿದರು.

ನಗರದ ಹೊರವಯದಲ್ಲಿರುವ ಲಿಂಗರಾಜ ಅಪ್ಪ ಇಂಜಿನಿಯರಿಂಗ್ ಕಾಲೇಜಿನಲ್ಲಿ ಎರಡು ದಿವಸದ ಟೆಕ್ನೋತ್ಸವ ಯುಕ್ತಿ 2025 ಸಮಾರೋಪ ಸಮಾರಂಭದಲ್ಲಿ ಮಾತನಾಡಿದ ಅವರು, ವಿದ್ಯಾರ್ಥಿಗಳು ಸ್ಪರ್ಧೆಯಲ್ಲಿ ಭಾಗವಹಿಸಿದರೆ ಸಾಕು ಅದು ಬಹುಮಾನ ಗೆದ್ದಕ್ಕಿಂತ ಹೆಚ್ಚಾಗಿರುತ್ತದೆ, ಮತ್ತು ಪ್ರಸ್ತುತ ಪ್ರಚತ್ತಲ್ಲಿರುವ ಎಲ್ಲ ವಿಭಾಗದ ವಿದ್ಯಾರ್ಥಿಗಳಿಗೆ ಆರ್ಟಿಫಿಶಿಯಲ್ ಇಂಟಲಿಜೆನ್ಸ್ ಟೆಕ್ನಾಲಜಿಯನ್ನು ಕಲಿಯಬೇಕು ಎಂದರು. ಶರಣಬಸವೇಶ್ವರ ವಿದ್ಯಾವರ್ಧಕ ಸಂಘದ ಕಾರ್ಯದರ್ಶಿ ಬಸವರಾಜ್ ದೇಶಮುಖ್ ಅವರು ಮಾತನಾಡಿ , ವಿದ್ಯಾರ್ಥಿಗಳು ಎಲ್ಲಾ ಚಟುವಟಿಕೆಗಳಲ್ಲಿ ಪಾಲ್ಗೊಂಡು ಸಂಶೋಧನೆಯಲ್ಲಿ ಉತ್ತಮ ಸಾಧನೆ ಮಾಡಬೇಕೆಂದು ಕರೆ ನೀಡಿದರು. ಗೌರವ ಅತಿಥಿಗಳಾದ ಶರಣಬಸವೇಶ್ವರ ರೆಸಿಡೆನ್ಸಿ ಇನ್ ಕಾಲೇಜಿನ ಪ್ರಿನ್ಸಿಪಾಲ್ ಡಾ. ಸತೀಶ್ ಪ್ರತಪೂರ್ ಅವರು ಅತ್ಯುತ್ತಮ ಹೊರಹೋಗೋವ (ಕೊನೆಯ ವರ್ಷದ) ವಿದ್ಯಾರ್ಥಿಯಾಗಿ ಆಯ್ಕೆಯಾದ ಲಲಿತ್ ಕುಮಾರ್ ಬಾಬನೂರ್ ವಿಶೇಷವಾಗಿ ಸನ್ಮಾನ ಮಾಡಿದರು. ಮತ್ತು ಅತ್ಯಂತ ಕ್ರಿಯಾಶೀಲ ವಿದ್ಯಾರ್ಥಿಯಾಗಿ ಆಯ್ಕೆಯಾದ ಕುಮಾರಿ ಆಕಾಂಕ್ಷ ಅವರಿಗೂ ಮತ್ತು ಮುಖ್ಯ ಪ್ರಾಯೋಜಕ ಬೆಂಗಳೂರಿನ ಝೀ ಲರ್ನಿಂಗ್ ಲ್ಯಾಬ್, ಇತರ ಪ್ರಾಯೋಜಕರಿಗೂ ವೇದಿಕೆ ಮೇಲೆ ಸನ್ಮಾನಿಸಲಾಯಿತು. ಎರಡು ದಿವಸದ ವಿವಿಧ ಚಟುವಟಿಕೆ ಹಾಗೂ ಸ್ಪರ್ಧೆಯಲ್ಲಿ ವಿಜೇತರಾದ ವಿದ್ಯಾರ್ಥಿಗಳಿಗೆ ಪ್ರಶಸ್ತಿ ಪತ್ರ ಹಾಗೂ ಟ್ರೋಫಿಯನ್ನು ನೀಡಲಾಯಿತು. ಎಲ್ಲ ಚಟುವಟಿಕೆಯಲ್ಲಿ ಭಾಗವಹಿಸಿ ಅತ್ಯುತ್ತಮ ಪ್ರಥಮ ಸ್ಥಾನವನ್ನು ಪಡೆದ ಶರಣಬಸವೇಶ್ವರ ವಿಶ್ವವಿದ್ಯಾಲಯಕ್ಕೆ ಪ್ರಥಮ ಬಹುಮಾನ, ಹಾಗೂ ಬೀದರ್‌ನ ಗುರುನಾನಕ್ ದೇವ್ ಇಂಜಿನಿಯರಿಂಗ್ ಕಾಲೇಜಿಗೆ ದ್ವಿತೀಯ ಸ್ಥಾನದ ಟ್ರೋಫಿಯನ್ನು ನೀಡಲಾಯಿತು.

2025ರ ಕೆಸಿಎಸ್‌ಟಿ ಪ್ರೊಜೆಕ್ಟ್‌ನಲ್ಲಿ ಆಯ್ಕೆಗೊಂಡ ಮಾರ್ಗದರ್ಶಕರಿಗೆ ಹಾಗೂ ವಿದ್ಯಾರ್ಥಿಗಳಿಗೆ ಸನ್ಮಾನ ಮಾಡಲಾಯಿತು.

# ಕಾರವಾರದಲ್ಲಿಂದು ಆಪರೇಷನ್ ಅಭ್ಯಾಸ್ ಅಣಕು ಕಾರ್ಯಾಚರಣೆ: ಡಿ.ಸಿ ಕೆ.ಲಕ್ಷ್ಮಿಪ್ರಿಯ



**ಕಾರವಾರ, ಮೇ. 11–** ತುರ್ತು ಸಂದರ್ಭದಲ್ಲಿ ಪರಿಣಾಮಕಾರಿಯಾಗಿ ನಾಗರೀಕರ ರಕ್ಷಣೆ ಮಾಡುವ 'ಆಪರೇಷನ್ ಅಭ್ಯಾಸ್' ಅಣಕು ಕಾರ್ಯಾಚರಣೆ ಅಂಗವಾಗಿ ಕಾರವಾರ ತಾಲೂಕಿನಲ್ಲಿ ನಾಳೆ ಅಣಕು ಕಾರ್ಯಚರಣೆ ನಡೆಸಲಾಗುವುದು ಎಂದು ಉತ್ತರ ಕನ್ನಡ ಜಿಲ್ಲಾಧಿಕಾರಿ ಕೆ.ಲಕ್ಷ್ಮಿ ಪ್ರಿಯ ಮಾಹಿತಿ ನೀಡಿದ್ದಾರೆ.

ಅಣಕು ಕಾರ್ಯಚರಣೆ ಸಂದರ್ಭದಲ್ಲಿ ಜಿಲ್ಲೆಯ ಜನತೆ ಯಾವುದೇ ರೀತಿಯ ಗಾಬರಿ, ಆತಂಕಕ್ಕೆ ಒಳಗಾಗದೇ ಜಿಲ್ಲಾಡಳಿತದೊಂದಿಗೆ ಸಹಕಾರ ನೀಡಬೇಕು ಎಂದು ಮನವಿ ಮಾಡಿದ್ದಾರೆ.

ಉತ್ತರ ಕನ್ನಡ ಜಿಲ್ಲೆಯು ಅತ್ಯಂತ ಉದ್ದವಾದ ಕರಾವಳಿ ತೀರವನ್ನು ಹೊಂದಿರುವುದು ಮಾತ್ರವಲ್ಲದೇ ಅನೇಕ ಸೂಕ್ಷ್ಮ ಪ್ರದೇಶಗಳನ್ನು ಒಳಗೊಂಡಿರುವುದರಿಂದ ಈ ಪ್ರದೇಶದಲ್ಲಿ ತುರ್ತು ಸಂದರ್ಭದಲ್ಲಿ ನಾಗರೀಕರ ರಕ್ಷಣೆ ಮಾಡುವ ಅಣಕು ಕಾರ್ಯಚರಣೆ ಮಾಡಲಾಗುತ್ತದೆ. ರಾತ್ರಿ 7.30 ರಿಂದ 8 ಗಂಟೆಯ ಅವಧಿಯಲ್ಲಿ ಕಾರವಾರ ನಗರಸಭಾ ವ್ಯಾಪ್ತಿಯಲ್ಲಿ ಮತ್ತು ಕೈಗಾ ಟೌನ್‌ಶಿಪ್‌ನಲ್ಲಿ ಬ್ಲಾಕ್ ಔಟ್ ಅಣುಕು ಕಾರ್ಯಚರಣೆ ನಡೆಸಲಾಗುವುದು ಎಂದು ವಿವರಿಸಿದ್ದಾರೆ.

# ಪಾಕಿಸ್ತಾನದ ಮೇಲೆ ಆಪರೇಷನ್ ಸಿಂಧೂರ: ತಪ್ಪು ಮಾಡಿದವರಿಗೆ ತಕ್ಕ ಶಾಸ್ತಿ ಆಗಲೇಬೇಕು: ಮೋಹನ್ ಭಾಗವತ್


**ಧಾರವಾಡ, ಮೇ.11–** ಪಹಲ್ಗಾಮ್‌ನಲ್ಲಿ ನಿರಾಯುಧ ಅಮಾಯಕ ಪ್ರವಾಸಿಗರ ಮೇಲಿನ ದಳಿಗೆ ಪ್ರತಿಕ್ರಿಯೆಯಗಿ ಪಾಕಿಸ್ತಾನ ಪ್ರಾಯೋಜಿತ ಭಯೋತ್ಪದಕರ ವಿರುದ್ಧ ಕೇಂದ್ರ ಸರ್ಕಾರ ತೆಗೆದುಕೊಂಡ ನಿರ್ಣಾಯಕ ಕ್ರಮವನ್ನು ಆರ್‌ಎಸ್‌ಎ ಮುಖ್ಯಸ್ಥ ಮೋಹನ್ ಭಾಗವತ್ ಸ್ವಾಗತಿಸಿದರು.

ಜಿಲ್ಲೆಯ ಗರಗ್ ಗೆ ಭೇಟಿ ನೀಡಲು ಆಗಮಿಸಿದ್ದ ಅವರು ಮಾಧ್ಯಮಗಳೊಂದಿಗೆ ಮಾತನಾಡಿ, ರಾಷ್ಟ್ರೀಯ ಏಕತೆ ಮತ್ತು ಶಾಂತಿಯನ್ನು ಕಾಪಾಡಿಕೊಳ್ಳಲು ಸರ್ಕಾರ 'ದೊಂದಿಗೆ ಸಹಕರಿಸುವಂತೆ ನಾಗರಿಕರಲ್ಲಿ ಮನವಿ ಮಾಡುವುದಾಗಿ ತಿಳಿಸಿದರು.

ಪಹಲ್ಗಾಮ್‌ನಲ್ಲಿ ಪ್ರವಾಸಿಗರ ಮೇಲೆ ನಡೆದ ಹೇಡಿತನದ ದಾಳಿಯ ನಂತರ ಪಾಕಿಸ್ತಾನ ಪ್ರಾಯೋಜಿತ ಭಯೋತ್ಪಾದಕರು ಮತ್ತು ಅವರ ಬೆಂಬಲ ವ್ಯವಸ್ಥೆಯ ವಿರುದ್ಧ ತೆಗೆದುಕೊಂಡ ನಿರ್ಣಾಯಕ ಕ್ರಮಕ್ಕಾಗಿ ಆರ್‌ಎಸ್‌ಎಸ್ ಮುಖ್ಯಸ್ಥ ಮೋಹನ್ ಭಾಗವತ್ ಕೇಂದ್ರ ಸರ್ಕಾರ ಮತ್ತು ಸಶಸ್ತ್ರ ಪಡೆಗಳ ನಾಯಕತ್ವವನ್ನು ಶ್ಲಾಘಿಸಿದರು.

ಪಹಲ್ಗಾಮ್‌ನಲ್ಲಿ ಉಗ್ರರು ಹಿಂದೂ ಪ್ರವಾಸಿಗರನ್ನು ಗುರಿಯಾಗಿಸಿಕೊಂಡು ಅವರ ಕುಟುಂಬದ ಕಣ್ಣೆದುರಲ್ಲೇ ಕ್ರೂರ ಹತ್ಯಾಕಾಂಡ ನಡೆಸಿದ್ದಾಋಎ. ಇದರಲ್ಲಿ ಬಲಿಯಾದವರ ಕುಟುಂಬಗಳಿಗೆ ಮತ್ತು ಇಡೀ ರಾಷ್ಟ್ರಕ್ಕೆ ನ್ಯಾಯ ಒದಗಿಸಲು ಆಪರೇಷನ್ ಸಿಂಧೂರ ಕ್ರಮವು ಇಡೀ ದೇಶದ ಸ್ವಾಭಿಮಾನ ಮತ್ತು ನೈತಿಕತೆಯನ್ನು ಹೆಚ್ಚಿಸಿದೆ. ಪಾಕಿಸ್ತಾನದಲ್ಲಿ ಭಯೋತ್ಪಾದಕರು, ಅವರ ಮೂಲಸೌಕರ್ಯ ಮತ್ತು ಬೆಂಬಲ ವ್ಯವಸ್ಥೆಗಳ ವಿರುದ್ಧ ಮಿಲಿಟರಿ ಕ್ರಮವು ದೇಶದ ಭದ್ರತೆಗೆ ಅಗತ್ಯ ಮತ್ತು ಅನಿವಾರ್ಯ ಎಂಬುದನ್ನು ನಾವು ಸಂಪೂರ್ಣವಾಗಿ ಒಪ್ಪುತ್ತೇವೆ. ಈ ರಾಷ್ಟ್ರೀಯ ಬಿಕ್ಕಟ್ಟಿನ ಸಮಯದಲ್ಲಿ ಇಡೀ ರಾಷ್ಟ್ರವು ಸರ್ಕಾರ ಮತ್ತು ಸಶಸ್ತ್ರ ಪಡೆಗಳ ಬೆಂಬಲಕ್ಕೆ ನಮ್ಮ ಸಂಘಟನೆ ನಿಂತಿದೆ. ಭಾರತೀಯ ಗಡಿಯಲ್ಲಿರುವ ಧಾರ್ಮಿಕ ಸ್ಥಳಗಳು ಮತ್ತು ನಾಗರಿಕ ವಸಾಹತುಗಳ ಮೇಲೆ ಪಾಕಿಸ್ತಾನಿ ಸೇನೆ ನಡೆಸಿದ ದಾಳಿಯನ್ನು ನಾವು ಖಂಡಿಸುತ್ತೇವೆ ಮತ್ತು ಇದನ್ನು ಸಹಿಸಲಾಗದು. ಈ ಕ್ರೂರ ಮತ್ತು ಅಮಾನವೀಯ ದಾಳಿಯ ಸಂತ್ರಸ್ಥ ಕುಟುಂಬಗಳಿಗೆ ನಾವು ನಮ್ಮ ಸಂತಾಪ ಸೂಚಿಸುತ್ತೇವೆ. ಈ ಸವಾಲಿನ ಸಮಯದಲ್ಲಿ ಸರ್ಕಾರ ನೀಡಿದ ಸೂಚನೆಗಳನ್ನು ಸಂಪೂರ್ಣವಾಗಿ ಪಾಲಿಸುವಂತೆ ರಾಷ್ಟ್ರೀಯ ಸ್ವಯಂಸೇವಕ ಸಂಘವು ನಾಗರಿಕರಿಗೆ ಮನವಿ ಮಾಡುತ್ತದೆ ಎಂದು ತಿಳಿಸಿದರು.

ಇದರೊಂದಿಗೆ, ನಮ್ಮ ನಾಗರಿಕ ಕರ್ತವ್ಯವನ್ನು ನಿರ್ವಹಿಸುವಾಗ, ನಾವೆಲ್ಲರೂ ಜಾಗರೂಕರಾಗಿರಬೇಕು. ಸಾಮಾಜಿಕ ಏಕತೆ ಮತ್ತು ಸಾಮರಸ್ಯವನ್ನು ಹಾಳುಮಾಡುವಲ್ಲಿ ರಾಷ್ಟ್ರವಿರೋಧಿ ಶಕ್ತಿಗಳ



ಪಿತೂರಿ ಯಶಸ್ವಿಯಾಗಲು ನಾವು ಅವಕಾಶ ನೀಡಬಾರದು. ಎಲ್ಲಾ ನಾಗರಿಕರು ತಮ್ಮ ದೇಶಭಕ್ತಿಯನ್ನು ಪ್ರದರ್ಶಿಸಲು, ಅಗತ್ಯವಿರುವಲ್ಲೆಲ್ಲಾ ಸೈನ್ಯ ಮತ್ತು ನಾಗರಿಕ ಆಡಳಿತದೊಂದಿಗೆ ಸಹಕರಿಸಲು ಮತ್ತು ರಾಷ್ಟ್ರೀಯ ಏಕತೆ ಮತ್ತು ಭದ್ರತೆಯನ್ನು ಕಾಪಾಡಿಕೊಳ್ಳಲು ಎಲ್ಲಾ ಪ್ರಯತ್ನಗಳನ್ನು ಬಲಪಡಿಸಲು ಸಿದ್ಧರಾಗಿರಬೇಕು ಎಂದು ಕರೆ ನೀಡಿದರು.



ಬೆಳಗಾವಿಯಲ್ಲಿ ಭಾನುವಾರ ಶ್ರೀ ಭಗೀರಥ ಜಯಂತಿ ಉತ್ಸವ ಮತ್ತು ಮೆರವಣಿಗೆ ಜನರನ್ನು ಆಕರ್ಷಿಸಿತು.

# ಹೇಮರೆಡ್ಡಿ ಮಲ್ಲಮ್ಮನ ಬದುಕು ಮನುಕುಲಕ್ಕೆ ಆದರ್ಶ: ಸಚಿವ ರಹೀಂ ಖಾನ್ ಬಣ್ಣನೆ



ಬೀದರ ನಗರದ ಹೇಮರೆಡ್ಡಿ ಮಲ್ಲಮ್ಮ ಸಮುದಾಯ ಭವನದಲ್ಲಿ ಜಿಲ್ಲಾಡಳಿತ, ಜಿಲ್ಲಾ ಪಂಚಾಯತ ಹಾಗೂ ಕನ್ನಡ ಮತ್ತು ಸಂಸ್ಕೃತಿ ಇಲಾಖೆ ಸಂಯುಕ್ತಾಶ್ರಯದಲ್ಲಿ ಆಯೋಜಿಸಿದ ಶಿವಶರಣೆ ಹೇಮರಡ್ಡಿ ಮಲ್ಲಮ್ಮ ಜಯಂತ್ಯುತ್ಸವ ಕಾರ್ಯಕ್ರಮವನ್ನು ಪೌರಾಡಳಿತ ಸಚಿವ ರಹೀಂ ಖಾನ್ ಅವರು ಉದ್ಘಾಟಿಸಿದರು.

**ಬೀದರ, ಮೇ.11–** ಹದಿನಾಲ್ಕನೇ ಶತಮಾನದ ಶಿವಶರಣರಲ್ಲಿ ಪ್ರಜ್ವಲಿಸಿದ ಹೇಮರೆಡ್ಡಿ ಮಲ್ಲಮ್ಮ ದೈವಭಕ್ತಿ, ಕಾಯಕ ನಿಷ್ಠೆ, ದಾನ ಧರ್ಮದಿಂದ, ಆದರ್ಶ ಗೃಹಿಣಿಯಾಗುವ ಮೂಲಕ ಲೋಕ ಪ್ರಸಿದ್ಧಿ ಪಡೆದಿದ್ದರು. ಶ್ರೀಶೈಲ ಮಲ್ಲಿಕಾರ್ಜುನನ್ನು ಸಾಕ್ಷಾತ್ಕರಿಸಿಕೊಂಡ ಹೇಮರೆಡ್ಡಿ ಮಲ್ಲಮ್ಮನ ಬದುಕು ಎಂದಿಗೂ ಅನುಕರಣೀಯ ಹಾಗೂ ಮನುಕುಲಕ್ಕೆ ಆದರ್ಶ ಎಂದು ಪೌರಾಡಳಿತ ಹಾಗೂ ಹಜ್ ಸಚಿವರಾದ ರಹೀಂ ಖಾನ್ ಅವರು ಹೇಳಿದರು.

ಶಿವಶರಣೆ ಹೇಮರಡ್ಡಿ ಮಲ್ಲಮ್ಮ ಜಯಂತ್ಯುತ್ಸವ ಕಾರ್ಯಕ್ರಮವನ್ನು ಉದ್ಘಾಟಿಸಿ, ಮಹಾತ್ಮರು ಕೇವಲ ಒಂದು ಜಾತಿಗೆ ಸೀಮಿತರಾಗಬಾರದು. ಹೇಮರೆಡ್ಡಿ ಮಲ್ಲಮ್ಮರ ಆದರ್ಶಗಳನ್ನು ತಾವೆಲ್ಲರೂ ತಮ್ಮ ಜೀವನದಲ್ಲಿ ಅಳವಡಿಸಿಕೊಳ್ಳಬೇಕು ಈ ಮೂಲಕ ಸನ್ಮಾರ್ಗದಲ್ಲಿ ಸಾಗಬೇಕು ಎಂದರು.

ಬೀದರ ದಕ್ಷಿಣ ಕ್ಷೇತ್ರದ ಶಾಸಕರಾದ ಡಾ. ಶೈಲೇಂದ್ರ ಕೆ. ಬೆಲ್ದಾಳೆ ಅವರು ಮಾತನಾಡಿ, ಹೇಮರೆಡ್ಡಿ ಮಲ್ಲಮ್ಮ ಅವರ ಪರಮ ಶಿವಭಕ್ತೆ. ತಮ್ಮ ಸಮಾಜದವರದ್ದು ಬೇಡುವ ಕೈಯಾಗಬಾರದು ಕೊಡುವ ಕೈಯಾಗಬೇಕು ಎನ್ನುವುದು ಮಲ್ಲಮ್ಮನವರ ಆಸೆಯಾಗಿತ್ತು. ಅದರಂತೆ ರೆಡ್ಡಿ ಸಮಾಜ ಈಗ ಬಲಿಷ್ಠ ಸಮಾಜವಾಗಿದೆ. ಸಮಾಜದವರ ಮನವೀಯಂತೆ ಸಮುದಾಯ ಭವನಕ್ಕಾಗಿ 15 ಲಕ್ಷ ಅನುಧಾನ ನೀಡಿದ್ದೇನೆ. ಪೋಷಕರು ತಮ್ಮ ಮಕ್ಕಳಿಗೆ ಮೊಬೈಲ್‌ನಿಂದ ದೂರವಿಡಬೇಕು, ಅವರ ಮೇಲೆ ನಿಗಾವಹಿಸಬೇಕು ಹಾಗೂ ಇತ್ತೀಚಿಗೆ ಅಪಘಾತ ಪ್ರಮಾಣ ಹೆಚ್ಚಾಗುತ್ತಿದ್ದೂ ಥ್ರಿಬಲ್ ರೈಡ್ ಬೈಕ್ ಸವಾರಿಗೆ ಅವಕಾಶ ನೀಡಬಾರದು ಎಂದರು.

ಹಿರಿಯ ಉಪನ್ಯಾಸಕ ಶಿವ ಶರಣಪ್ಪಾ ಹುಗ್ಗಿ ಪಾಟೀಲ್ ಹೇಮರೆಡ್ಡಿ ಮಲ್ಲಮ್ಮ ಜೀವನ ಕುರಿತು ವಿಶೇಷ ಉಪನ್ಯಾಸ ನೀಡಿದರು. ಕಾರ್ಯಕ್ರಮದಲ್ಲಿ ಎಸ್.ಎಸ್. ಎಲ್.ಸಿ, ಪಿಯುಸಿಯಲ್ಲಿ ಅತೀ ಹೆಚ್ಚು ಅಂಕ ಪಡೆದು ಉತ್ತೀರ್ಣರಾದ, ಸರ್ಕಾರಿ ಸೇವೆಗೆ ಆಯ್ಕೆಯಾದ, ಮುಂಬಡ್ತಿ, ನಿವೃತ್ತರಾದ ಹಾಗೂ ಎಂ.ಬಿ.ಬಿ.ಎಸ್ ಪದವಿ ಪಡೆದವರಿಗೆ ಸನ್ಮಾನಿಸಲಾಯಿತು.

## ಮಹಿಳಾ ಕಾಲೇಜ್‌ನಲ್ಲಿ ರಾಷ್ಟ್ರೀಯ ಸೇವಾ ಯೋಜನೆ

# ರಾಷ್ಟ್ರೀಯ ಸೇವೆ ಎಂದರೆ ಪ್ರತಿಯೊಂದು ಕ್ಷೇತ್ರದ ಸೇವೆ: ಅಶೋಕ ರೆಡ್ಡಿ



**ಬೀದರ್, ಮೇ.11–** ರಾಷ್ಟ್ರೀಯ ಸೇವಾ ಯೋಜನೆ ಎಂದರೆ ದೇಶದ ಪ್ರತಿಯೊಂದು ಕ್ಷೇತ್ರದ ಸೇವೆ ಎಂದರ್ಥ. ಆದ್ದರಿಂದ ಇದು ಅತ್ಯಂತ ಮಹತ್ವದ್ದೆಂದು ಪೊರಿಗಣಿಸಿ, ಸ್ವಯಂ ಸೇವಕರು ಸಮಾಜ ಹಾಗೂ ದೇಶಕ್ಕೆ ತಮ್ಮ ಅಮೂಲ್ಯ ಕೊಡುಗೆ ನೀಡಬೇಕು ಎಂದು ಸರ್ಕಾರಿ ಪ್ರಥಮ ದರ್ಜೆ ಕಾಲೇಜಿನ ನಿವೃತ್ತ ಸಹ ಪ್ರಾಧ್ಯಾಪಕ ಅಶೋಕ ರೆಡ್ಡಿ ಅವರು ಹೇಳಿದರು.

ನಗರದ ಓಡವಾಡದಲ್ಲಿ ಸರ್ಕಾರಿ ಪ್ರಥಮ ದರ್ಜೆ ಮಹಿಳಾ ಕಾಲೇಜು ವತಿಯಿಂದ ಹಮ್ಮಿಕೊಳ್ಳಲಾದ ಏಳು ದಿನಗಳ ರಾಷ್ಟ್ರೀಯ ಸೇವಾ ಯೋಜನೆ ವಿಶೇಷ ಶಿಬಿರವನ್ನು ಉದ್ಘಾಟಿಸಿ ಮಾತನಾಡಿದ ಅವರು, ರಾಷ್ಟ್ರೀಯ ಸೇವಾ ಯೋಜನೆ ವಿದ್ಯಾರ್ಥಿಗಳ ವ್ಯಕ್ತಿತ್ವ ವಿಕಸನಕ್ಕೆ ಸಹಕಾರಿಯಾಗಿದೆ. ನಿಮ್ಮ ಸೇವಾ ಅವಧಿಯಲ್ಲಿ ದೇಶದ ಪ್ರತಿಯೊಂದು ಕ್ಷೇತ್ರದ ಪರಿಚಯವಾಗುತ್ತದೆ ಎಂದು ತಿಳಿಸಿದರು.

ಅಧ್ಯಕ್ಷತೆ ವಹಿಸಿದ್ದ ಪ್ರಿನ್ಸಿಪಾಲ್ ಪ್ರೊ. ಮನೋಜಕುಮಾರ್ ಅವರು ಮಾತನಾಡಿ, ವಿದ್ಯಾರ್ಥಿಗಳು ಜೀವನದಲ್ಲಿ ಶಿಸ್ತು, ಸಮಯ ಪ್ರಜ್ಞೆ, ಸಂಯಮ ಮೈಗೂಡಿಸಿಕೊಳ್ಳಬೇಕು. ಶಿಕ್ಷಣದ ಜತೆಗೆ ಸಾಮಾಜಿಕ ಕಾರ್ಯಗಳಲ್ಲೂ ಪಾಲ್ಗೊಳ್ಳಬೇಕು. ಸಮಾಜ ಕಾರ್ಯಕ್ಕೆ ಎನ್‌ಎಸ್‌ಎಸ್ ಅತ್ಯಂತ ಪ್ರಯೋಜನಕಾರಿಯಾಗಿದೆ ಎಂದು ಕಿವಿಮಾತು ಹೇಳಿದರು.

ಪ್ರೊ. ಶ್ರೀಕಾಂತ್ ಪಾಟೀಲ್ ಅವರು ರಾಷ್ಟ್ರೀಯ ಸೇವಾ ಯೋಜನೆ ಉದ್ದೇಶಗಳನ್ನು ವಿವರಿಸಿದರು. ಎನ್‌ಎಸ್‌ಎಸ್ ಘಟಕ 1ರ ಕಾರ್ಯಕ್ರಮ ಅಧಿಕಾರಿ ಶ್ರೀನಿವಾಸ್ ರೆಡ್ಡಿ ಅವರು ಪ್ರಾಸ್ತಾವಿಕವಾಗಿ ಮಾತನಾಡಿದರು. ಎನ್‌ಎಸ್‌ಎಸ್ ಘಟಕ 2ರ ಕಾರ್ಯಕ್ರಮ ಅಧಿಕಾರಿ ಡಾ. ವಿದ್ಯಾ ಪಾಟೀಲ್ ಅವರು ಸ್ವಾಗತಿಸಿದರು. ಅಂಜಲಿ ಅವರು ಕಾರ್ಯಕ್ರಮ ನಿರೂಪಿಸಿದರು. ಅಶ್ವಿನಿ ಅವರು ವಂದಿಸಿದರು.

# ಯುದ್ಧದ ಉದ್ವಿಗ್ನ ಪರಿಸ್ಥಿತಿಯಲ್ಲಿ ಸಾರ್ವಜನಿಕರು ಆತಂಕಪಡುವ ಅಗತ್ಯವಿಲ್ಲ

## ಭಾರತ–ಪಾಕ್: ಸೂಕ್ತ ತಿಳಿವಳಿಕೆ ಹೊಂದಲು ವಿಜಯಪುರ ಜಿಲ್ಲಾಧಿಕಾರಿ ಭೂಬಾಲನ್ ಮನವಿ




**ವಿಜಯಪುರ,ಮೇ.10–** ಪಾಕ್–ಭಾರತ ಮಧ್ಯೆ ಉದ್ಭವಿಸಿರುವ ಉದ್ವಿಗ್ನದಂತಹ ಪರಿಸ್ಥಿತಿಯ ಸಂದರ್ಭದಲ್ಲಿ ಸಾರ್ವಜನಿಕರು ಆತಂಕಪಡುವ ಅವಶ್ಯಕತೆ ಇಲ್ಲ. ಯುದ್ಧದಂತಹ ಸನ್ನಿವೇಶ ಎದುರಾದಲ್ಲಿ ಸಾರ್ವಜನಿಕರ ರಕ್ಷಣೆಗೆ ಎಲ್ಲ ಅಗತ್ಯ ಮುಂಜಾಗ್ರತಾ ಕ್ರಮಗಳನ್ನು ವಹಿಸಲಾಗಿದ್ದು, ಸಾರ್ವಜನಿಕರು ಯಾವುದೇ ವದಂತಿಗಳಿಗೆ ಕಿವಿಗೊಡದೇ, ಸನ್ನಿವೇಶವನ್ನು ಸಮರ್ಥವಾಗಿ ಎದುರಿಸಲು ಸೂಕ್ತ ತಿಳುವಳಿಕೆ ಹೊಂದುವಂತೆ ಜಿಲ್ಲಾಧಿಕಾರಿ ಟಿ.ಭೂಬಾಲನ್ ಅವರು ಮನವಿ ಮಾಡಿಕೊಂಡಿದ್ದಾರೆ.

ಶನಿವಾರ ನಗರದ ಜಿಲ್ಲಾಧಿಕಾರಿಗಳ ಕಚೇರಿ ಸಭಾಂಗಣದಲ್ಲಿ ಜಿಲ್ಲಾ ಮಟ್ಟದ ವಿವಿಧ ಅಧಿಕಾರಿಗಳೊಂದಿಗೆ ಸಭೆ ನಡೆಸಿದ ಅವರು, ರಾಜ್ಯ ಸರ್ಕಾರದ ಮಾನ್ಯ ಮುಖ್ಯಮಂತ್ರಿಗಳು ಎಲ್ಲ ಜಿಲ್ಲೆಯ ಅಧಿಕಾರಿಗಳೊಂದಿಗೆ ವಿಡಿಯೋ ಸಂವಾದದ ಮೂಲಕ ಸಭೆ ನಡೆಸಿ ಸೂಚನೆ ನೀಡಿದ ಹಿನ್ನಲೆಯಲ್ಲಿ ಜಿಲ್ಲೆಯಲ್ಲಿ ಸಾರ್ವಜನಿಕರಿಗೆ ಯಾವುದೇ ತೊಂದರೆಯಾಗದಂತೆ ಜನರಲ್ಲಿ ಸೂಕ್ತ ತಿಳುವಳಿಕೆ ಮೂಡಿಸಿ, ಅಗತ್ಯ ಮುಂಜಾಗ್ರತಾ ಸುರಕ್ಷತಾ ಕ್ರಮಗಳನ್ನು ಕೈಗೊಳ್ಳುವಂತೆ ಸಂಬಂಧಿಸಿದ ಅಧಿಕಾರಿಗಳಿಗೆ ಅವರು ಸೂಚನೆ ನೀಡಿದ್ದಾರೆ.

ಜಿಲ್ಲೆಯಲ್ಲಿ ಶಾಂತಿ ಸುವ್ಯವಸ್ಥೆ, ಸಾರ್ವಜನಿಕರಿಗೆ ಸುಗಮ ಆರೋಗ್ಯ ವ್ಯವಸ್ಥೆ ದೊರಕಿಸುವುದು, ಆಹಾರ ಉತ್ಪನ್ನಗಳ ಕೃತಕ ಅಭಾವ ಸೃಷ್ಟಿಯಾಗದಂತೆ ಮುಂಜಾಗ್ರತೆ ವಹಿಸುವುದು ಸೇರಿದಂತೆ ಸಾರ್ವಜನಿಕರ ರಕ್ಷಣಾ ಚಟುವಟಿಕೆಗೆ ಅಗತ್ಯ ಮುಂಜಾಗ್ರತಾ ಕ್ರಮ ವಹಿಸುವಂತೆ ಅವರು ಅಧಿಕಾರಿಗಳಿಗೆ ಸೂಚನೆ ನೀಡಿದ್ದು, ಸಾರ್ವಜನಿಕರು ಸಹ ಯಾವುದೇ ಸುಳ್ಳು ಸುದ್ದಿಗಳು ಸೇರಿದಂತೆ ವದಂತಿಗಳಿಗೆ ಕಿವಿಗೊಡದಂತೆ ಮನವಿ ಮಾಡಿಕೊಂಡ ಅವರು, ಇದಕ್ಕೆ ಸಂಬಂಧಿಸಿದಂತೆ ಯಾವುದೇ ಅನುಮಾನ, ಸಮಸ್ಯೆಗಳಿದ್ದಲ್ಲಿ ಸಾರ್ವಜನಿಕರು 1077 ಸಹಾಯವಾಣಿಗೆ ಕರೆ.ಮಾಡಿ ಪರಿಹರಿಸಿಕೊಳ್ಳಬಹುದಾಗಿದೆ ಎಂದು ಅವರು ತಿಳಿಸಿದರು.

ಸಾಮಾಜಿಕ ಜಾಲತಾಣಗಳಲ್ಲಿ ಸುಳ್ಳು ಸುದ್ದಿ ಹರಡದಂತೆ ಮುಂಜಾಗ್ರತಾ ಕ್ರಮ ವಹಿಸಬೇಕು. ಜಿಲ್ಲೆಯ ಪ್ರವಾಸಿ ತಾಣಗಳು, ಧಾರ್ಮಿಕ ಕ್ಷೇತ್ರಗಳು, ಹೆಚ್ಚಿನ ಜನರು ಸೇರುವ ಜನಸಂದಣಿ ಸ್ಥಳಗಳು ಸೇರಿದಂತೆ ಅಗತ್ಯ ರಕ್ಷಣಾ ವ್ಯವಸ್ಥೆಗೆ ಕ್ರಮ ವಹಿಸಬೇಕು. ನಗರ ಪ್ರದೇಶಗಳಲ್ಲಿ ಹೆಚ್ಚಿನ ಜಾಗೃತಿ ವಹಿಸಬೇಕು. ಆದಷ್ಟು ಹೆಚ್ಚಿನ ಜನರು ಸೇರದಂತೆ ನೋಡಿಕೊಳ್ಳಬೇಕು. ಸಾರ್ವಜನಿಕರಲ್ಲಿ ಸೂಕ್ತ ಜಾಗೃತಿ ತಿಳುವಳಿಕೆ ಮೂಡಿಸಿ ಸೂಕ್ತ ಕಾನೂನು ವ್ಯವಸ್ಥೆ ಕಾಪಾಡಲು ಕ್ರಮ ವಹಿಸುವಂತೆ ಅವರು ಸಂಬಂಧಿಸಿದ ಅಧಿಕಾರಿಗಳಿಗೆ ಅವರು ಸೂಚನೆ ನೀಡಿದರು.

ಜಿಲ್ಲೆಯಲ್ಲಿರುವ ಎನ್‌ಟಿಪಿಸಿ ಸೇರಿದಂತೆ ವಿವಿಧ ಮೂಲ ಸೌಕರ್ಯಗಳ ರಕ್ಷಣೆಗೆ ಸೂಕ್ತ ತಿಳುವಳಿಕೆ, ಅಣುಕು ಪ್ರದರ್ಶನ ಸೇರಿದಂತೆ ಎಲ್ಲ ಅಗತ್ಯ ಸಿದ್ಧತೆಗಳನ್ನು ಕೈಗೊಳ್ಳಲಾಗಿದ್ದು, ಸಾರ್ವಜನಿಕರಿಗೆ ಕುಡಿಯುವ ನೀರು, ಆರೋಗ್ಯ ಸೇವೆ ಸೇರಿದಂತೆ ಎಲ್ಲ ಅಗತ್ಯ ಮೂಲಭೂತ ಸೇವೆಗಳು ಸುಗಮವಾಗಿ ದೊರಕುವಂತೆ ನೋಡಿಕೊಂಡು ಸಾರ್ವಜನಿಕರಿಗೆ ಯಾವುದೇ ತೊಂದರೆಯಾಗದಂತೆ ಕ್ರಮ ವಹಿಸುವಂತೆ ಅವರು ಅಧಿಕಾರಿಗಳಿಗೆ ಸೂಚನೆ ನೀಡಿದರು.

ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ಲಕ್ಷ್ಮಣ ನಿಂಬರಗಿ ಅವರು ಮಾತನಾಡಿ, ಜಿಲ್ಲೆ ಯಾದ್ಯಂತ ಸೂಕ್ತ ರಕ್ಷಣಾ ವ್ಯವಸ್ಥೆ ಕೈಗೊಳ್ಳಲಾಗಿದ್ದು, ಅಗತ್ಯವಿರುವ ಕಡೆ ಹೆಚ್ಚಿನ ಭದ್ರತೆಗೆ ಕ್ರಮ ವಹಿಸಲಾಗಿದೆ. ವಿವಿಧೆಡೆ ಅಣುಕು ಪ್ರದರ್ಶನಗಳನ್ನು ಏರ್ಪಡಿಸಿ ಯುದ್ಧದ ಸನ್ನಿವೇಶಗಳಲ್ಲಿ ಕೈಗೊಳ್ಳಬೇಕಾದ ಕ್ರಮಗಳ ಕುರಿತು ಜನರಲ್ಲಿ ಸೂಕ್ತ ತಿಳುವಳಿಕೆ ಸಹ ಮೂಡಿಸಲಾಗುತ್ತಿದೆ. ಸಾಮಾಜಿಕ ಜಾಲತಾಣಗಳ ಮೂಲಕ ಸುಳ್ಳು ಸುದ್ದಿಗಳನ್ನು ಹರಡುವವರ ಮೇಲೆ ಪೊಲೀಸ್ ಇಲಾಖೆ ವತಿಯಿಂದ ತೀವ್ರ ನಿಗಾ ಇರಿಸಲಾಗಿದ್ದು, ಸಾರ್ವ ಜನಿಕರು ಯಾವುದೇ ಸುಳ್ಳು ಸುದ್ದಿಗಳಾಗಲಿ, ಕೋಮು–ಸೌಹಾರ್ದತೆ ಹಾಗೂ ಶಾಂತಿ ಸುವ್ಯವಸ್ಥೆ ಧಕ್ಕೆ ತರುವ ಸುದ್ದಿಗಳನ್ನು ಹರಿಬಿಟ್ಟಲ್ಲಿ ಅಂತಹವರ ಮೇಲೆ ಸೂಕ್ತ ಕಾನೂನು ಕ್ರಮ ವಹಿಸಲಾಗುವುದು ಎಂದು ಅವರು ತಿಳಿಸಿದರು.

ಸಭೆಯಲ್ಲಿ ಜಿಲ್ಲಾ ಪಂಚಾಯತ್ ಮುಖ್ಯ ಕಾರ್ಯನಿರ್ವಹಣಾಧಿಕಾರಿ ರಿಷಿ ಆನಂದ ಸೇರಿದಂತೆ ಜಿಲ್ಲಾ ಮಟ್ಟದ ವಿವಿಧ ಅಧಿಕಾರಿಗಳು ಉಪಸ್ಥಿತರಿದ್ದರು.

# ತಾಯಂದಿರ ಮರಣ ಶೂನ್ಯಕ್ಕೆ ತರಲು ಶ್ರಮಿಸಿ: ನಿತೀಶ್ ಕೆ.

**ರಾಯಚೂರು, ಮೇ.11–** ಜಿಲ್ಲೆಯಲ್ಲಿ ತಾಯಂದಿರ ಮರಣ ಪ್ರಮಾಣವನ್ನು ಶೂನ್ಯಕ್ಕೆ ತರುವ ನಿಟ್ಟಿನಲ್ಲಿ ಜಿಲ್ಲಾ ಆರೋಗ್ಯ ಇಲಾಖೆಯು ಎಲ್ಲಾ ರೀತಿಯ ಅಗತ್ಯ ಕ್ರಮಗಳನ್ನು ಕೈಕೊಂಡು ಯಶಸ್ಸು ಗಳಿಸಬೇಕು ಎಂದು ಜಿಲ್ಲಾಧಿಕಾರಿ ನಿತೀಶ್ ಕೆ ಅವರು ತಿಳಿಸಿದರು.

ತಾಯಿ ಮತ್ತು ಮಕ್ಕಳ ಸರ್ಕಾರಿ ಆಸ್ಪತ್ರೆಯಲ್ಲಿ ಜಿಲ್ಲಾಡಳಿತ, ಜಿಲ್ಲಾ ಪಂಚಾಯತ್, ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆ ಮತ್ತು ವಾಣಿ ವಿಲಾಸ ಮೆಡಿಕಲ್ ಕಾಲೇಜ್ ಸಹಯೋಗದಲ್ಲಿ ನಡೆದ 'ಪ್ರಸೂತಿ ಆರೈಕೆ' ಕಾರ್ಯಾಗಾರಕ್ಕೆ ಚಾಲನೆ ನಿಡಿ, ತಾಯಂದಿರರಿಗೆ ಖಾಸಗಿ ಆಸ್ಪತ್ರೆಗಳಲ್ಲಿ ಸಿಗುವಂತ ಸೌಲಭ್ಯಗಳನ್ನು ನಮ್ಮ ಸರ್ಕಾರಿ ಆಸ್ಪತ್ರೆಗಳಲ್ಲಿ ಸಿಗುವಂತೆ ಮಾಡುವ ಮೂಲಕ ರಾಜ್ಯಕ್ಕೆ ರಾಯಚೂರು ಜಿಲ್ಲೆಯು ಮಾದರಿಯಾಗಬೇಕು. ಈ ಕಾರ್ಯಕ್ಕೆ ಜಿಲ್ಲಾಡಳಿತದಿಂದ ಜಿಲ್ಲೆಯ ಆರೋಗ್ಯ ಇಲಾಖೆಯ ಅಧಿಕಾರಿಗಳಿಗೆ ಸಕಲ ರೀತಿಯ ಸಹಕಾರ ನೀಡಲಾಗುವುದು ಎಂದರು.

ಜಿಲ್ಲಾ ಶಸ್ತ್ರಚಿಕಿತ್ಸಕರಾದ ಡಾ.ವಿಜಯ ಶಂಕರ ಅವರು ಮಾತನಾಡಿ, ನಸಿರ್ಂಗ್




ರಾಯಚೂರು ನಗರದ ತಾಯಿ ಮತ್ತು ಮಕ್ಕಳ ಸರ್ಕಾರಿ ಆಸ್ಪತ್ರೆಯಲ್ಲಿ ಜಿಲ್ಲಾಡಳಿತ, ಜಿಲ್ಲಾ ಪಂಚಾಯತ್, ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆ ಮತ್ತು ವಾಣಿ ವಿಲಾಸ ಮೆಡಿಕಲ್ ಕಾಲೇಜ್ ಸಹಯೋಗದಲ್ಲಿ ನಡೆದ 'ಪ್ರಸೂತಿ ಆರೈಕೆ' ಕಾರ್ಯಾಗಾರಕ್ಕೆ ಜಿಲ್ಲಾಧಿಕಾರಿ ನಿತೀಸ್ ಕೆ ಅವರು ಚಾಲನೆ ನಿಡಿ ಅವರು ಮಾತನಾಡಿದರು.

ಅಧಿಕಾರಿಗಳು ನಿರ್ಲಕ್ಷ್ಯತೆ ವಹಿಸದೆ ತಮ್ಮ ಕಾರ್ಯಗಳನ್ನು ಅಚ್ಚುಕಟ್ಟಾಗಿ ನಿರ್ವಹಣೆ ಮಾಡಬೇಕು. ಹಿಂದುಳಿದ ಈ ಜಿಲ್ಲೆಯಲ್ಲಿ ಆರೋಗ್ಯ ಕ್ಷೇತ್ರದಲ್ಲಿ ಉತ್ತಮ ಸಾಧನೆ ಮಾಡಬೇಕು. ಇಲ್ಲಿನ ಜನರಿಗೆ ಉತ್ತಮ ಆರೋಗ್ಯ ಸೇವೆ ಒದಗಿಸಲು ಎಲ್ಲರೂ ಶ್ರಮಿಸಬೇಕು ಎಂದು ಹೇಳಿದರು.

ಜಿಲ್ಲೆಯ ಎಲ್ಲಾ ತಾಲೂಕು ಆಸ್ಪತ್ರೆಗಳಲ್ಲಿ ಉತ್ತಮ ಚಿಕಿತ್ಸೆ ನೀಡಲಾಗುತ್ತಿದೆ. ಅದೇ ರೀತಿ ರಿಮ್ಸ್ ಸಂಸ್ಥೆಯಲ್ಲಿ ಕೂಡ ಅತ್ಯುತ್ತಮ ಚಿಕಿತ್ಸೆ ನೀಡಲಾಗುತ್ತಿದೆ. ನಸಿರ್ಂಗ್ ಅಧಿಕಾರಿಗಳು ರೋಗಿಗಳೊಂದಿಗೆ ಬೆರತು ಸೇವೆ ಮಾಡಬೇಕು. ಸರ್ಕಾರಿ ಆಸ್ಪತ್ರೆಯಲ್ಲಿ ನೂರರಷ್ಟು ಹೆರಿಗೆ ಮಾಡಿಸಲು ಎಲ್ಲರೂ ಶ್ರಮಿಸಬೇಕು ಎಂದು ಹೇಳಿದರು.

ಈ ವೇಳೆ ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆಯ ಅಧಿಕಾರಿ ಡಾ.ಸುರೇಂದ್ರ ಬಾಬು ಅವರು ಮಾತನಾಡಿ, ಜಿಲ್ಲೆಯ ಜಿಲ್ಲಾಧಿಕಾರಿಗಳ ಸಹಕಾರದಿಂದ ಜಿಲ್ಲೆಯಲ್ಲಿ ಉತ್ತಮ ಕಾರ್ಯಕ್ರಮಗಳು ನಡೆಯುತ್ತಿವೆ. ಆರೋಗ್ಯ ವಿಚಾರವಾಗಿ ಜಿಲ್ಲಾಧಿಕಾರಿಗಳು ಸಂಪೂರ್ಣವಾಗಿ ಬೆಂಬಲಕ್ಕೆ ನಿಂತಿದ್ದಾರೆ. ಇಲಾಖೆಯ ಅಧಿಕಾರಿಗಳು, ಸಿಬ್ಬಂದಿಯು ತರಬೇತಿಯನ್ನು ಸರಿಯಾಗಿ ಪಡೆದುಕೊಂಡು ಇನ್ನೂ ಅತ್ಯುತ್ತಮ ರೀತಿಯಲ್ಲಿ ಕಾರ್ಯ ನಿರ್ವಹಿಸಬೇಕೆಂದು ಹೇಳಿದರು.

ರಿಮ್ಸ್ ಸಂಸ್ಥೆಯ ನಿರ್ದೇಶಕರಾದ ಡಾ.ರಮೇಶ, ಜಿಲ್ಲಾ ಆರ್.ಸಿ.ಹೆಚ್ ಅಧಿಕಾರಿ ಡಾ.ನಂದಿತಾ, ಡಾ.ಅಶೋಕ, ಡಾ.ರಂಗನಾಥ, ನವೋದಯ ಡೀನ್ ದೇವನಂದ, ರಾಯಚೂರು ತಾಲೂಕು ಆರೋಗ್ಯಾಧಿಕಾರಿ ಡಾ.ಪ್ರಜ್ವಲ್ ಸೇರಿದಂತೆ ಇತರರು ಇದ್ದರು.

# ವಿಜಯಪುರದಲ್ಲಿ ಶಿವಶರಣೆ ಹೇಮರೆಡ್ಡಿ ಮಲ್ಲಮ್ಮ ಜಯಂತಿ ಆಚರಣೆ

**ವಿಜಯಪುರ,ಮೇ.10–** ತಮ್ಮ ಬದುಕಿನ ಮಾರ್ಗದ ಮೂಲಕ ಸಮಾಜಕ್ಕೆ ಒಳ್ಳೆಯ ಸಂದೇಶ ಸಾರಿದವರು ಶಿವಶರಣೆ ಹೆಮರಡ್ಡಿ ಮಲ್ಲಮ್ಮ ಎಂದು ಉಪ ವಿಭಾಗಾಧಿಕಾರಿಗಳಾದ ಗುರುನಾಥ ದಡ್ಡೆ ಅವರು ಹೇಳಿದರು.

ಜಿಲ್ಲಾಡಳಿತ, ಜಿಲ್ಲಾ ಪಂಚಾಯತ್ ಹಾಗೂ ಕನ್ನಡ ಮತ್ತು ಸಂಸ್ಕೃತಿ ಇಲಾಖೆ ಇವರ ಸಹಯೋಗದಲ್ಲಿ ಶನಿವಾರ ನಗರದ ಕಂದಗಲ್ ಶ್ರೀ ಹನುಮಂತರಾಯ ರಂಗಮಂದಿರದಲ್ಲಿ ಶಿವಶರಣೆ ಮಹಾಸಾಧ್ವಿ ಹೇಮರೆಡ್ಡಿ ಮಲ್ಲಮ್ಮ ಜಯಂತಿ ಕಾರ್ಯಕ್ರಮಕ್ಕೆ ಚಾಲನೆ ನೀಡಿ ಮಾತನಾಡಿದ ಅವರು, ಶಿವಶರಣೆ ಮಲ್ಲಮ್ಮನವರು ಕಷ್ಟಗಳಿಗೆ ಎದೆಗುಂದದೇ ತಾಳ್ಮೆಯ ಬದುಕಿನ ಮಾರ್ಗದಲ್ಲಿ ನಡೆಯುವುದರೊಂದಿಗೆ ಅವರ ಬದುಕಿನ ತತ್ವಾದರ್ಶಗಳು ಇಂದಿನ ಸಮಾಜಕ್ಕೆ ಪ್ರೇರಣಾದಯಾಕ ವಾಗಿದೆ ಎಂದು ಅವರು ತಿಳಿಸಿದರು.



ಮೈದುನ ವೇಮನನಿಗೆ ಸನ್ಮಾರ್ಗ ತೋರಿಸಿ ಆದರ್ಶ ವ್ಯಕ್ತಿಯನ್ನಾಗಿದವರು ಶಿವಶರಣೆ ಮಲ್ಲಮ್ಮ ಅವಿಭಕ್ತ ಕುಟುಂಬದ ಪರಿಕಲ್ಪನೆಯಲ್ಲಿ ಸಾಗಿ ಸಮಾಜಕ್ಕೆ ಕುಟುಂಬದ ಮೌಲ್ಯಗಳನ್ನು ಸಾರಿದರು. ಅವರ ತತ್ವಾದರ್ಶಗಳನ್ನು ಇಂದಿನ ಯುವಜನತೆ ತಮ್ಮ ಜೀವನದಲ್ಲಿ ಅಳವಡಿಸಿಕೊಳ್ಳಬೇಕು.

ಕಾರ್ಯಕ್ರಮದಲ್ಲಿ ಉಪನ್ಯಾಸ ನೀಡಿದ ಸಿಕ್ಯಾಬ್ ಮಹಿಳಾ ಮಹಾವಿದ್ಯಾನಿಲಯದ ಕನ್ನಡ ವಿಭಾಗದ ಮುಖ್ಯಸ್ಥರಾದ ಡಾ.ಮಲ್ಲಿಕಾರ್ಜುನ ಮೇತ್ರಿ ಮಾತನಾಡಿ, ತಾಳ್ಮೆ, ಸಹನೆ ಹಾಗೂ ಭಕ್ತಿಯ ಮಾರ್ಗದಲ್ಲಿ ಸಾಗಿದವರು. ಸಹನೆ, ಭಕ್ತಿ, ದಾನಿ, ಕ್ಷಮಾಗುಣಿ ಹೀಗೆ ಅನೇಕ ನಾಮಗಳಿಂದ ಹೆಮರಡ್ಡಿ ಮಲ್ಲಮ್ಮ ಅವರನ್ನು ಸ್ಮರಿಸಲಾಗುವುದು. ದಾನದ ಮೌಲ್ಯಗಳನ್ನು ಜಗತ್ತಿಗೆ ಸಾರಿದ ಶಿವಶರಣೆ ಮಲ್ಲಮ್ಮ, ಕಷ್ಟಗಳಲ್ಲಿಯೂ ಸಕಾರಾತ್ಮಕತೆಯನ್ನು ಕಂಡುಕೊಂಡವರು. ಮಲ್ಲಮ್ಮ ತಮ್ಮಲ್ಲಿರುವ ತಾಳ್ಮೆ ಶಕ್ತಿಯಂತಹ ಆದರ್ಶಮಯ ಅಂಶಗಳ ಅಳವಡಿಸಿಕೊಳ್ಳಬೇಕಾಗಿದೆ ಎಂದರು.

# ಇಂಡೋ–ಪಾಕ್ ಯುದ್ಧ ಸನ್ನಿವೇಶ: ರದ್ದಾದ ರಜೆ ದೇಶಸೇವೆಗೆ ಮರಳಿದ ಕನ್ಯಾಕುಮಾರ ಚೌಹಾಣ್

**ಕಲಬುರಗಿ, ಮೇ.11–** ದೇಶದಲ್ಲಿ ಸದ್ಯ ಭಾರತ–ಪಾಕ್ ನಡುವೆ ಯುದ್ಧ ಸನ್ನಿವೇಶ ಗೋಚರವಾಗತ್ತಿರುವ ನಿಟ್ಟಿನಲ್ಲಿ ರಜೆಯ ಮೇಲೆ ತೆರಳಿದ್ದ ಸೈನಿಕರ ಅವಶ್ಯಕತೆ ಇದ್ದು, ಅವರ ರಜೆಗಳನ್ನು ರದ್ದುಪಡಿಸಿ ಮರಳಿ ಕರೆಸಿಕೊಳ್ಳುವ ಪ್ರಕ್ರಿಯೆ ನಡೆದಿದೆ. ಇತ್ತ ಕಲಬುರಗಿಯ ಯೋಧ ಕನ್ಯಾ ಕುಮಾರ ಕೂಡ ತಾಯಿ ಭಾರತ ಮಾತೆಯ ಸೇವೆಗಾಗಿ ರಜೆ ಮೊಟಕುಗೊಳಿಸಿ ದೇಶ ಸೇವೆಗೆ ತೆರಳಿದ್ದಾನೆ.

ಕಲಬುರಗಿ ಜಿಲ್ಲೆಯ ಅಫಜಲಪುರ ತಾಲೂಕಿನ ಅರ್ಜುಣಗಿ ತಾಂಡಾದ ನಿವಾಸಿಯಾದ ಕನ್ಯಾ ಕುಮಾರ್ ಚೌಹಾಣ್ ತಂಗಿಯ ಮದುವೆ ಹಾಗೂ ಹೆತ್ತ ತಾಯಿಯ ಅನಾರೋಗ್ಯ ಸಮಸ್ಯೆ ಹಿನ್ನೆಲೆಯಲ್ಲಿ ಒಂದು ತಿಂಗಳ ರಜೆಯ ಮೇಲೆ ಕಲಬುರಗಿಗೆ ಬಂದಿದ್ದ, ಈಗ ಯುದ್ಧದ ಕಾರ್ಮೋಡ ಹೆಚ್ಚಾಗಿದ್ದರಿಂದ ಮರಳಿ ತನ್ನ ಕರ್ತವ್ಯಕ್ಕೆ ಹಾಜರಾಗಲು ಕಲಬುರಗಿಯಿಂದ ಪ್ರಯಾಣ ಬೆಳೆಸಿದ್ದಾನೆ.

ಕನ್ಯಾ ಕುಮಾರ ಚೌಹಾಣ್ 20



ವರ್ಷಗಳಿಂದ ಸಿಆರ್‌ಪಿಎಫ್ ನಲ್ಲಿ ಸೇವೆ ಸಲ್ಲಿಸುತ್ತಿದ್ದು, ಮನೆಯಲ್ಲಿ ಬರುವ ಮೇ.19ರಂದು ತಂಗಿಯ ಮದುವೆ ನಿಮಿತ್ತ ಒಂದು ತಿಂಗಳ ರಜೆ ಪಡೆದ ಮೇ.6ರಂದು ಕಲಬುರಗಿಗೆ ಆಗಮಿಸಿದ್ದರು. ಇದೀಗ ಪಹಲ್ಗಾಮ್ ದಾಳಿ ಪ್ರತೀಕಾರವಾಗಿ ಭಾರತ ಮತ್ತು ಪಾಕಿಸ್ತಾನದ ಮಧ್ಯೆ ಯುದ್ಧ ಏರ್ಪಟ್ಟ ಹಿನ್ನೆಲೆಯಲ್ಲಿ, ರಜೆ ರದ್ದುಪಡಿಸಿ ನಿಮ್ಮ ಕರ್ತವ್ಯಕ್ಕೆ ಹಾಜರಾಗುವಂತೆ ಹೆಡ್ಕ್ವಾರ್ಟರ್ಸ್‌ನಿಂದ ಕರೆ ಬಂದಿದೆ.

ಯೋಧ ಕನ್ಯಾ ಕುಮಾರ ಚೌಹಾಣ್ ಅವರ ತಾಯಿಯ ಅನಾರೋಗ್ಯ ಹಾಗೂ ತಂಗಿಯ ಮದುವೆಯನ್ನು ಬಿಟ್ಟು, ಇದೀಗ ದೇಶದ ಸೇವೆಗಾಗಿ ಪುನಃ ತನ್ನ ಕರ್ತವ್ಯಕ್ಕೆ ಹಾಜರಾಗುತ್ತಿದ್ದು, ಜಮ್ಮು ಕಾಶ್ಮೀರದ ಶ್ರೀನಗರದಲ್ಲಿ ಕಳೆದ 20 ವರ್ಷಗಳಿಂದ ಸೇವೆ ಸಲ್ಲಿಸುತ್ತಿದ್ದಾರೆ. ಹೆಡ್ ಕ್ವಾರ್ಟರ್ಸ್‌ನಿಂದ ಕರೆ ಬಂದ ಕೂಡಲೇ ಕಲಬುರಗಿ ರೈಲ್ವೆ ನಿಲ್ದಾಣದಿಂದ ಹೈದರಾಬಾದ್‌ಗೆ ತೆರಳಿ ಅಲ್ಲಿಂದ ಶ್ರೀನಗರಕ್ಕೆ ರಿಪೋರ್ಟ್ ಮಾಡಿಕೊಳ್ಳಲಿದ್ದಾರೆ.

## ಕಣ್ಣೀರಿಡುತ್ತಾ ಬೀಳ್ಕೊಟ್ಟ ಹೆಂಡತಿ

ತಂಗಿಯ ಮದುವೆಗೆ ಬಂದಿದ್ದ ಸಿಆರ್‌ಪಿಎಫ್ ಯೋಧ ಕನ್ಯಾ ಕುಮಾರ ಚೌಹಾಣ್ ಮರಳಿ ಕರ್ತವ್ಯಕ್ಕೆ ಹಾಜರಾಗಲು ಹೋಗುತ್ತಿದ್ದಂತೆ ಕಲಬುರಗಿ ನಗರದ ರೈಲ್ವೆ ನಿಲ್ದಾಣದಲ್ಲಿ ಸಂಬಂಧಿಕರು ಹಾಗೂ ಸಾರ್ವಜನಿಕರು ಹೂವಿನ ಹಾರ ಹಾಕಿ ಯುದ್ಧದಲ್ಲಿ ಜಯಶಾಲಿಯಾಗಿ ಮರಳಿ ಬಾ ಎಂದು ಪ್ರೀತಿಯಿಂದ ದೇಶ ಸೇವೆಗೆ ಕಳುಹಿಸಿ ಕೊಟ್ಟಿದ್ದಾರೆ. ಇತ್ತ ಯೋಧನ ಪತ್ನಿ ಸಹ ಕಣ್ಣೀರು ಹಾಕಿ, ಆತಂಕದಲ್ಲೇ ಪತಿಯನ್ನು ಯುದ್ಧ ಭೂಮಿಗೆ ಕಳುಹಿಸಿದ್ದಾರೆ.

# ಭಾರತ-ಪಾಕಿಸ್ತಾನ ಕದನ ವಿರಾಮ: ಅಮೆರಿಕದ ಮಧ್ಯಸ್ಥಿಕೆ ಕಾರಣ: ಅಧ್ಯಕ್ಷ ಡೊನಾಲ್ಡ್ ಟ್ರಂಪ್



**ವಾಷಿಂಗ್ಟನ್/ನವದೆಹಲಿ, ಮೇ 11:** ಭಾರತ ಮತ್ತು ಪಾಕಿಸ್ತಾನ ಕದನ ವಿರಾಮ ಒಪ್ಪಂದಕ್ಕೆ ಬರಲು ಅಮೆರಿಕ ಸಹಾಯ ಮಾಡಲು ಸಾಧ್ಯವಾಯಿತು ಎಂದು ಹೆಮ್ಮೆಪಡುತ್ತೇನೆ ಮತ್ತು ಕಾಶ್ಮೀರಕ್ಕೆ ಸಂಬಂಧಿಸಿದಂತೆ ಪರಿಹಾರವನ್ನು ತಲುಪಬಹುದೇ ಎಂದು ನೋಡಲು ಎರಡೂ ದೇಶಗಳೊಂದಿಗೆ ಕೆಲಸ ಮಾಡುತ್ತೇನೆ ಎಂದು ಅಮೆರಿಕ ಅಧ್ಯಕ್ಷ ಡೊನಾಲ್ಡ್ ಟ್ರಂಪ್ ಇಂದು ಹೇಳಿದ್ದಾರೆ.

ತಮ್ಮ ಟ್ರೂತ್ ಸೋಶಿಯಲ್ ಖಾತೆಯಲ್ಲಿನ ಹೇಳಿಕೆಯಲ್ಲಿ, ಅಮೆರಿಕ ಅಧ್ಯಕ್ಷರು ಭಾರತ ಮತ್ತು ಪಾಕಿಸ್ತಾನ ಎರಡರೊಂದಿಗೂ ವ್ಯಾಪಾರವನ್ನು ಗಣನೀಯವಾಗಿ ಹೆಚ್ಚಿಸಲಿದ್ದಾರೆ ಎಂದು ಹೇಳಿದ್ದಾರೆ.


ಹಲವರ ಸಾವು ಮತ್ತು ವಿನಾಶಕ್ಕೆ ಕಾರಣವಾಗಬಹುದಾದ ಪ್ರಸ್ತುತ ಆಕ್ರಮಣವನ್ನು ನಿಲ್ಲಿಸುವ ಸಮಯ ಬಂದಿದೆ ಎಂದು ಸಂಪೂರ್ಣವಾಗಿ ತಿಳಿದುಕೊಳ್ಳಲು ಮತ್ತು ಅರ್ಥಮಾಡಿಕೊಳ್ಳಲು ಭಾರತ ಮತ್ತು ಪಾಕಿಸ್ತಾನದ ಬಲವಾದ ಮತ್ತು ಅಚಲವಾದ ಶಕ್ತಿಶಾಲಿ ನಾಯಕತ್ವವನ್ನು ಹೊಂದಲು ನನಗೆ ತುಂಬಾ ಹೆಮ್ಮೆಯಿದೆ. ಲಕ್ಷಾಂತರ ಒಳ್ಳೆಯ ಮತ್ತು ಮುಗ್ಧ ಜನರು ಸಾಯಬಹುದಿತ್ತು! ನಿಮ್ಮ ಕೆಚ್ಚೆದೆಯ ಕಾರ್ಯಗಳಿಂದ ನಿಮ್ಮ ಪರಂಪರೆ ಬಹಳವಾಗಿ ವೃದ್ಧಿಯಾಗಿದೆ.

ಈ ಐತಿಹಾಸಿಕ ಮತ್ತು ವೀರೋಚಿತ ನಿರ್ಧಾರವನ್ನು ತೆಗೆದುಕೊಳ್ಳಲು ನಿಮಗೆ ಸಹಾಯ ಮಾಡಲು ಅಮೆರಿಕಕ್ಕೆ ಸಾಧ್ಯವಾಯಿತು ಎಂದು ನನಗೆ ಹೆಮ್ಮೆಯಿದೆ.

ಚರ್ಚೆಯನ್ನೂ ಮಾಡದಿದ್ದರೂ, ಈ ಎರಡೂ ಮಹಾನ್ ರಾಷ್ಟ್ರಗಳೊಂದಿಗೆ ವ್ಯಾಪಾರವನ್ನು ಗಣನೀಯವಾಗಿ ಹೆಚ್ಚಿಸಲಿದ್ದೇನೆ. ಹೆಚ್ಚುವರಿಯಾಗಿ, ಸಾವಿರ ವರ್ಷಗಳ ನಂತರ, ಕಾಶ್ಮೀರಕ್ಕೆ ಸಂಬಂಧಿಸಿದಂತೆ ಪರಿಹಾರವನ್ನು ತಲುಪಬಹುದೇ ಎಂದು ನೋಡಲು ನಾನು ನಿಮ್ಮಿಬ್ಬರೊಂದಿಗೂ ಕೆಲಸ ಮಾಡುತ್ತೇನೆ. ಭಾರತ ಮತ್ತು ಪಾಕಿಸ್ತಾನದ ನಾಯಕತ್ವವು ಉತ್ತಮವಾಗಿ ನಿರ್ವಹಿಸಲ್ಪಟ್ಟಿದ್ದಕ್ಕಾಗಿ ದೇವರು ನಿಮ್ಮನ್ನು ಆಶೀರ್ವದಿಸಲಿ.

ಗಮನಾರ್ಹವಾಗಿ, ಎರಡೂ ಕಡೆಯ ನಡುವಿನ ಗುಂಡಿನ ದಾಳಿ ಮತ್ತು ಮಿಲಿಟರಿ ಕಾರ್ಯಾಚರಣೆಯನ್ನು ನಿಲ್ಲಿಸುವುದನ್ನು ಎರಡೂ ದೇಶಗಳ ನಡುವೆ ನೇರವಾಗಿ ರೂಪಿಸಲಾಗಿದೆ ಎಂದು ಭಾರತ ಸಮರ್ಥಿಸಿಕೊಂಡಿದೆ. ಶನಿವಾರ ಕದನ ವಿರಾಮದ ಬಗ್ಗೆ ಬಂದ ತಿಳುವಳಿಕೆಯ ನಂತರ, ಬೇರೆ ಯಾವುದೇ ಸ್ಥಳದಲ್ಲಿ ಬೇರೆ ಯಾವುದೇ ವಿಷಯದ ಕುರಿತು ಮಾತುಕತೆ ನಡೆಸುವ ನಿರ್ಧಾರವಿಲ್ಲ ಎಂದು ಭಾರತ ಹೇಳಿದೆ. ಶನಿವಾರ, ಅಮೆರಿಕದ ವಿದೇಶಾಂಗ ಕಾರ್ಯದರ್ಶಿ ಮಾರ್ಕೊ ರುಬಿಯೊ ಕೂಡ ಕದನ ವಿರಾಮ ಒಪ್ಪಂದವು ಅಮೆರಿಕ ಮಧ್ಯಸ್ಥಿಕೆ ಯದ್ದಾಗಿದೆ ಎಂದು ಒತ್ತಿ ಹೇಳಿದರು.

# ಭಾರತ-ಪಾಕ್ ಸಮಸ್ಯೆ ಇತ್ಯರ್ಥಕ್ಕೆ ಶಾಂತಿಯುತ ಮಾತುಕತೆ ಮಾರ್ಗ: ಪಾಕಿಸ್ತಾನ ಪ್ರಧಾನಿ ಷರೀಫ್



**ಇಸ್ಲಾಮಾಬಾದ್, ಮೇ 11:** ಜಲ ಸಂಪನ್ಮೂಲ ಹಂಚಿಕೆ ಮತ್ತು ಕಾಶ್ಮೀರ ಸಮಸ್ಯೆ ಸೇರಿದಂತೆ ಉಭಯ ದೇಶಗಳ ನಡುವಿನ ದೀರ್ಘಕಾಲದ ಸಮಸ್ಯೆಗಳನ್ನು ಪರಿಹರಿಸಿಕೊಳ್ಳಲು ಶಾಂತಿಯುತ ಮಾತುಕತೆಯ ಮಾರ್ಗವನ್ನು ಅಳವಡಿಸಿಕೊಳ್ಳಬೇಕು ಎಂದು ಪಾಕ್ ಪ್ರಧಾನಿ ಶೆಹಬಾಜ್ ಷರೀಫ್ ಪ್ರತಿಪಾದಿಸಿದ್ದಾರೆ.

ಕದನ ವಿರಾಮ ಘೋಷಣೆಯಾದ ಬೆನ್ನಲ್ಲೇ ಶನಿವಾರ ರಾತ್ರಿ ದೇಶವನ್ನು ಉದ್ದೇಶಿಸಿ ಮಾತನಾಡಿದ ಅವರು, ಪ್ರಾದೇಶಿಕ ಶಾಂತಿಯ ಹಿತದೃಷ್ಟಿಯಿಂದ ಭಾರತದೊಂದಿಗಿನ ಒಪ್ಪಂದಕ್ಕೆ ಸಕಾರಾತ್ಮಕ ಪ್ರತಿಕ್ರಿಯೆ ನೀಡಿದ್ದಾಗಿ ಹೇಳಿದರು.

ಅಣ್ವಸ್ತ್ರಗಳನ್ನು ಹೊಂದಿರುವ ಎರಡು ದೇಶಗಳ ನಡುವಿನ ಉದ್ವಿಗ್ನತೆ ಶಮನಗೊಳಿಸಲು ಅಮೆರಿಕ, ಬ್ರಿಟನ್, ಟರ್ಕಿಯೆ, ಸೌದಿ ಅರೇಬಿಯಾ, ಕತಾರ್, ಯುಎಇ ನಾಯಕರು ಮತ್ತು ವಿಶ್ವಸಂಸ್ಥೆಯ ಮುಖ್ಯಸ್ಥರು ರಾಜತಾಂತ್ರಿಕ ಪ್ರಯತ್ನಗಳನ್ನು ಸಕಾರಾತ್ಮಕವಾಗಿ ನಡೆಸಿದ್ದಾರೆ.

ಇದಕ್ಕಾಗಿ ಅವರೆಲ್ಲರಿಗೂ ಕೃತಜ್ಞತೆ ಅರ್ಪಿಸುವುದಾಗಿ ಪ್ರಧಾನಿ ಹೇಳಿದರು. ಇಂಥ ಸಂದಿಗ್ಧ ಪರಿಸ್ಥಿತಿಯಲ್ಲಿ ತನ್ನ ಮಿತ್ರರಾಷ್ಟ್ರವಾದ ಚೀನಾ ಅಗತ್ಯ ಬೆಂಬಲ ಮತ್ತು ಸಹಕಾರ ನೀಡಿದೆ ಎಂದು ಅವರು ವಿವರಿಸಿದರು. ಪಾಕಿಸ್ತಾನ ಸೇನೆ ಕೈಗೊಂಡಿದ್ದ ಆಪರೇಷನ್ 'ಬುನ್ಯಾನ್-ಉನ್- ಮರ್ಸೂಸ್' ಯಶಸ್ವಿಯಾಗಿದೆ ಎಂದು ಪ್ರಧಾನಿ ಷರೀಫ್ ನೀಡಿರುವ ಹೇಳಿಕೆಯನ್ನು 'ರೇಡಿಯೊ ಪಾಕಿಸ್ತಾನ' ಪ್ರಸಾರ ಮಾಡಿದೆ.

# ಭಾರತ-ಪಾಕಿಸ್ತಾನ ನಡುವಿನ ಕದನ ವಿರಾಮ ಒಪ್ಪಂದಕ್ಕೆ ಪೋಪ್ ಸ್ವಾಗತ



**ವ್ಯಾಟಿಕನ್ ಸಿಟಿ, ಮೇ 11:** ಭಾರತ ಮತ್ತು ಪಾಕಿಸ್ತಾನ ನಡುವಿನ ಕದನ ವಿರಾಮ ಒಪ್ಪಂದವನ್ನು ರೋಮನ್ ಕ್ಯಾಥೋಲಿಕ್ ಚರ್ಚ್‌ನ ನೂತನ ಪೋಪ್ ರಾಬರ್ಟ್ ಫ್ರಾನ್ಸಿಸ್ ಪ್ರಿವೊಸ್ಟ್ ಸ್ವಾಗತಿಸಿದ್ದಾರೆ.ಭಾರತ-ಪಾಕಿಸ್ತಾನ ಬಿಕ್ಕಟ್ಟು ಕುರಿತು ಸುದ್ದಿಗಾರರೊಂದಿಗೆ ಮಾತನಾಡಿದ ಅವರು, 'ದ್ವಿಪಕ್ಷೀಯ ಮಾತುಕತೆಗಳು ಶಾಶ್ವತವಾಗಿ ಶಾಂತಿ ನೆಲೆಸಲು ಕಾರಣವಾಗುತ್ತವೆ' ಎಂದು ವಿಶ್ವಾಸ ವ್ಯಕ್ತಪಡಿಸಿದ್ದಾರೆ.ಏಪ್ರಿಲ್ 22ರಂದು ಕಾಶ್ಮೀರದ ಪಹಲ್ಗಾಮ್‌ನಲ್ಲಿ ನಡೆದ ಉಗ್ರರ ದಾಳಿಯಲ್ಲಿ 26 ಪ್ರವಾಸಿಗರು ಮೃತಪಟ್ಟಿದ್ದರು. ಇದರ ಬೆನ್ನಲ್ಲೇ ಭಾರತದ ಸಶಸ್ತ್ರ ಪಡೆಗಳು 'ಆಪರೇಷನ್ ಸಿಂಧೂರ'ದ ಮೂಲಕ ಪಾಕಿಸ್ತಾನ ಮತ್ತು ಪಾಕಿಸ್ತಾನ ಆಕ್ರಮಿತ ಕಾಶ್ಮೀರದ ಉಗ್ರರ ನೆಲೆಗಳ ಮೇಲೆ ದಾಳಿ ನಡೆಸಿತ್ತು. ಇದರ ಬೆನ್ನಲ್ಲೇ ಗಡಿಯಲ್ಲಿ ಎರಡೂ ದೇಶಗಳ ನಡುವೆ ಸೇನಾ ಸಂಘರ್ಷ ತೀವ್ರಗೊಂಡಿದೆ.ಯುದ್ಧದ ಸ್ವರೂಪದ ಸಂಘರ್ಷ ಕೊನೆಗೊಳಿಸಲು ಶನಿವಾರ ಸಂಜೆ 5 ಗಂಟೆಯಿಂದ ಅನ್ವಯವಾಗುವಂತೆ ಕದನ ವಿರಾಮಕ್ಕೆ ಭಾರತ ಮತ್ತು ಪಾಕಿಸ್ತಾನ ಒಪ್ಪಿರುವುದಾಗಿ ವಿದೇಶಾಂಗ ಸಚಿವಾಲಯ ಘೋಷಿಸಿತ್ತು. ಆದರೆ, ಶನಿವಾರ ರಾತ್ರಿ ಜಮ್ಮು ಮತ್ತು ಕಾಶ್ಮೀರ, ಪಂಜಾಬ್, ರಾಜಸ್ಥಾನ ಮತ್ತು ಗುಜರಾತ್ ಗಡಿಪ್ರದೇಶಗಳಲ್ಲಿ ಡ್ರೋನ್ ದಾಳಿಗೆ ಪಾಕ್ ಯತ್ನ ನಡೆಸಿದ್ದು, ಭಾರತ ತಕ್ಕ ಪ್ರತ್ಯುತ್ತರ ನೀಡಿದೆ.

# ಉಕ್ರೇನ್ ಜೊತೆ ರಷ್ಯಾ ಮಾತುಕತೆ: ಪುಟಿನ್



ರಷ್ಯಾ ಹಾಗೂ ಉಕ್ರೇನ್ ನಡುವಿನ ವೈಮನಸಿನ ನಡುವೆಯೇ ಉಕ್ರೇನ್ ನೊಂದಿಗೆ ನೇರ ಮಾತುಕತೆ ನಡೆಸುವ ಪ್ರಸ್ತಾಪವನ್ನು ರಷ್ಯಾ ಪ್ರಧಾನಿ ವ್ಯಾಡಿಮಿರ್ ಪುಟಿನ್ ತಿಳಿಸಿದ್ದಾರೆ.

ಉಭಯ ರಾಷ್ಟ್ರಗಳಲ್ಲಿ ಶಾಶ್ವತ ಶಾಂತಿ ಸ್ಥಾಪನೆ ಹಾಗೂ ಯುದ್ಧದ ಕಾರಣಗಳನ್ನು ತೊಡೆದು ಹಾಕುವ ಉದ್ದೇಶದಿಂದ ಮೇ 15 ರಂದು ಇಸ್ತಾಂಬುಲ್ ನಲ್ಲಿ ಉಕ್ರೇನ್ ನೊಂದಿಗೆ ಮಾತುಕತೆ ನಡೆಸುತ್ತೇವೆ ಎಂದು ರಷ್ಯಾ ಅಧ್ಯಕ್ಷ ಪುಟಿನ್ ಹೇಳಿದರು. ಉಭಯ ರಾಷ್ಟ್ರಗಳ ಹಿತಾಸಕ್ತಿಯಿಂದ ನಮ್ಮ ಪ್ರಸ್ತಾಪವನ್ನು ಉಕ್ರೇನ್ ಎದುರು ಇಟ್ಟಿದ್ದೇವೆ. ಈ ಬಗ್ಗೆ ಉಕ್ರೇನ್ ಅಧಿಕಾರಿ ಮತ್ತು ಮೇಲ್ವಿಚಾರಕರು ನಿರ್ಧಾರ ಕೈಗೊಳ್ಳಬೇಕು ಎಂದು ಪುಟಿನ್ ತಿಳಿಸಿದರು.

2022 ರಲ್ಲಿ ಮಾತುಕತೆಗಳನ್ನು ಮುರಿದುಹಾಕಿದ್ದು ರಷ್ಯಾ ಅಲ್ಲ. ಬದಲಿಗೆ ಕೈವ್. ಆದಾಗ್ಯೂ, ಯಾವುದೇ ಪೂರ್ವಭಾವಿ ಷರತ್ತುಗಳಿಲ್ಲದೆ ಕ್ರೈವ್ ನೇರ ಮಾತುಕತೆ ಗಳನ್ನು ಪುನರಾರಂಭಿಸಬೇಕೆಂದು ನಾವು ಪ್ರಸ್ತಾಪಿಸುತ್ತಿದ್ದೇವೆ ಆದರೂ ಅದು ಸಾದ್ಯವಾಗಲಿಲ್ಲ. ಅಲ್ಲದೇ ಕದನ ವಿರಾಮ ಘೋಷಿಸಿದ ಮೂರು ದಿನಗಳಲ್ಲಿ, ಕೈವ್ ರಷ್ಯಾದ ಗಡಿಯ ಮೇಲೆ ದಾಳಿ ಮಾಡಲು 5 ಬಾರಿ ಪ್ರಯತ್ನಿಸಿದೆ. ಕದನ ವಿರಾಮದ ಸಂದರ್ಭ ಉಕ್ರೇನ್ 524 ವೈಮಾನಿಕ ಡ್ರೋನ್ಗಳು, 45 ಸಮುದ್ರ ಡ್ರೋನ್ಗಳು ಸೇರಿದಂತೆ ಹಲವಾರು ಪಾಶ್ಚಿಮಾತ್ಯ ಕ್ಷಿಪಣಿಗಳೊಂದಿಗೆ ರಷ್ಯಾದ ಮೇಲೆ ದಾಳಿ ಮಾಡಿತ್ತು. ಆದರೆ, ಇದನ್ನು ರಷ್ಯಾ ಯಶಸ್ವಿಯಾಗಿ ಹಿಮ್ಮೆಟ್ಟಿಸಿತ್ತು ಎಂದು ಪುಟಿನ್ ಹೇಳಿದರು.

# ಪಾಕಿಸ್ತಾನಕ್ಕೆ ಪರಿಹಾರ ಸಾಮಗ್ರಿಗಳ ಪೂರೈಸಲು ಸಹಾಯ: ಆರೋಪ ನಿರಾಕರಿಸಿದ ಚೀನಾ



ನವದೆಹಲಿ: ಭಾರತ ಮತ್ತು ಪಾಕಿಸ್ತಾನದ ನಡುವೆ ವೇಗವಾಗಿ ಬೆಳೆಯುತ್ತಿರುವ ಪರಿಸ್ಥಿತಿಯ ಮಧ್ಯೆ, ಪಾಕಿಸ್ತಾನಕ್ಕೆ ಪರಿಹಾರ ಸಾಮಗ್ರಿಗಳನ್ನು ತಲುಪಿಸುವ ಮೂಲಕ ಇಸ್ಲಾಮಾಬಾದ್‌ಗೆ ಸಹಾಯ ಮಾಡಿಲ್ಲ ಎಂದು ಚೀನಾ ಅಧಿಕೃತವಾಗಿ ನಿರಾಕರಿಸಿದೆ ಮತ್ತು ವದಂತಿಗಳನ್ನು ಹರಡುವವರ ವಿರುದ್ಧ ಕಾನೂನು ಕ್ರಮ ಕೈಗೊಳ್ಳುವುದಾಗಿ ಬೆದರಿಕೆ ಹಾಕಿದೆ. ಸಾಕಷ್ಟು ಕಠಿಣ ಪದಗಳನ್ನು ಬಳಸಿ ಮತ್ತು ಕಾನೂನು ಕ್ರಮಕ್ಕೆ ಬೆದರಿಕೆ ಹಾಕುತ್ತಾ, ಚೀನಾದ ಪಿಎಲ್‌ಎ ಇತ್ತೀಚೆಗೆ, ಚೀನಾದ ವೈ -20 ಕಾರ್ಯತಂತ್ರದ ಸಾರಿಗೆ ವಿಮಾನವು ಪಾಕಿಸ್ತಾನಕ್ಕೆ ಪರಿಹಾರ ಸಾಮಗ್ರಿಗಳನ್ನು ತಲುಪಿಸಿದೆ ಎಂದು ಹೇಳುವ ದೊಡ್ಡ ಪ್ರಮಾಣದ ಆನ್ಲೈನ್ ಮಾಹಿತಿ ಬಂದಿದೆ ಮತ್ತು ಈ ಹಕ್ಕುಗಳನ್ನು ನಿರಾಕರಿಸುತ್ತದೆ ಮತ್ತು ಇಂಟರ್ನೆಟ್ ಕಾನೂನುಬಾಹಿರ ಭೂಮಿಯಲ್ಲ ಮತ್ತು ಮಿಲಿಟರಿ ಸಂಬಂಧಿತ ವದಂತಿಗಳನ್ನು ಸೃಷ್ಟಿಸುವುದು ಮತ್ತು ಹರಡುವುದು ಕಾನೂನುಬದ್ಧ ಜವಾಬ್ದಾರಿಯನ್ನು ಹೊಂದಿದೆ ಎಂದು ಗಮನಿಸಿದೆ ಎಂದು ಹೇಳಿದೆ.

ಭಾರತ ಮತ್ತು ಪಾಕಿಸ್ತಾನವು ಹೆಚ್ಚಿನ ಉದ್ವಿಗ್ನತೆಯಿಂದ ಬಳಲುತ್ತಿರುವ ಸಮಯದಲ್ಲಿ ಚೀನಾದ ಹೇಳಿಕೆ ಬಂದಿದೆ, ಏಕೆಂದರೆ ಭಾರತೀಯ ಸಶಸ್ತ್ರ ಪಡೆಗಳು ಪಾಕಿಸ್ತಾನದಲ್ಲಿರುವ ಭಯೋತ್ಪಾದಕ ಶಿಬಿರಗಳನ್ನು ಕೆಡವಲು ಮತ್ತು ತಟಸ್ಥಗೊಳಿಸಲು ನಿರ್ಧರಿಸಿವೆ. ಪಾಕಿಸ್ತಾನದ ಬೆಂಬಲ ಮತ್ತು ಹಣಕಾಸು ನೆರವಿನಿಂದ ನಡೆಸಲ್ಪಡುವ ಈ ಶಿಬಿರಗಳು, 2001 ರ ಸಂಸತ್ತಿನ ದಾಳಿ, 2008 ರ ದೆಹಲಿ ಬಾಂಬ್ ಸ್ಫೋಟಗಳು, 26/11 ಮುಂಬೈ ಭಯೋತ್ಪಾದಕ ದಾಳಿ, 2019 ರ ಪುಲ್ವಾಮಾ ದಾಳಿ ಮತ್ತು ಇತ್ತೀಚೆಗೆ 2025 ರ ಪಹಲ್ಗಾಮ್ ಭಯೋತ್ಪಾದಕ ದಾಳಿ ಸೇರಿದಂತೆ ಹಲವಾರು ವರ್ಷಗಳಿಂದ ಭಾರತದಲ್ಲಿ ಹಲವಾರು ಭಯೋತ್ಪಾದಕ ದಾಳಿಗಳನ್ನು ಆಯೋಜಿಸುವ ಮತ್ತು ಕಾರ್ಯಗತಗೊಳಿಸುವ ಜವಾಬ್ದಾರಿಯನ್ನು ಹೊಂದಿವೆ.

ಪಾಕಿಸ್ತಾನಕ್ಕೆ ಚೀನಾದ ಮುಕ್ತ ಬೆಂಬಲ

ಭಾರತ ಮತ್ತು ಪಾಕಿಸ್ತಾನದ ನಡುವಿನ ಉದ್ವಿಗ್ನತೆಯ ಹೆಚ್ಚಳದ ನಡುವೆ, ಚೀನಾ ಭಯೋತ್ಪಾದಕ ಪ್ರಾಯೋಜಕ ಮತ್ತು ರಾಕ್ಷಸ ರಾಷ್ಟ್ರ ಪಾಕಿಸ್ತಾನಕ್ಕೆ ತನ್ನ 'ರಾಕ್ ಸೌಲ್ಡ್' ಬೆಂಬಲವನ್ನು ಬಹಿರಂಗವಾಗಿ ವಿಸ್ತರಿಸುವ ಹೇಳಿಕೆಯನ್ನು ನೀಡಿದೆ.

ಆಪರೇಷನ್ ಸಿಂಧೂರ್‌ನ ಪ್ರಮುಖ ಒಳನೋಟಗಳು

ಸರ್ಕಾರಿ ಮೂಲಗಳ ಪ್ರಕಾರ, ಭಾರತದೊಂದಿಗಿನ ಉದ್ವಿಗ್ನತೆಯ ನಡುವೆ ಪಾಕಿಸ್ತಾನವು ಚೀನಾದ ಶಸ್ತ್ರಾಸ್ತ್ರಗಳನ್ನು ಬಳಸಿದೆ ಮತ್ತು ಅದು ಇಸ್ಲಾಮಾಬಾದ್ನ ಅತಿದೊಡ್ಡ ರಕ್ಷಣಾ ಪೂರೈಕೆದಾರನಾಗಿದ್ದರಲ್ಲಿ ಆಶ್ಚರ್ಯವೇನಿಲ್ಲ. ಪಾಕಿಸ್ತಾನದ ಭಯೋತ್ಪಾದಕರು 25 ಭಾರತೀಯರು ಮತ್ತು ಒಬ್ಬ ನೇಪಾಳಿ ಸೇರಿದಂತೆ 26 ಅಮಾಯಕ ನಾಗರಿಕರನ್ನು ಕೊಂದ ಪಹಲ್ಗಾಮ್ ಭಯೋತ್ಪಾದಕ ದಾಳಿಗೆ ಪ್ರತೀಕಾರವಾಗಿ ಪಾಕಿಸ್ತಾನದಲ್ಲಿ ನಡೆಸುತ್ತಿರುವ ಭಯೋತ್ಪಾದಕ ಶಿಬಿರಗಳ ವಿರುದ್ಧ ಪ್ರಮುಖ ಭಯೋತ್ಪಾದನಾ ವಿರೋಧಿ ದಾಳಿ 'ಆಪರೇಷನ್ ಸಿಂಧೂರ್' ಅನ್ನು ಭಾರತ ಯೋಜಿಸಿದ್ದರಿಂದ ಬೀಜಿಂಗ್ ಪಾಕಿಸ್ತಾನಕ್ಕೆ ಬೆಂಬಲ ನೀಡಿದೆ.

# ಆರ್ಚರಿ ವಿಶ್ವಕಪ್ ಸ್ಟೇಜ್-2 ಭಾರತಕ್ಕೆ ಎರಡು ಕಂಚು



**ಶಾಂಘೈ, ಮೇ 11:** ಆರ್ಚರಿ ವಿಶ್ವಕಪ್ ಸ್ಟೇಜ್-2 ಸ್ಪರ್ಧೆಯಲ್ಲಿ ರವಿವಾರ ಭಾರತ 2 ಕಂಚಿನ ಪದಕ ಜಯಿಸಿದೆ. ಇದರೊಂದಿಗೆ ಒಟ್ಟು ಪದಕಗಳ ಸಂಖ್ಯೆ ಏಳಕ್ಕೆ ಏರಿದೆ. ದೀಪಿಕಾ ಕುಮಾರಿ ಮತ್ತು ಪಾರ್ಥ್ ಸಾಳುಂಕೆ ರಿಕರ್ವ್ ಸೆಮಿಫೈನಲ್ಸ್‌ನಲ್ಲಿ ಸೋತು ಕಂಚಿಗೆ ಸಮಾಧಾನಪಟ್ಟರು. ಕೊರಿಯಾದ ಲಿಮ್ ಶಿಯೋನ್ ಮತ್ತು ದೀಪಿಕಾ ಕುಮಾರಿ ನಡುವಿನ ಸೆಮಿಫೈನಲ್ ಸ್ಪರ್ಧೆ ಏಕಪಕ್ಷೀಯವಾಗಿ ಸಾಗಿತು. ಇದನ್ನು ದೀಪಿಕಾ 1-7 ಅಂತರದಿಂದ ಕಳೆದುಕೊಂಡರು. ಬಳಿಕ ಕಂಚಿನ ಪದಕದ ಪ್ಲೇ ಆಫ್ ಸ್ಪರ್ಧೆಯಲ್ಲಿ ಮತ್ತೋರ್ವ ಕೊರಿಯನ್ ಆರ್ಚರ್ ಕಾಂಗ್ ಚೆ ಯಂಗ್ಕಾಂ ಪೌಂಡ್ ವಿಭಾಗದಲ್ಲಿ 5 ಪದಕ ಗೆದ್ದು ಮಿಂಚಿದ ಒಂದೇ ದಿನದಲ್ಲಿ ಭಾರತ ತುಸು ನಿರಾಶಾದಾಯಕ ಪ್ರದರ್ಶನ ನೀಡಿತು. ಅವರನ್ನು 7-3ರಿಂದ ಮಣಿಸಿದರು. ಪುರುಷರ ವಿಭಾಗದ ಸೆಮಿಫೈನಲ್ಸ್‌ನಲ್ಲಿ ಪಾರ್ಥ್ ಸಾಳುಂಕೆ ಕೊರಿಯಾದ ಕಿಮ್ ವೂಜಿನ್ ವಿರುದ್ಧ 1-7ರಿಂದ ಸೋತರು. ಬಳಿಕ ಪ್ಲೇ ಆಫ್‌ನಲ್ಲಿ ಫ್ರಾನ್ಸ್‌ನ ಬಾಪ್ಟಿಸ್ ಅಡ್ಡಿಸ್ ಅವರನ್ನು 6-4ರಿಂದ ಪರಾಭವಗೊಳಿಸಿದರು.

# ವಿಶ್ವ ಚಾಂಪಿಯನ್ ಆಗಿ ಗುಕೇಶ್ ಮೊದಲ ಕ್ಲಾಸಿಕಲ್ ಸೋಲು



**ಬುಕಾರೆಸ್ಟ್, ಮೇ 11:** ಫ್ರೆಂಚ್ ಗ್ರ್ಯಾಂಡ್ಮಾಸ್ಟರ್ ಮ್ಯಾಕ್ಸಿಮ್ ವಾಚಿಯರ್-ಲಾಗ್ರೇವ್ (ಈಖಆಇ ರೇಟಿಂಗ್ 2723) ಸೂಪರ್‌ಬೆಟ್ ಕ್ಲಾಸಿಕ್ನ ನಾಲ್ಕನೇ ಸುತ್ತಿನಲ್ಲಿ ಹಾಲಿ ವಿಶ್ವ ಚಾಂಪಿಯನ್ ಡಿ ಗುಕೇಶ್ (2787) ಅವರನ್ನು ಸೋಲಿಸಿ, ಕ್ಲಾಸಿಕಲ್ ಸ್ವರೂಪದಲ್ಲಿ ಭಾರತೀಯ ಹದಿಹರೆಯದ ಆಟಗಾರನ ವಿರುದ್ಧ ತಮ್ಮ ಮೊದಲ ಜಯವನ್ನು ದಾಖಲಿಸಿದರು. ಇಬ್ಬರೂ ಕ್ಲಾಸಿಕಲ್ ಆಟಗಳಲ್ಲಿ ಈ ಹಿಂದೆ ಎರಡು ಬಾರಿ ಮುಖಾಮುಖಿಯಾಗಿದ್ದರು, ಎರಡೂ ಮುಖಾಮುಖಿಗಳು ಡ್ರಾದಲ್ಲಿ ಕೊನೆಗೊಂಡವು. ಆದಾಗ್ಯೂ, ಶನಿವಾರ, 2021 ರ ವಿಶ್ವ ಬ್ಲಿಟ್ಜ್ ಚಾಂಪಿಯನ್ ಗುಕೇಶ್ ಮಾಡಿದ ನಿರ್ಣಾಯಕ ಸ್ಥಾನಿಕ ದೋಷವನ್ನು ಲಾಭ ಮಾಡಿಕೊಂಡು ಪೂರ್ಣ ಪಾಯಿಂಟ್ ಗಳಿಸಿದರು ಮತ್ತು ವಿಶ್ವ ಚಾಂಪಿಯನ್ ಆದ ನಂತರ 18 ವರ್ಷದ ಯುವಕನ ಮೊದಲ ಕ್ಲಾಸಿಕಲ್ ಸೋಲಿಗೆ ಕಾರಣರಾದರು. ಅಸಮತೋಲಿತ ಪ್ಯಾದೆ ರಚನೆ ಮತ್ತು ಅವರ ತುಣುಕುಗಳ ನಡುವೆ ಸಾಮರಸ್ಯದ ಕೊರತೆಯನ್ನು ಎದುರಿಸಿದ ಗುಕೇಶ್, ಅವರ ಕ್ವೀನ್ಸೈಡ್ ಪ್ಯಾದೆಗಳು ಒತ್ತಡದಲ್ಲಿ ಕುಸಿದ ಕಾರಣ ಅರ್ಥಪೂರ್ಣ ರಕ್ಷಣೆಯನ್ನು ಸ್ಥಾಪಿಸಲು ಸಾಧ್ಯವಾಗಲಿಲ್ಲ. ಈ ಗೆಲುವು ವಾಚಿಯರ್-ಲಾಗ್ರೇವ್ ಅವರ ಮಹತ್ವದ ಹೇಳಿಕೆಯಾಗಿದ್ದು, ವಿಶ್ವ ಗಣ್ಯರಲ್ಲಿ ಅವರ ಅರ್ಹತೆಯನ್ನು ಮತ್ತೊಮ್ಮೆ ದೃಢಪಡಿಸಿದೆ, ಗುಕೇಶ್ ಉಳಿದ ಸುತ್ತುಗಳಿಗೆ ಮುಂಚಿತವಾಗಿ ಮತ್ತೆ ತಂಡವನ್ನು ಸೇರಲು ನೋಡುತ್ತಿದ್ದಾರೆ. ಮತ್ತೊಂದು ಮುಖಾಮುಖಿಯಲ್ಲಿ, ಭಾರತದ ಆರ್ ಪ್ರಜ್ಞಾನಂದ (2758) ರೊಮೇನಿಯನ್ ಗ್ರ್ಯಾಂಡ್‌ಮಾಸ್ಟರ್ ಬೊಗ್ಡಾನ್-ಡೇನಿಯಲ್ ಡೀಕ್ (2668) ಅವರನ್ನು ಡ್ರಾದಲ್ಲಿ ಅಂತ್ಯಗೊಳಿಸಿದರು.

ಕುತೂಹಲಕಾರಿಯಾಗಿ, ಕಳೆದ ವರ್ಷವೂ ಇದೇ ಸ್ಪರ್ಧೆಯಲ್ಲಿ ಇಬ್ಬರೂ ಡ್ರಾ ಮಾಡಿಕೊಂಡಿದ್ದರು, ಈ ಬಾರಿ ಬಣ್ಣಗಳು ವ್ಯತಿರಿಕ್ತವಾಗಿದ್ದವು.

# ಐಪಿಎಲ್ ಶೀಘ್ರವೇ ಪುನರಾರಂಭ ಬಿಸಿಸಿಐ ಆಯ್ಕೆಗಳ ಪರಿಶೀಲನೆ: ಶುಕ್ಲಾ



**ನವದೆಹಲಿ, ಮೇ 11:** ಇಂಡಿಯನ್ ಪ್ರೀಮಿಯರ್ ಲೀಗ್ (ಐಪಿಎಲ್) ತಾತ್ಕಾಲಿಕವಾಗಿ ಸ್ಥಗಿತಗೊಂಡ ನಂತರದ ಅನಿಶ್ಚಿತತೆಯ ನಡುವೆ, ಬಿಸಿಸಿಐ ಉಪಾಧ್ಯಕ್ಷ ರಾಜೀವ್ ಶುಕ್ಲಾ ಭಾನುವಾರ ಮಂಡಳಿಯು ಪರಿಸ್ಥಿತಿಯನ್ನು ಸಕ್ರಿಯವಾಗಿ ನಿರ್ಣಯಿಸುತ್ತಿದೆ ಮತ್ತು ಶೀಘ್ರದಲ್ಲೇ ಪರಿಷ್ಕೃತ ವೇಳಾಪಟ್ಟಿಯನ್ನು ಪ್ರಕಟಿಸುವ ಸಾಧ್ಯತೆಯಿದೆ ಎಂದು ಹೇಳಿದರು.

ಸುದ್ದಿಗಾರರೊಂದಿಗೆ ಮಾತನಾಡಿದ ಶುಕ್ಲಾ, : ಇನ್ನೂ ಯಾವುದೇ ನಿರ್ಧಾರ ತೆಗೆದುಕೊಂಡಿಲ್ಲ. ಬಿಸಿಸಿಐ ಅಧಿಕಾರಿಗಳು ಪ್ರಸ್ತುತ ಪರಿಸ್ಥಿತಿಯನ್ನು ಮೌಲ್ಯಮಾಪನ ಮಾಡುತ್ತಿದ್ದಾರೆ. ಪಂದ್ಯಾವಳಿಯನ್ನು ಒಂದು ವಾರದವರೆಗೆ ಸ್ಥಗಿತಗೊಳಿಸಲಾಗಿದೆ."

ಆಪರೇಷನ್ ಸಿಂಧೂರ್ ಹಿನ್ನೆಲೆಯಲ್ಲಿ ಶನಿವಾರ ಭಾರತ ಮತ್ತು ಪಾಕಿಸ್ತಾನದ ನಡುವೆ ತಿಳುವಳಿಕೆ ಬಂದಿರುವುದರಿಂದ, ಬಿಸಿಸಿಐ ಸೂಕ್ತ ಸಮಯದಲ್ಲಿ ಸೂಕ್ತ ನಿರ್ಧಾರ ತೆಗೆದುಕೊಳ್ಳುತ್ತದೆ ಎಂದು ಅವರು ದೃಢಪಡಿಸಿದರು.

"ಬಿಸಿಸಿಐ ಕಾರ್ಯದರ್ಶಿ ದೇವಜಿತ್ ಸೈಕಿಯಾ ಎಲ್ಲಾ ಪಾಲುದಾರರೊಂದಿಗೆ ನಿರಂತರ ಸಂಪರ್ಕದಲ್ಲಿದ್ದಾರೆ ಮತ್ತು ಐಪಿಎಲ್ ಆಡಳಿತ ಮಂಡಳಿಯ ಅಧ್ಯಕ್ಷರು (ಅರುಣ್ ಸಿಂಗ್ ಧುಮಾಲ್) ಫ್ರಾಂಚೈಸಿಗಳು ಸೇರಿದಂತೆ ಎಲ್ಲರೊಂದಿಗೆ ಸಮನ್ವಯ ಸಾಧಿಸುತ್ತಿದ್ದಾರೆ" ಎಂದು ಶುಕ್ಲಾ ಹೇಳಿದರು.

"ಸ್ಥಳಗಳ ಸಂಖ್ಯೆ ಮತ್ತು ಲಾಜಿಸ್ಟಿಕ್ ವ್ಯವಸ್ಥೆಗಳಂತಹ ಎಲ್ಲಾ ಅಂಶಗಳನ್ನು ರೂಪಿಸಲಾಗುತ್ತಿದೆ. ಆದರೆ ಖಚಿತವಾಗಿರಿ, ಐಪಿಎಲ್ ಶೀಘ್ರದಲ್ಲೇ ಪುನರಾರಂಭವಾಗಲಿದೆ" ಎಂದು ಅವರು ಭರವಸೆ ನೀಡಿದರು, ಪಂದ್ಯಾವಳಿಯನ್ನು ಆದಷ್ಟು ಬೇಗ ಪುನರಾರಂಭಿಸಲು ಎಲ್ಲಾ ಪ್ರಯತ್ನಗಳನ್ನು ಮಾಡಲಾಗುತ್ತಿದೆ ಎಂದು ಹೇಳಿದರು. ಈ ವಾರದ ಆರಂಭದಲ್ಲಿ ನಡೆಯುತ್ತಿರುವ ಕಾರ್ಯಾಚರಣೆಗೆ ಸಂಬಂಧಿಸಿದ ಹೆಚ್ಚಿದ ಉದ್ವಿಗ್ನತೆ ಮತ್ತು ಲಾಜಿಸ್ಟಿಕ್ ಸವಾಲುಗಳ ನಡುವೆ ಐಪಿಎಲ್ ಅನ್ನು ಸ್ಥಗಿತಗೊಳಿಸಲಾಯಿತು.



ಕತಾರ್‌ನ ದೋಹಾದಲ್ಲಿರುವ ಜಾಸಿಮ್ ಬಿನ್ ಹಮದ್ ಕ್ರೀಡಾಂಗಣದಲ್ಲಿ ಅಲ್-ಸಾದ್ ಮತ್ತು ಅಲ್-ದುಹೈಲ್ ನಡುವಿನ ಕತಾರ್ ಕಪ್ ಫೈನಲ್ ಫುಟ್‌ಬಾಲ್ ಪಂದ್ಯವನ್ನು ಗೆದ್ದ ನಂತರ ಪ್ರಶಸ್ತಿ ಪ್ರದಾನ ಸಮಾರಂಭದಲ್ಲಿ ಅಲ್-ಸಾದ್‌ನ ಆಟಗಾರರು ಟ್ರೋಫಿಯೊಂದಿಗೆ ಸಂಭ್ರಮಿಸಿದರು.

# ಕ್ರಿಕೆಟಿಗರು ನೂರ್ ಖಾನ್ ವಾಯುನೆಲೆಯಲ್ಲಿ ಭಾರತೀಯ ಸಶಸ್ತ್ರ ಪಡೆಗಳಿಂದ ಕ್ಷಿಪಣಿ ದಾಳಿ



**ಸಿಡ್ನಿ,ಮೇ 11:** ದಿ ಸಿಡ್ನಿ ಮಾರ್ನಿಂಗ್ ಹೆರಾಲ್ಡ್ ವರದಿಯ ಪ್ರಕಾರ, ಆಸ್ಟ್ರೇಲಿಯಾದ ನಾಲ್ವರು ಕ್ರಿಕೆಟಿಗರು - ಸೀನ್ ಅಬಾಟ್, ಬೆನ್ ದ್ವಾರ್ಶುಯಿಸ್, ಆಷ್ಟನ್ ಟರ್ನರ್ ಮತ್ತು ಮಿಚ್ ಓವನ್ - ಪಾಕಿಸ್ತಾನದಲ್ಲಿನ ಪರಿಸ್ಥಿತಿಯನ್ನು ಗಮನದಲ್ಲಿಟ್ಟುಕೊಂಡು ಚಾರ್ಟರ್ ಫ್ಲೈಟ್ ಮೂಲಕ ದುಬೈಗೆ ತೆರಳಲು ಪಾಕಿಸ್ತಾನದಿಂದ ಹೊರಟಿದ್ದರು. ಆಸ್ಟ್ರೇಲಿಯಾದ ನಾಲ್ವರು ಕ್ರಿಕೆಟಿಗರು ನೂರ್ ಖಾನ್ ವಾಯುನೆಲೆಯಿಂದ ದುಬೈಗೆ ಚಾರ್ಟರ್ ವಿಮಾನವನ್ನು ತೆಗೆದುಕೊಳ್ಳುತ್ತಿದ್ದರು.

ನೂರ್ ಖಾನ್ ವಾಯುನೆಲೆಯು ಭಾರತ ತನ್ನ ಕ್ಷಿಪಣಿ ದಾಳಿಯಿಂದ ನಾಶಪಡಿಸಿದ ವಾಯುನೆಲೆಗಳಲ್ಲಿ ಒಂದಾಗಿದೆ. ವರದಿಯ ಪ್ರಕಾರ, ಭಾರತವು ಕಿಂಗ್ಡಮ್ ಬರಲು ವಾಯುನೆಲೆಯನ್ನು ಸ್ಫೋಟಿಸುವ ಕೇವಲ ಮೂರು ಗಂಟೆಗಳ ಮೊದಲು ಸೀನ್ ಅಬಾಟ್, ಬೆನ್ ದ್ವಾರ್ಶುಯಿಸ್, ಆಷ್ಟನ್ ಟರ್ನರ್ ಮತ್ತು ಮಿಚ್ ಓವನ್ ಚಾರ್ಟರ್ ವಿಮಾನದಲ್ಲಿ ಹೊರಟರು.

"ಸೀನ್ ಮತ್ತು ಬೆನ್ ಈಗ ದುಬೈನಲ್ಲಿರುವುದರಿಂದ ನಿರಾಳರಾಗಿದ್ದಾರೆ. ಸಿಡ್ನಿಗೆ ಹಿಂತಿರುಗಲು ವಿಮಾನದಲ್ಲಿ ತಯಾರಿ ನಡೆಸುತ್ತಿರುವಾಗ ಅವರು ಹೋಟೆಲ್ನಲ್ಲಿ ವಿಶ್ರಾಂತಿ ಪಡೆಯುತ್ತಿದ್ದಾರೆ. ಕಳೆದ 24 ಗಂಟೆಗಳು ಅಥವಾ ಅದಕ್ಕಿಂತ ಹೆಚ್ಚು ಕಾಲ ಎಲ್ಲಾ ಆಟಗಾರರಿಗೆ ದೈಹಿಕವಾಗಿ ಮತ್ತು ಮಾನಸಿಕವಾಗಿ ಸವಾಲಿನದ್ದಾಗಿತ್ತು. ಮುಂದಿನ ಹಂತಗಳು ಅವರನ್ನು ಸಾಧ್ಯವಾದಷ್ಟು ಬೇಗ ಸುರಕ್ಷಿತವಾಗಿ ಮನೆಗೆ ತಲುಪಿಸುವುದು. ಕ್ರಿಕೆಟ್ ಆಟಕ್ಕಿಂತ ದೊಡ್ಡದಾದ ಪರಿಸ್ಥಿತಿಯಲ್ಲಿ ಕಠಿಣ ಸಂದರ್ಭಗಳಲ್ಲಿ ಆಟಗಾರರನ್ನು ಪಾಕಿಸ್ತಾನದಿಂದ ಬೇಗನೆ ಹೊರಗೆ ತರಲು ಪಿಎಸ್‌ಎಲ್ ಸಂಘಟಕರು ತಮ್ಮ ಕೈಲಾದಷ್ಟು ಪ್ರಯತ್ನಿಸಿದ್ದಾರೆ" ಎಂದು ಸೀನ್ ಅಬಾಟ್ ಮತ್ತು ಬೆನ್ ದ್ವಾರ್ಶುಯಿಸ್ ಅವರ ವ್ಯವಸ್ಥಾಪಕರಾಗಿರುವ ಪೀಟರ್ ಲೊವಿಟ್ ಹೇಳಿದರು.